ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

Volume: 01, Issue: 235 RNI Number : KNKAN/25/A2770 06-09-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :235 ರಾಯಚೂರು 06-09-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

ಒಂದಕ್ಕಿಂತ ಹೆಚ್ಚು ವೋಟರ್ ಐಡಿ ಹೊಂದಿದ್ದರೆ ಕ್ರಿಮಿನಲ್ ಕೇಸ್


ಬೆಂಗಳೂರು, ಸೆ.5- ಮತದಾರರ ಪಟ್ಟಿಯಲ್ಲಿ ನಕಲಿ ಹೆಸರು, ದ್ವಿಮುಖ ನೋಂದಣಿ ಅಥವಾ ಒಂದಕ್ಕಿಂತ ಹೆಚ್ಚು ಕಡೆ ಹೆಸರು ಹೊಂದಿರುವ ಪ್ರಕರಣಗಳು ಪತ್ತೆಯಾದರೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಅಪರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಬೆಂಗಳೂರು ದಕ್ಷಿಣ ನಗರ ಪಾಲಿಕೆ ಆಯುಕ್ತ ಕೆ.ಎನ್. ರಮೇಶ್ ಎಚ್ಚರಿಕೆ ನೀಡಿದ್ದಾರೆ.

ಬೆಂಗಳೂರು ದಕ್ಷಿಣ ನಗರ ಜಿಲ್ಲಾ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ನಡೆದ ಸಭೆಯಲ್ಲಿ ಅವರು ಈ ಸೂಚನೆ ನೀಡಿದರು.

ಚುನಾವಣಾ ಆಯೋಗದ ಪರಿಷ್ಕೃತ ವೇಳಾಪಟ್ಟಿಯಂತೆ ಆಗಸ್ಟ್ 24ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗಿದ್ದು, ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಪಟ್ಟಿಗಳನ್ನು ವಿತರಿಸಲಾಗಿದೆ. ಸೆಪ್ಟೆಂಬರ್ 3ರ ಮಾಹಿತಿಯಂತೆ ನಮೂನೆ 9, 10, 11 ಹಾಗೂ ಭಾವಚಿತ್ರರಹಿತ ಕರಡು ಮತದಾರರ ಪಟ್ಟಿಯ ಮಾಹಿತಿಯನ್ನು ಪೆನ್‌ಡ್ರೈವ್ ಮೂಲಕ ಪಕ್ಷಗಳ ಪ್ರತಿನಿಧಿಗಳಿಗೆ ನೀಡಲಾಗಿದೆ.

237 ಹೆಚ್ಚುವರಿ ಎಇಆರ್‌ಒಗಳ ನೇಮಕ

ವಿಶೇಷ ಪರಿಷ್ಕರಣೆಗೆ ಸಂಬಂಧಿಸಿದ ವಿಚಾರಣೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು 237 ಹೆಚ್ಚುವರಿ ಸಹಾಯಕ ಮತದಾರರ ನೋಂದಣಾಧಿಕಾರಿಗಳನ್ನು (ಎಇಆರ್‌ಒ) ನೇಮಕ ಮಾಡಲಾಗಿದೆ. ಅವರಿಗೆ ಈಗಾಗಲೇ ತರಬೇತಿ ನೀಡಲಾಗಿದ್ದು, ದಿನಕ್ಕೆ ಗರಿಷ್ಠ 50ರಿಂದ 60 ಪ್ರಕರಣಗಳ ವಿಚಾರಣೆ ನಡೆಸುವಂತೆ ಸೂಚಿಸಲಾಗಿದೆ.



ನೋಟಿಸ್ ಪಡೆದ ಮತದಾರರಿಗೆ ವಿಚಾರಣೆಗೆ ಹಾಜರಾಗಲು ಕನಿಷ್ಠ ಏಳು ದಿನಗಳ ಕಾಲಾವಕಾಶ ನೀಡಬೇಕು. ಮೊದಲ ನೋಟಿಸ್‌ಗೆ ಹಾಜರಾಗಲು ಸಾಧ್ಯವಾಗದವರಿಗೆ ಅಗತ್ಯವಿದ್ದಲ್ಲಿ ಎರಡನೇ ನೋಟಿಸ್ ನೀಡಿ ವಿಚಾರಣೆ ನಡೆಸಬೇಕು ಎಂದು ರಮೇಶ್ ಸೂಚಿಸಿದರು.

ವೃದ್ಧರು, ಅನಾರೋಗ್ಯ ಪೀಡಿತರಿಗೆ ಮನೆ ಬಳಿಯೇ ಪರಿಶೀಲನೆ

ಆಸ್ಪತ್ರೆಗೆ ದಾಖಲಾಗಿರುವವರು, 80 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನ ಮತದಾರರನ್ನು ಕಚೇರಿಗೆ ಕರೆಸುವ ಬದಲು ಬಿಎಲ್‌ಒ ಅಥವಾ ಎಇಆರ್‌ಒಗಳು ಅವರ ಮನೆ ಅಥವಾ ಆಸ್ಪತ್ರೆಗೆ ತೆರಳಿ ಪರಿಶೀಲನೆ ನಡೆಸಬೇಕು ಎಂದು ಸೂಚಿಸಲಾಗಿದೆ.

ವಿಚಾರಣೆಗೆ ಹಾಜರಾಗುವ ಮತದಾರರು ಸಲ್ಲಿಸುವ ದಾಖಲೆಗಳಿಗಾಗಿ ಹಿಯರಿಂಗ್ ರಿಜಿಸ್ಟರ್ ನಿರ್ವಹಿಸಬೇಕು. ದಾಖಲೆಗಳಿಗೆ ಹಿಂಬರಹ ನೀಡಿ ಸಿಸ್ಟಮ್‌ನಲ್ಲಿ ಅಪ್‌ಲೋಡ್ ಮಾಡಬೇಕು. ವಿಚಾರಣೆಯ ದಿನಾಂಕ, ಸಮಯ ಹಾಗೂ ಸ್ಥಳವನ್ನು ನೋಟಿಸ್‌ನಲ್ಲಿ ಸ್ಪಷ್ಟವಾಗಿ ನಮೂದಿಸುವುದು ಕಡ್ಡಾಯ ಎಂದು ಅಧಿಕಾರಿಗಳಿಗೆ ಸೂಚಿಸಲಾಗಿದೆ.

ದ್ವಿಮುಖ ನೋಂದಣಿಗೆ ಕಠಿಣ ಕ್ರಮ

ಒಬ್ಬ ಮತದಾರನ ಹೆಸರು ಕರ್ನಾಟಕದ ಜೊತೆಗೆ ಬೇರೆ ರಾಜ್ಯದಲ್ಲಿಯೂ ಅಥವಾ ಒಂದಕ್ಕಿಂತ ಹೆಚ್ಚು ಮತದಾರರ ಪಟ್ಟಿಗಳಲ್ಲಿಯೂ ಇರುವುದಾಗಿ ಕಂಡುಬಂದರೆ ಪ್ರಜಾಪ್ರತಿನಿಧಿ ಕಾಯ್ದೆಯ ಕಲಂ 31ರಡಿ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ.

ಅದೇ ರೀತಿ ಫಾರ್ಮ್-6 ಮತ್ತು ಫಾರ್ಮ್-8ರ ಅರ್ಜಿಗಳನ್ನು ಮರುಪರಿಶೀಲಿಸಿ, ಅರ್ಹ ಪ್ರಕರಣಗಳನ್ನು ಮಾತ್ರ ಪರಿಗಣಿಸುವಂತೆ ಸೂಚಿಸಲಾಗಿದೆ.

ವಾರ್ಡ್‌ವಾರು ಜಾಗೃತಿ ಅಭಿಯಾನ

ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ಪ್ರತಿ ವಾರ್ಡ್‌ಗೆ ಒಂದರಂತೆ ಧ್ವನಿವರ್ಧಕ ಅಳವಡಿಸಿದ ಆಟೋಗಳ ಮೂಲಕ ಬೆಳಗ್ಗೆ ಮತ್ತು ಸಂಜೆ ಪ್ರಚಾರ ನಡೆಸಲು ತೀರ್ಮಾನಿಸಲಾಗಿದೆ. ಶಾಲಾ-ಕಾಲೇಜುಗಳು, ವೃತ್ತಗಳು ಹಾಗೂ ಜನನಿಬಿಡ ಪ್ರದೇಶಗಳಲ್ಲಿ ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಬ್ಯಾನರ್‌ಗಳ ಮೂಲಕವೂ ಜಾಗೃತಿ ಮೂಡಿಸಲಾಗುತ್ತದೆ.

ಸಭೆಯಲ್ಲಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಬಿಎಲ್‌ಒಗಳ ಕಾರ್ಯವೈಖರಿ, ವಿಳಾಸಗಳಲ್ಲಿನ ಲೋಪದೋಷಗಳು ಹಾಗೂ ಕ್ಷೇತ್ರ ಭೇಟಿಗೆ ಸಂಬಂಧಿಸಿದಂತೆ ಹಲವು ದೂರುಗಳನ್ನು ಸಲ್ಲಿಸಿದರು. ಈ ಬಗ್ಗೆ ಸ್ಥಳ ಪರಿಶೀಲನೆ ನಡೆಸಿ ತಕ್ಷಣ ಕ್ರಮ ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ರಮೇಶ್ ಸೂಚಿಸಿದರು. ಸಭೆಯಲ್ಲಿ ಅಪರ ಆಯುಕ್ತ ರಾಚಪ್ಪ, ಚುನಾವಣಾ ವಿಭಾಗದ ತಹಶೀಲ್ದಾರ್ ರಶ್ಮಿ ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಶಿಕ್ಷಕರು ಸಮಾಜದ ಸಾಧನೆಗೆ ಮಾರ್ಗದರ್ಶಕರು: ಸಚಿವ ಡಾ.ಅಜಯ್ ಧರ್ಮಸಿಂಗ್



ರಾಯಚೂರು.ಸೆ. 5

ಜಗತ್ತಿನಲ್ಲಿ ನನ್ನನ್ನು ರಾಷ್ಟ್ರಪತಿಯಾಗಿ ನೆನಪಿಸಿಕೊಳ್ಳುವುದಕ್ಕಿಂತ, ಒಬ್ಬ ಶಿಕ್ಷಕನಾಗಿ ನೆನಪಿಸಿಕೊಳ್ಳುವುದು ಅತ್ಯಂತ ಸೂಕ್ತ'' ಎಂದು ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ಮಹತ್ವದ ಸಂದೇಶವನ್ನು ನೀಡಿದ್ದಾರೆ ಎಂದು ಸಣ್ಣ ನೀರಾವರಿ. ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಅಜಯ್ ಧರ್ಮಸಿಂಗ್ ಹೇಳಿದರು.

ಅವರು ಶನಿವಾರ ಜಿಲ್ಲಾಡಳಿತ. ಜಿಲ್ಲಾ ಪಂಚಾಯತ. ಮಹಾನಗರ ಪಾಲಿಕೆ ಹಾಗೂ ಶಾಲಾ ಶಿಕ್ಷಣ ಇಲಾಖೆ ರಾಯಚೂರು ಇವರ ಸಹಯೋಗದಲ್ಲಿ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ 139 ನೇ ಜನ್ಮದಿನೋತ್ಸವ ಹಾಗೂ ರಾಯಚೂರು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಶಿಕ್ಷಕರ ದಿನಾಚರಣೆ ಹಾಗೂ ಶಿಕ್ಷಕರ ಪ್ರಶಸ್ತಿ ಪ್ರಧಾನ ಸಮಾರಂಭ 2026-27 ನೇ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ವೈದ್ಯರು ಅನೇಕ ರೋಗಿಗಳಿಗೆ ಚಿಕಿತ್ಸೆ ನೀಡಬಹುದು, ಎಂಜಿನಿಯರ್‌ಗಳು ಹಲವು ಸೇತುವೆ ಮತ್ತು ಕಟ್ಟಡಗಳನ್ನು ನಿರ್ಮಿಸಬಹುದು, ವಕೀಲರು ಅನೇಕ ಸಮಸ್ಯೆಗಳನ್ನು ಬಗೆಹರಿಸಬಹುದು, ವಿಜ್ಞಾನಿಗಳು ಹೊಸ ಆವಿಷ್ಕಾರಗಳನ್ನು ಮಾಡಬಹುದು. ಆದರೆ ಇವರೆಲ್ಲರ ಜೀವನದಲ್ಲೂ ಅವರನ್ನು ಮುನ್ನಡೆಸಿದ ಒಬ್ಬ ಶಿಕ್ಷಕ ಇದ್ದೇ ಇರುತ್ತಾರೆ. ''ಪ್ರತಿಯೊಬ್ಬರ ಸಾಧನೆಯ ಹಿಂದೆ ಒಬ್ಬ ಶಿಕ್ಷಕನ ಮಾರ್ಗದರ್ಶನವಿದೆ ಎಂಬುದನ್ನು ನಾವು ಅರ್ಥಮಾಡಿಕೊಳ್ಳಬೇಕು'' ಎಂದು ಅವರು ಹೇಳಿದರು.

ಮನುಷ್ಯನ ಜೀವನದಲ್ಲಿ ಗುರುಗಳ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಮುಂದೆ ಗುರಿ ಹಿಂದೆ ಗುರು ಇದ್ದರೆ ಜೀವನದಲ್ಲಿ ಯಾವುದೇ ಸಾಧನೆಯನ್ನು ಮಾಡಬಹುದು ಎಂದು ಸಚಿವರು ತಿಳಿಸಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ನೀಡಿದ ''ಶಿಕ್ಷಣ, ಸಂಘಟನೆ ಮತ್ತು ಹೋರಾಟ'' ಎಂಬ ಸಂದೇಶವನ್ನು ಉಲ್ಲೇಖಿಸಿದ ಅವರು, ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುವ ಅಗತ್ಯವಿದೆ ಎಂದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾಗಿ ಅಧಿಕಾರ

3 ನೇ ಪುಟಕ್ಕೆ

ಜನರ ಬಳಿಗೆ ಆಡಳಿತ – ಜನರ ಸಮಸ್ಯೆಗಳಿಗೆ ತ್ವರಿತ ಪರಿಹಾರ – ಇದೇ ಪ್ರಜಾಸೇವೆಯ ಆಶಯ-ದದ್ದಲ್

ರಾಯಚೂರು,ಸೆ.05-

ಇಂದು ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಯಾಪಲದಿನ್ನಿ ಗ್ರಾಮದಲ್ಲಿ ಪ್ರಜಾಸೇವಾ ಸೇವೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಮೊದಲ ಸಭೆ ನಡೆಸಲಾಯಿತು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದು, ಗ್ರಾಮಸ್ಥರು ತಮ್ಮ ಸಮಸ್ಯೆಗಳು ಹಾಗೂ ಬೇಡಿಕೆಗಳನ್ನು ನೇರವಾಗಿ ಸಲ್ಲಿಸಿದರು.

ಒಟ್ಟು 475 ಅರ್ಜಿಗಳು ಸ್ವೀಕೃತವಾಗಿದ್ದು, ಈ ಪೈಕಿ 423



ಅರ್ಜಿಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಲ್ಪಿಸಿ, ಅರ್ಜಿಗಳನ್ನು ವಿಲೇವಾರಿ ಮಾಡಲಾಯಿತು. ಉಳಿದ 52 ಅರ್ಜಿಗಳು ಬಾಕಿ ಇದ್ದು, ಅವುಗಳನ್ನು ಸಂಬಂಧಿಸಿದ ಇಲಾಖೆಗಳ ಮೂಲಕ ತ್ವರಿತವಾಗಿ ಪರಿಶೀಲಿಸಿ ಪರಿಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.

ಸ್ಥಳದಲ್ಲಿಯೇ ಪರಿಹರಿಸಲಾದ 423 ಅರ್ಜಿಗಳಲ್ಲಿ ವಿವಿಧ ಗ್ಯಾರಂಟಿ ಯೋಜನೆಗಳ ಸೌಲಭ್ಯಗಳು, ಕಾರ್ಮಿಕರ ಕಾರ್ಡ್, ವೃದ್ಧಾಪ್ಯ ಪಿಂಚಣಿ, ಆರೋಗ್ಯ ಕಾರ್ಡ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ (), ಜೆಸ್ಕಾಂ, ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳ ಸಮಸ್ಯೆಗಳು ಹಾಗೂ ಅರ್ಜಿಗಳು ಒಳಗೊಂಡಿದ್ದವು.

ಜನರ ಸಮಸ್ಯೆಗಳನ್ನು ನೇರವಾಗಿ ಆಲಿಸಿ, ಸರ್ಕಾರದ ಯೋಜನೆಗಳು ಮತ್ತು ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ಹಾಗೂ ಯಾವುದೇ ಸಮಸ್ಯೆಗಳಿಗೆ ವಿಳಂಬವಾಗದಂತೆ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಲಾಯಿತು.

ದಲಿತರು ಅಟ್ರಾಸಿಟಿ ಪ್ರಕರಣಗಳನ್ನು ಕಡಿಮೆ ಮಾಡಿ ಸಾಮರಸ್ಯದಿಂದ ಬದುಕಬೇಕು: ಸಚಿವ ಕೆ.ಹೆಚ್ ಮುನಿಯಪ್ಪ

ರಾಯಚೂರುಸಸೆ.5-

ಜಿಲ್ಲೆಯಲ್ಲಿ ಶೇ 50 ರಷ್ಟು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಸಮುದಾಯವರು ವಾಸವಾಗಿದ್ದು, ಮೇಲ್ಜಾತಿಯವರ ಜೊತೆ ಸಾಮರಸ್ಯದಿಂದ ಜೀವನ ನಡೆಸಬೇಕು. ಪ್ರತಿಯೊಂದಕ್ಕೂ ಜಗಳ ಮಾಡದೇ ಆದಷ್ಟು ಅಟ್ರಾಸಿಟಿ ಕೇಸ್ ಕಡಿಮೆ ಮಾಡಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಸಚಿವ ಕೆ. ಹೆಚ್ ಮುನಿಯಪ್ಪ ಸಲಹೆ ನೀಡಿದರು.

ನಗರದ ಹೊರವಲಯದ ಯಕ್ಲಾಸಪೂರು ಬಡಾವಣೆಯ ಜಿಲ್ಲಾಡಳಿತ ಭವನದಲ್ಲಿ ದಲಿತ ಮುಖಂಡರ, ಸಾರ್ವಜನಿಕರ ಜೊತೆ ಕುಂದು ಕೊರತೆ ಸಭೆಯಲ್ಲಿ ಮಾತನಾಡಿದ ಅವರು,



ರಾಯಚೂರು ಜಿಲ್ಲೆಯಲ್ಲಿ ಹೆಚ್ಚಾಗಿ ಎಸ್ ಸಿ,ಎಸ್ ಟಿ ಸಮುದಾಯದವರಿದ್ದರೂ, ಸಾಮರಸ್ಯದ ಕೊರತೆ ಎದ್ದು ಕಾಣುತ್ತಿದೆ. ಬೇರೆ ಬೇರೆ ಜಿಲ್ಲೆಗಳಲ್ಲಿ ಮೇಲ್ಜಾತಿಯವರಿಂದ ದೌರ್ಜನ್ಯ ನಡೆಯುತ್ತಿದೆ. ಅಲ್ಲಿ ವಾಲ್ಮೀಕಿ ಸಮುದಾಯದವರು ನಮ್ಮ ಬೆನ್ನಿಗೆ ನಿಲ್ಲುತ್ತಾರೆ. ಆದರೆ ಈ ಭಾಗದಲ್ಲಿ ಪರಿಶಿಷ್ಟ ಜಾತಿಗಳ ಜನರ ಮೇಲೆ ವಾಲ್ಮೀಕಿ ಸಮುದಾಯವರಿಂದ ದೌರ್ಜನ್ಯಕ್ಕೊಳಗಾದ ಘಟನೆಗಳು ನಡೆಯುತ್ತಿರುವುದು ಖೇದಕರ ಸಂಗತಿ. ಈ ಭಾಗದ ವಾಲ್ಮೀಕಿ ಸಮುದಾಯದ ಜನಪ್ರತಿನಿಧಿಗಳು ಸಾಮರಸ್ಯದ ಸಭೆಗಳು ನಡೆಸಬೇಕು.

ದಲಿತಪರ ಹೋರಾಟಗಾರರು, ಹಿರಿಯ ಮುಖಂಡರುಗಳು ದಲಿತರಿಗೆ ಅನ್ಯಾಯವಾದಾಗ ನ್ಯಾಯಕ್ಕಾಗಿ ಹೋರಾಟ ಮಾಡುವುದು ಸರಿಯಿದೆ. ಆದರೆ ಹೋರಾಟವೇ ಜೀವನವಾಗಬಾರದು. ಕುಟುಂಬ ಬಗ್ಗೆಯೂ ಕಾಳಜಿವಹಿಸಬೇಕು, ಉನ್ನತ ಶಿಕ್ಷಣದಿಂದ ಉದ್ಯೋಗ ಪಡೆದು ಸಮಾಜದ ಮುಖ್ಯವಾಹಿನಿಗೆ ಬರಲು ಪ್ರಯತ್ನ ನಡೆಸಬೇಕು ಎಂದು ಯುವಕರಿಗೆ ಸಲಹೆ ನೀಡಿದರು.

ಜಿಲ್ಲೆಯಲ್ಲಿರುವ ಅನೇಕ ವಸತಿ ನಿಲಯಗಳ ಕಟ್ಟಡಗಳು ಶಿಥಿಲಗೊಂಡಿವೆ ಎಂಬ ದೂರುಗಳಿದ್ದು, ಗುಣಮಟ್ಟದ ಊಟ, ಸ್ವಚ್ಛ ಪರಿಸರ, ಮೂಲಸೌಕರ್ಯ ಸರಿಯಾಗಿ ಸಿಗುತ್ತಿಲ್ಲ ಎಂಬ ದೂರುಗಳಿದ್ದು ಒಂದು ತಿಂಗಳ ಒಳಗೆ ಪರಿಶೀಲಿಸಬೇಕು, ವಸತಿ ಶಾಲೆಗಳ ವಾಸ್ತವ ಸ್ಥಿತಿ ಪರಿಶೀಲಿಸಿ ಸೌಲಭ್ಯಗಳನ್ನು ಉನ್ನತೀಕರಿಸಬೇಕು ಎಂದು ಸಲಹೆ ನೀಡಿದರು. ಇದೇ ವೇಳೆ ಸಂಘ ಸಂಸ್ಥೆಗಳಿಂದ ಮನವಿ ಪತ್ರ ಸ್ವೀಕರಿಸಿ ಮುಂದಿನ ದಿನಗಳಲ್ಲಿ ಪರಿಶೀಲಿಸಿ ಪರಿಹಾರ ಕಲ್ಪಿಸಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ಮಾಜಿ ಸಚಿವ ಎನ್ ಎಸ್ ಬೋಸರಾಜು, ಶಾಸಕರಾದ

3 ನೇ ಪುಟಕ್ಕೆ

ಶ್ರೀರಾಮನಗರದಲ್ಲಿ ಸಂಭ್ರಮದ ಶಿಕ್ಷಕರ ದಿನಾಚರಣೆ



ಶ್ರೀರಾಮನಗರ,ಸೆ.05-

ಶ್ರೀರಾಮನಗರದ ಚಿಲುಕೂರಿ ನಾಗೇಶ್ವರ ರಾವ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿದ್ಯಾರ್ಥಿಗಳಿದ ಸಂಭ್ರಮದ ಶಿಕ್ಷಕರ ದಿನಾಚರಣೆ ಶ್ರೀರಾಮನಗರದ ಚಿಲುಕೂರಿ ನಾಗೇಶ್ವರ ರಾವ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ದಿನಾಂಕ 05.09.2026ರಂದು ಶಿಕ್ಷಕರ ದಿನಾಚರಣೆ ಅಂಗವಾಗಿ ವಿದ್ಯಾರ್ಥಿಗಳೇ ಕಾರ್ಯಕ್ರಮವನ್ನು ರೂಪಿಸಿ ನಡೆಸಿಕೊಟ್ಟರು.

ವಿದ್ಯಾರ್ಥಿಗಳು ಎಲ್ಲಾ ಶಿಕ್ಷಕರಿಗೆ ಪ್ರೀತಿಯಿಂದ ಪೆನ್ನುಗಳನ್ನು ಉಡುಗೊರೆಯಾಗಿ ನೀಡುವುದರ ಮೂಲಕ ಕಾರ್ಯಕ್ರಮಕ್ಕೆ ಸ್ವಾಗತಿಸಿದರು. ಸರ್ವೆಪಲ್ಲಿ ರಾಧಾಕೃಷ್ಣನ್, ಜ್ಯೋತಿಬಾ ಫುಲೆ ಹಾಗೂ ಸಾವಿತ್ರಿಬಾ ಫುಲೆ ಅವರ ಭಾವಚಿತ್ರಗಳಿಗೆ ನಮಿಸುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಾಯಿತು. ಪ್ರಾರಂಭದಲ್ಲಿ

3 ನೇ ಪುಟಕ್ಕೆ

ಮಾನ್ವಿಯಲ್ಲಿ ಪ್ರಜಾಸೇವೆ ಆಂದೋಲನ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ

ಸಾರ್ವಜನಿಕರ ಕುಂದುಕೊರತೆಗಳನ್ನು ಸ್ಥಳದಲ್ಲೇ ಆಲಿಸಿ, ತ್ವರಿತವಾಗಿ ಪರಿಹಾರ: ಸಚಿವ ಡಾ.ಅಜಯ್ ಧರ್ಮಸಿಂಗ್

ರಾಯಚೂರು ಸೆ 05

ಸರ್ಕಾರದ ಮಹತ್ವಾಕಾಂಕ್ಷೆಯ ಪ್ರಜಾಸೇವೆ ಆಂದೋಲನದ ಕಾರ್ಯಕ್ರಮವು ಕೇವಲ ರಾಜಧಾನಿ ಬೆಂಗಳೂರು ನಗರಕ್ಕೆ ಮಾತ್ರ ಸೀಮಿತವಾಗದೆ, ರಾಜ್ಯದ ಪ್ರತಿಯೊಂದು ಜಿಲ್ಲಾ ಹಾಗೂ ತಾಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಆಡಳಿತ ವ್ಯವಸ್ಥೆಯನ್ನು ಜನರಿಗೆ ಮತ್ತಷ್ಟು ಹತ್ತಿರವಾಗಿಸುವುದಾಗಿದೆ. ಸಾರ್ವಜನಿಕರ ಕುಂದುಕೊರತೆಗಳನ್ನು ಸ್ಥಳದಲ್ಲೇ ಆಲಿಸಿ, ತ್ವರಿತವಾಗಿ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಈ ವಿನೂತನ ಜನಪರ ಕಾರ್ಯಕ್ರಮಕ್ಕೆ ಚಾಲನೆ ಇಂದು ನೀಡಲಾಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ರಾಯಚೂರು ಜಿಲಾ ಉಸ್ತುವಾರಿ ಸಚಿವರಾದ ಡಾ.ಅಜಯ್ ಧರ್ಮಸಿಂಗ್‌ಅವರು ಹೇಳಿದರು.

ಜಿಲ್ಲೆಯ ಮಾನ್ವಿ ಪಟ್ಟಣದ ಭಾಷುಮಿಯ ಸಾಹುಕಾರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ರಾಯಚೂರು ಇವರ ವತಿಯಿಂದ ತಾಲೂಕು ಮಟ್ಟದ ಪ್ರಜಾಸೇವೆ ಆಂದೋಲನ -2026ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆಡಳಿತ ವ್ಯವಸ್ಥೆಯು ಜನಸಾಮಾನ್ಯರ ಬಾಗಿಲಿಗೆ ತೆರಳಿ ಅವರ ಕಷ್ಟ-ಸುಖಗಳಲ್ಲಿ ಭಾಗಿದಾರರಾಗಬೇಕು ಮತ್ತು ಜನರ ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂಬುದು ಸರ್ಕಾರದ ಮುಖ್ಯ ಗುರಿಯಾಗಿದೆ. ಕಲ್ಯಾಣ ಕರ್ನಾಟಕ ಭಾಗ ಹಿಂದುಳಿದಿರುವಿಕೆಯ ಹಣೆಪಟ್ಟಿಯನ್ನು ಕಳಚಲು ರಾಯಚೂರು ಮತ್ತು ಯಾದಗಿರಿ ಜಿಲ್ಲೆಗಳನ್ನು ಮಹತ್ವಾಕಾಂಕ್ಷೆಯ ಜಿಲ್ಲೆಗಳನ್ನಾಗಿ ಘೋಷಿಸಲಾಗಿದ್ದು, ಈ ನಿಟ್ಟಿನಲ್ಲಿ ಮಾನವಿ ತಾಲೂಕಿನಿಂದ



ಈ ಅಭಿಯಾನವನ್ನು ಆರಂಭಿಸಲಾಗಿದೆ ಎಂದರು.

ಈ ಪ್ರಜಾಸೇವಾ ಕಾರ್ಯಕ್ರಮವು ಕೇವಲ ಒಂದು ದಿನಕ್ಕೆ ಸೀಮಿತವಾಗಿಲ್ಲದೆ, ಪ್ರತಿ ಶನಿವಾರವೂ ನಿರಂತರವಾಗಿ ಜರುಗಲಿದೆ. ಜಿಲ್ಲಾಧಿಕಾರಿಗಳು, ತಾಲೂಕು ಮಟ್ಟದ ಶಾಸಕರು ಮತ್ತು ಸಂಬಂಧಿತ ಅಧಿಕಾರಿಗಳು ಇದರಲ್ಲಿ ಸಕ್ರಿಯವಾಗಿ ಭಾಗವಹಿಸಲಿದ್ದಾರೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವನಾಗಿ ನಾನು ಪ್ರತಿ ತಿಂಗಳ ಮೊದಲನೇ ಮತ್ತು ಮೂರನೇ ವಾರದ ಶನಿವಾರಗಳಂದು ನಿರ್ದಿಷ್ಟ ತಾಲೂಕುಗಳಲ್ಲಿ ಖುದ್ದಾಗಿ ಉಪಸ್ಥಿತರಿದ್ದು, ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಲಿದ್ದೇನೆ. ಉಳಿದ ಶನಿವಾರಗಳಲ್ಲಿ ಸ್ಥಳೀಯ ಶಾಸಕರು ಹಾಗೂ ತಾಲೂಕು ಮಟ್ಟದ ಆಡಳಿತಾಧಿಕಾರಿಗಳು ಈ ಕಾರ್ಯಕ್ರಮ ಮುನ್ನಡೆಸಲಿದ್ದಾರೆ. ಕೇವಲ ಮಾನವಿ ಅಷ್ಟೇ ಅಲ್ಲದೆ, ಒಟ್ಟಾರೆ ಕರ್ನಾಟಕ ರಾಜ್ಯದ ಎಲ್ಲಾ 224 ಕ್ಷೇತ್ರಗಳಲ್ಲೂ ಈ ಜನಪರ ಆಡಳಿತ ಕಾರ್ಯಕ್ರಮವು ಅತ್ಯಂತ ವ್ಯವಸ್ಥಿತವಾಗಿ ಜಾರಿಯಲ್ಲಿದೆ ಎಂದರು.

ಜನಪರ ಯೋಜನೆಗಳು: ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ ಯೋಜನೆ, ಯುವನಿಧಿ ಸೇರಿದಂತೆ ವಿವಿಧ ಯೋಜನೆಗಳ ಮೂಲಕ ಜನಸಾಮಾನ್ಯರಿಗೆ ನೆರವು ನೀಡಲಾಗುತ್ತಿದೆ. ಪಿಂಚಣಿ ಹಾಗೂ ಪಡಿತರ ಚೀಟಿಗಳ ವಿತರಣೆಯೂ ಸೇರಿದಂತೆ ಹಲವು ಸೌಲಭ್ಯಗಳನ್ನು ಒದಗಿಸಲಾಗಿದೆ ಎಂದರು.

ರಾಯಚೂರು ಜಿಲ್ಲೆಯ ಅಭಿವೃದ್ಧಿಗೆ ಒತ್ತು: ರಾಜ್ಯದಲ್ಲಿ ಭೀಕರ ಬರಗಾಲವಿದ್ದ ಸಂದರ್ಭದಲ್ಲಿಯೂ ಸರ್ಕಾರವು ರೈತರ ಸಂಕಷ್ಟಕ್ಕೆ ಸ್ಪಂದಿಸಿದೆ. ರಾಯಚೂರು ಜಿಲ್ಲೆಯ ಐದು ತಾಲೂಕುಗಳು ಬರಪೀಡಿತ ಎಂದು ಈಗಾಗಲೇ ಘೋಷಣೆಯಾಗಿದ್ದು, ಉಳಿದ 3 ತಾಲೂಕುಗಳನ್ನೂ ಸಹ ಬರಪೀಡಿತವೆಂದು ಘೋಷಿಸುವಂತೆ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹೇಳಿದರು.

18 ಕೋಟಿ ರೂಪಾಯಿ ಅನುದಾನ ಹಂಚಿಕೆ: ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ವತಿಯಿಂದ ಹಲವು ಕೆಲಸ ಕಾರ್ಯಗಳನ್ನು ಕೈಗೊಳ್ಳಲಾಗಿದೆ. ಕಳೆದ ಮೂರು ವರ್ಷಗಳಲ್ಲಿ ಒಟ್ಟು 18,000 ಕೋಟಿ ರೂಪಾಯಿಗಳ ಅನುದಾನವನ್ನು ನಮ್ಮ ಭಾಗಕ್ಕೆ ಹಂಚಿಕೆ ಮಾಡಲಾಗಿದ್ದು, 2023-24ರಲ್ಲಿ 3 ಕೋಟಿ, 2024-25ರಲ್ಲಿ 5 ಕೋಟಿ, 2025-26ರಲ್ಲಿ 5 ಕೋಟಿ ಹಾಗೂ ಪ್ರಸ್ತುತ ಸಾಲಿನಲ್ಲಿ 5 ಕೋಟಿ ರೂ.ಗಳನ್ನು ನೀಡುವ ಮೂಲಕ ನುಡಿದಂತೆ ನಡೆಯುವ ಸರ್ಕಾರದ ಬದ್ಧತೆಯನ್ನು ಇದು ತೋರಿಸುತ್ತದೆ ಎಂದರು.

ಈ ವೇಳೆ ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು ಅವರು ಮಾತನಾಡಿ, ರಾಜ್ಯದ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಮುಖ್ಯಮಂತ್ರಿ ಆದಮೇಲೆ ರಾಜ್ಯದಲ್ಲಿ ಆಡಳಿತ ವಿಭಾಗದಲ್ಲಿ ಬದಲಾವಣೆ ತರಬೇಕು. ಸರ್ಕಾರ ಯೋಜನೆಗಳು, ಸೌಲಭ್ಯಗಳನ್ನು ಜನರಿಗೆ ನೇರವಾಗಿ ತಲುಪಿಸಬೇಕು ಎಂಬ ಉದ್ದೇಶದಿಂದ ಪ್ರಜಾಸೇವೆ ಆಂದೋಲನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

3 ನೇ ಪುಟಕ್ಕೆ

ಕಲ್ಯಾಣ ಕರ್ನಾಟಕ ಉತ್ಸವಕ್ಕೆ ಅಧಿಕಾರಿಗಳು ಸಮನ್ವಯದಿಂದ ಶ್ರಮಿಸಿ: ನಲಿನ್ ಅತುಲ್



ಕಲಬುರಗಿ,ಸೆ.05-

ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಭಾಗವಹಿಸಲು ಹಾಗೂ ವಿವಿಧ ಕಾರ್ಯಕ್ರಮಗಳಿಗೆ ಚಾಲನೆ ನೀಡಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸೆಪ್ಟೆಂಬರ್ 16 ಮತ್ತು 17ರಂದು ಎರಡು ದಿನಗಳ ಕಾಲ ಕಲಬುರಗಿಗೆ ಆಗಮಿಸಲಿರುವ ಹಿನ್ನೆಲೆಯಲ್ಲಿ, ಉತ್ಸವವನ್ನು ಯಶಸ್ವಿಯಾಗಿ ಹಾಗೂ ಅರ್ಥಪೂರ್ಣವಾಗಿ ಆಯೋಜಿಸಲು ಜಿಲ್ಲಾಡಳಿತ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಕೆಕೆಆರ್‌ಡಿಬಿ ಕಾರ್ಯದರ್ಶಿ ನಲಿನ್ ಅತುಲ್ ಸೂಚಿಸಿದರು.

ಗುರುವಾರ ಕೆಕೆಆರ್‌ಡಿಬಿ ಸಭಾಂಗಣದಲ್ಲಿ ನಡೆದ ಕಲ್ಯಾಣ ಕರ್ನಾಟಕ ಉತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳ ಭೇಟಿಯ ಹಿನ್ನೆಲೆಯಲ್ಲಿ ಜಿಲ್ಲಾಡಳಿತದಿಂದ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ಗಣ್ಯರ ಭದ್ರತೆ, ಸಂಚಾರ ವ್ಯವಸ್ಥೆ ಸೇರಿದಂತೆ ಅಗತ್ಯ ಪೊಲೀಸ್ ಬಂದೋಬಸ್ತ್ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯನ್ನು ಅದ್ದೂರಿಯಾಗಿ ಆಚರಿಸುವುದರ ಜತೆಗೆ, ಜಿಲ್ಲಾಮಟ್ಟದ ಎಲ್ಲ ಅಧಿಕಾರಿಗಳು ಜಿಲ್ಲಾಡಳಿತದ ನಿರ್ದೇಶನದಂತೆ ತಮಗೆ ವಹಿಸಿರುವ ಜವಾಬ್ದಾರಿಗಳನ್ನು ಯಾವುದೇ ಲೋಪವಿಲ್ಲದೆ ನಿರ್ವಹಿಸಬೇಕು. ಕಾರ್ಯಕ್ರಮದ ಯಶಸ್ಸಿಗೆ ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಸೆಪ್ಟೆಂಬರ್ 17ರಂದು ನಡೆಯಲಿರುವ ಕಲ್ಯಾಣ ಕರ್ನಾಟಕ ಉತ್ಸವದ ಮುಖ್ಯ ಕಾರ್ಯಕ್ರಮದಲ್ಲಿ ಕೆಕೆಆರ್‌ಡಿಬಿ ಅನುದಾನದಲ್ಲಿ ಕೈಗೊಂಡಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ನಲಿನ್ ಅತುಲ್ ತಿಳಿಸಿದರು.

ಕೆಕೆಆರ್‌ಡಿಬಿ ನೆರವಿನ ಅಕ್ಷರ ಆವಿಷ್ಕಾರ, ಆರೋಗ್ಯ ಆವಿಷ್ಕಾರ, ಉದ್ಯೋಗ ಆವಿಷ್ಕಾರ ಹಾಗೂ ಅರಣ್ಯ ಆವಿಷ್ಕಾರ ಸೇರಿದಂತೆ ಸುಮಾರು 11 ಪ್ರಮುಖ ವಿಷಯಗಳನ್ನು ಬಿಂಬಿಸುವ ಸ್ತಬ್ಧಚಿತ್ರಗಳನ್ನು ವಿವಿಧ ಇಲಾಖೆಗಳು ಸಿದ್ಧಪಡಿಸಿ ಪ್ರದರ್ಶಿಸಬೇಕು. ಇದರ ಜತೆಗೆ ವಿವಿಧ ಸರ್ಕಾರಿ ಯೋಜನೆಗಳ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ ವಿತರಿಸುವ ಕಾರ್ಯಕ್ರಮವನ್ನೂ ಆಯೋಜಿಸಬೇಕು ಎಂದು ನಿರ್ದೇಶನ ನೀಡಿದರು.

ಅಪ್ಪನ ಕೆರೆ, ಗಣಪತಿ ಕೆರೆ, ಕೋಟೆ ಹಾಗೂ ಜಾತ್ರಾ ಮೈದಾನ ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ವಿವಿಧ ಇಲಾಖೆಗಳ ಸ್ತಬ್ಧಚಿತ್ರಗಳನ್ನು ಪ್ರದರ್ಶಿಸಲು ಕ್ರಮ ಕೈಗೊಳ್ಳಬೇಕು ಎಂದು ಸಭೆಯಲ್ಲಿ ಸೂಚಿಸಲಾಯಿತು.

ಕಲೆ, ಸಾಹಿತ್ಯ, ಕ್ರೀಡೆ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ರಾಜ್ಯ ಪ್ರಶಸ್ತಿ ಮತ್ತು ರಾಷ್ಟ್ರ ಮಟ್ಟದ ಪ್ರಶಸ್ತಿ ಪಡೆದ ಸಾಧಕರನ್ನು ಉತ್ಸವದ ಸಂದರ್ಭದಲ್ಲಿ ಸನ್ಮಾನಿಸಲು ನಿರ್ಧರಿಸಲಾಯಿತು. ಈ ಹಿನ್ನೆಲೆಯಲ್ಲಿ ಅರ್ಹ ಸಾಧಕರ ಪಟ್ಟಿಯನ್ನು ಸಿದ್ಧಪಡಿಸಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ ನಾಶಿ ಅವರಿಗೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.

ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ಇತಿಹಾಸ, ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ಪ್ರವಾಸಿ ತಾಣಗಳನ್ನು ಪರಿಚಯಿಸುವ ಉದ್ದೇಶದಿಂದ ಎರಡು ದಿನಗಳ ಕಾಲ ಡಿಜಿಟಲ್ ಮಾಹಿತಿ ಮಳಿಗೆ ಹಾಗೂ ವಸ್ತು ಪ್ರದರ್ಶನ ಮಳಿಗೆಗಳನ್ನು ಪ್ರವಾಸೋದ್ಯಮ ಇಲಾಖೆ ವತಿಯಿಂದ ಆಯೋಜಿಸಬೇಕು ಎಂದು ನಲಿನ್ ಅತುಲ್ ತಿಳಿಸಿದರು.

ಜಿಲ್ಲಾವಾರು ಪ್ರತ್ಯೇಕ ಮಳಿಗೆಗಳನ್ನು ಸ್ಥಾಪಿಸುವುದರ ಜತೆಗೆ, ಮಳಿಗೆಗಳಲ್ಲಿ ಪ್ರದರ್ಶಿಸಲಾಗುವ ವಿಷಯಗಳ ಕುರಿತು ಸಾರ್ವಜನಿಕರಿಗೆ ಮಾಹಿತಿ ನೀಡಲು ಧ್ವನಿವರ್ಧಕ ವ್ಯವಸ್ಥೆಯನ್ನೂ ಕಲ್ಪಿಸಬೇಕು ಎಂದು ಸೂಚಿಸಿದರು.

ಉತ್ಸವಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸುವ ನಿರೀಕ್ಷೆಯಿರುವುದರಿಂದ ಕಾರ್ಯಕ್ರಮದ ಸ್ಥಳಗಳಲ್ಲಿ ಕುಡಿಯುವ ನೀರು, ಸ್ವಚ್ಛತೆ, ವಿದ್ಯುತ್, ಸಂಚಾರ, ಆರೋಗ್ಯ ಸೇವೆ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಸಮರ್ಪಕವಾಗಿ ಕಲ್ಪಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಯಿತು.

ಸಭೆಯಲ್ಲಿ ಕೆಕೆಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕಿ ಡಾ. ಬಿ. ಸುಶೀಲಾ, ಜಿಲ್ಲಾಧಿಕಾರಿ ಇಕ್ರವ್ ಶರೀಫ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಎಸ್. ಸಂಕನೂರ್, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಶಿಂಧೆ, ಉಪ ಅರಣ್ಯ ಸಂರಕ್ಷಣಾಧಿಕಾರಿ ಆಶಿಷ್ ರೆಡ್ಡಿ, ಡಿಸಿಪಿ ಶಾಲು, ಎಸಿಪಿ ಪ್ರವೀಣ ನಾಯಕ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಸಮದ್ ಪಟೇಲ್, ಕೆಕೆಆರ್‌ಡಿಬಿ ಅಧೀನ ಕಾರ್ಯದರ್ಶಿ ಶಿವಪುತ್ರಪ್ಪ ಕಂಟಿ, ಆಪ್ತ ಕಾರ್ಯದರ್ಶಿ ಶರದಾ ಬಿರಾದರ್, ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಬೇಬಿ ಮುಗೇರಾ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಶಂಕ್ರಮ್ಮ ಢವಳಗಿ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.



ತೆಲ್ಕೂರ್ ಮೇಲಿನ ಸುಳ್ಳು ಪ್ರಕರಣ ಖಂಡನೀಯ: ಶಿವಶರಣ ಶಂಕರ

ಸೇಡಂ,ಸೆ.05-

ತೀವ್ರ ಬರಗಾಲದ ನಡುವೆಯೂ ರಾಜ್ಯ ಸರ್ಕಾರ ರೈತರ ಸಂಕಷ್ಟಕ್ಕೆ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ. ಇಂತಹ ಸಂದರ್ಭದಲ್ಲಿ ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ರೈತರ ಮೇಲೆ ವಾಹನ ಹರಿಸುವ ಪ್ರಯತ್ನ ನಡೆದಿದ್ದು, ರೈತಪರ ಹೋರಾಟಗಾರ ಹಾಗೂ ಮಾಜಿ ಶಾಸಕ ರಾಜಕುಮಾರ ಪಾಟೀಲ ತೆಲ್ಕೂರ್ ಮತ್ತು ಬಿಜೆಪಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ ಬಗಲಿ ಅವರ ವಿರುದ್ಧ ಪೊಲೀಸರು ಸ್ವಯಂಪ್ರೇರಿತವಾಗಿ (ಸುಮೊಟೊ) ಪ್ರಕರಣ ದಾಖಲಿಸಿರುವುದು ಅತ್ಯಂತ ಖಂಡನೀಯ ಎಂದು ಬಿಜೆಪಿ ಸೇಡಂ ಮಂಡಲ ಅಧ್ಯಕ್ಷ ಶಿವಶರಣ ಶಂಕರ ಮೆಡಿಕಲ್ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಪ್ರಸ್ತುತ ರಾಜ್ಯ ಸರ್ಕಾರ ರೈತರ ಹಿತ ಕಾಪಾಡುವಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಆರೋಪಿಸಿದರು.

''ಜಿಲ್ಲೆಯ ಹಲವೆಡೆ ಬೆಳೆಗಳು ಸಂಪೂರ್ಣ ನಾಶವಾಗಿವೆ. ಆದರೆ, ಸರ್ಕಾರದಿಂದ ದೊರೆಯಬೇಕಾದ ಪರಿಹಾರ ಇನ್ನೂ ರೈತರ ಕೈ ಸೇರಿಲ್ಲ. ಇಂತಹ ಭೀಕರ ಪರಿಸ್ಥಿತಿಯಲ್ಲಿಯೂ ಸರ್ಕಾರ ಪ್ರಕಟಿಸಿದ ಮೊದಲ ಹಂತದ ಬರಪೀಡಿತ ಪ್ರದೇಶಗಳ ಪಟ್ಟಿಯಲ್ಲಿ ಕಲಬುರಗಿ ಜಿಲ್ಲೆಯನ್ನು ಕೈಬಿಟ್ಟಿರುವುದು ಅನ್ಯಾಯವಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯ ಮೂವರು ಸಚಿವರ ವಿರುದ್ಧ ರೈತರು ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದ್ದಾರೆ'' ಎಂದರು.

''ರೈತರ ಮೇಲೆ ವಾಹನಗಳು ನುಗ್ಗುವಂತಹ ಅಸಹಾಯಕ ಪರಿಸ್ಥಿತಿ ನಿರ್ಮಾಣವಾಗಿತ್ತು. ಆದರೆ ಇದೀಗ ಯಾವುದೇ ತಪ್ಪು ಮಾಡದ ಮಾಜಿ ಶಾಸಕ ರಾಜಕುಮಾರ ಪಾಟೀಲ ತೆಲ್ಕೂರ್ ಹಾಗೂ ಬಿಜೆಪಿ ಗ್ರಾಮಾಂತರ ಜಿಲ್ಲಾಧ್ಯಕ್ಷ ಅಶೋಕ ಬಗಲಿ ಅವರ ವಿರುದ್ಧ ಪೊಲೀಸರು ಸ್ವಯಂಪ್ರೇರಿತವಾಗಿ ಪ್ರಕರಣ ದಾಖಲಿಸಿರುವುದು ಖಂಡನೀಯ. ಇದು ರೈತರ ಹಾಗೂ ವಿರೋಧ ಪಕ್ಷದ ಧ್ವನಿಯನ್ನು ಹತ್ತಿಕ್ಕುವ ಪ್ರಯತ್ನವಾಗಿದೆ'' ಎಂದು ಆರೋಪಿಸಿದರು.

ಸುದ್ದಿಗೋಷ್ಠಿಯಲ್ಲಿ ಓಂಪ್ರಕಾಶ್ ಪಾಟೀಲ್, ಸೇಡಂ ಮಂಡಲ ಬಿಜೆಪಿ ಉಪಾಧ್ಯಕ್ಷ ವೀರೇಶ್ ಹೂಗಾರ್, ಪ್ರಧಾನ ಕಾರ್ಯದರ್ಶಿ ರಾಘವೇಂದ್ರ, ಒಬಿಸಿ ಮೋರ್ಚಾ ಅಧ್ಯಕ್ಷ ಮಹಾದೇವಪ್ಪ ಗೋಣಿ, ಎಸ್ಸಿ ಮೋರ್ಚಾ ಅಧ್ಯಕ್ಷ ರಾಮು ಕಣೇಕಲ್, ಎಸ್‌ಟಿ ಮೋರ್ಚಾ ಅಧ್ಯಕ್ಷ ಬೀಮು ನಾಯಕ್, ಎಸ್‌ಟಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಸಂದೀಪ್ ಪ್ಯಾಟಿ, ನಾಗಪ್ಪ ಕೊಳ್ಳಿ, ಶಿವಾನಂದ ಸ್ವಾಮಿ, ಶ್ರೀಮಂತ ಅವಂಟಿ, ರವಿ ನಾಯಕ, ಸಿದ್ದಲಿಂಗ ಗೌತಮ್, ನಾಗರಾಜ್ ಪಾಟೀಲ್ ತೊಟ್ನಳ್ಳಿ, ನಾಗೇಂದ್ರಪ್ಪ ರಾಜಪುರ್, ವಿಷ್ಣು ಊಡುಗಿ, ಜೈಪ್ರಕಾಶ್ ರಾಥೋಡ್, ನಾಗು ದೊರೆ, ರೇವಣಸಿದ್ದಪ್ಪ ಬಿರೆದಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಹುಲಸೂರಿನ ನೀರಿನ ಸಮಸ್ಯೆಗೆ ಆಕ್ರೋಶ ಹೊರಹಾಕಿದ ಸಿಇಒ : ಕ್ರಮ ಕೈಗೊಳ್ಳಲು ಕಟ್ಟುನಿಟ್ಟಿನ ಸೂಚನೆ

ಹುಲಸೂರ್,ಸೆ.05-

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್ ಅವರು ಶುಕ್ರವಾರ ಬೆಳಿಗ್ಗೆ 7 ಗಂಟೆಗೆ ಹುಲಸೂರ್ ಪಟ್ಟಣಕ್ಕೆ ಭೇಟಿ ನೀಡಿ ವಿವಿಧ ಬಡಾವಣೆಗಳು, ಆರೋಗ್ಯ ಕೇಂದ್ರ, ವಸತಿ ನಿಲಯಗಳು ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸಿದರು. ಪಟ್ಟಣದ ಭೀಮನಗರ್, ವಡ್ಡರಗಲ್ಲಿ, ವಾರ್ಡ್ ನಂ.1 ಸೇರಿದಂತೆ ವಿವಿಧ ಓಣಿಗಳಿಗೆ ತೆರಳಿದ ಅವರು, ಚರಂಡಿ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಜಲಜೀವನ್ ಮಿಷನ್ (ಜೆಜೆಎಂ) ಕಾಮಗಾರಿಗಳ ಸ್ಥಿತಿಗತಿ ಪರಿಶೀಲಿಸಿದರು. ವಿವಿಧೆಡೆ ನಡೆಯುತ್ತಿರುವ ಜೆಜೆಎಂ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ಕಳಪೆ ಕಾಮಗಾರಿಗಳನ್ನು ಸರಿಪಡಿಸಿ ಉಳಿದ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರು ಹಾಗೂ ಸಂಬಂಧಿಸಿದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್‌ಗೆ ಸೂಚಿಸಿದರು.

ನಂತರ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದ ಅವರು ತುರ್ತು ಹಾಗೂ ಹೆರಿಗೆ ವಿಭಾಗ ಸೇರಿದಂತೆ ವಿವಿಧ ವಿಭಾಗಗಳನ್ನು ಪರಿಶೀಲಿಸಿದರು. ಆಸ್ಪತ್ರೆಯಲ್ಲಿ ಸ್ವಚ್ಛತೆ ಉತ್ತಮವಾಗಿರುವುದನ್ನು ಗಮನಿಸಿದ ಅವರು, ಇನ್ನಷ್ಟು ಸುಧಾರಣೆ ಕೈಗೊಳ್ಳುವಂತೆ ಸಿಬ್ಬಂದಿಗೆ ಸೂಚಿಸಿದರು.

ವಸತಿ ನಿಲಯದಲ್ಲಿ ಅಸಮರ್ಪಕತೆ: ಪಟ್ಟಣದ ಬಾಲಕರ ವಸತಿ ನಿಲಯಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ವಾರ್ಡನ್ ಸಮಯಕ್ಕೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗದಿರುವುದು ಹಾಗೂ ಮಕ್ಕಳಿಗೆ ಅಗತ್ಯ ಸೌಲಭ್ಯಗಳು ಸಮರ್ಪಕವಾಗಿ ದೊರೆಯದಿರುವುದು ಸಿಇಒ ಅವರ ಗಮನಕ್ಕೆ ಬಂದಿತ್ತು. ಈ ಕುರಿತು ವಾರ್ಡನ್ ಅವರನ್ನು ತರಾಟೆಗೆ ತೆಗೆದುಕೊಂಡ ಅವರು, ಸರ್ಕಾರ ವೇತನ ನೀಡುತ್ತಿದೆ. ನ್ಯಾಯಯುತವಾಗಿ ಕರ್ತವ್ಯ ನಿರ್ವಹಿಸಬೇಕು. ಮಕ್ಕಳಿಗೆ ದೊರೆಯಬೇಕಾದ ಸೌಲಭ್ಯಗಳಲ್ಲಿ ಕೊರತೆಯಾಗಬಾರದು ಎಂದು ತಾಕೀತು ಮಾಡಿದ ಅವರು, ವಸತಿ ನಿಲಯದಲ್ಲಿಯೇ ಊಟ ಮಾಡಿ ಆಹಾರದ ಗುಣಮಟ್ಟದಲ್ಲಿ ಇನ್ನಷ್ಟು ಸುಧಾರಣೆ ಅಗತ್ಯವಿದೆ ಎಂದು ತಿಳಿಸಿದರು.

ಬಾಲಕರ ವಸತಿ ನಿಲಯದ ಸ್ನಾನಗೃಹ ಪರಿಶೀಲಿಸಿದಾಗ ದುರ್ವಾಸನೆ ಬರುತ್ತಿರುವುದನ್ನು ಗಮನಿಸಿದ ಅವರು, ಸ್ವಚ್ಛತೆ ಹಾಗೂ ನಿರ್ವಹಣೆ ಕುರಿತು ಅಧಿಕಾರಿಗಳನ್ನು ಪ್ರಶ್ನಿಸಿದರು. ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ಶಾಲೆಯ ಸಮೀಪ ಕೊಳವೆ ಬಾವಿ ಕೊರೆಸಿ ನೀರಿನ ವ್ಯವಸ್ಥೆ ಕಲ್ಪಿಸುವಂತೆ ಸ್ಥಳದಲ್ಲಿದ್ದ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್‌ಗೆ ಸೂಚಿಸಿದರು. ಸಾಧ್ಯವಾದಷ್ಟು ಬೇಗ ಕಾಮಗಾರಿ ಆರಂಭಿಸಿ ವಾರದೊಳಗೆ ನೀರಿನ ಸಮಸ್ಯೆ ಬಗೆಹರಿಸುವಂತೆ ನಿರ್ದೇಶನ ನೀಡಿದರು.

ಗಣೇಶ ಹಬ್ಬವನ್ನು ಶಾಂತಿ, ಸೌಹಾರ್ದತೆಯಿಂದ ಆಚರಿಸಿ: ಕಲಬುರಗಿ ಡಿಸಿ ಇಕ್ರಮ್ ಶರೀಫ್

ಕಲಬುರಗಿ,ಸೆ.05-

ಕಲಬುರಗಿ ಜಿಲ್ಲೆಯಾದ್ಯಂತ ಗೌರಿ-ಗಣೇಶ ಚತುರ್ಥಿ ಹಬ್ಬವನ್ನು ಶಾಂತಿಯುತ ಹಾಗೂ ಸೌಹಾರ್ದತೆಯಿಂದ ಆಚರಿಸಬೇಕೆಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಹೇಳಿದರು.

ಶುಕ್ರವಾರ ಇಲ್ಲಿನ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಗಣೇಶ ಚತುರ್ಥಿ ಹಬ್ಬದ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇದೇ ಸೆಪ್ಟೆಂಬರ್ 14 ರಿಂದ 5ನೇ, 9ನೇ, 11ನೇ ಹಾಗೂ 21ನೇ ದಿನಗಳ ಗಣಪನ ಮೂರ್ತಿ ಪ್ರತಿಷ್ಠಾಪನೆ ನಡೆಯಲಿದ್ದು, ಜಿಲ್ಲೆಯಾದ್ಯಂತ ಎಲ್ಲಿಯೂ ಶಾಂತಿ ಕದಡುವಂತೆ ಯಾವುದೇ ಅಹಿತಕರ ಘಟನೆಗೆ ಅವಕಾಶ ನೀಡದೆ ಸಂಭ್ರಮದಿಂದ ವಿಘ್ನ ವಿನಾಯಕನ ಹಬ್ಬ ಆಚರಿಸುವಂತೆ ಆಯೋಜಕರಿಗೆ ಸೂಚಿಸಿದರು.

ಗಣೇಶ ಮೂರ್ತಿ ಪ್ರತಿಷ್ಠಾಪನೆಗೆ ಆಯೋಜಕರಿಗೆ ಸುಲಭವಾಗಿ ಅನುಮತಿ ಪಡೆಯಲು ಕಲಬುರಗಿ ನಗರಕ್ಕೆ ಸೀಮಿತವಾಗಿ ಮಹಾನಗರ ಪಾಲಿಕೆಯ ಟೌನ್ ಹಾಲ್ ಹಾಗೂ ಆಯಾ ತಾಲೂಕುಗಳಲ್ಲಿ 'ಸಿಂಗಲ್ ವಿಂಡೋ' ಸಿಸ್ಟಮ್ ತೆರೆಯಲಾಗುತ್ತದೆ. ಆಯೋಜಕರು ಇಲ್ಲಿಯೇ ಅರ್ಜಿ ಸಲ್ಲಿಸಿ ಒಂದೇ ಸೂರಿನಡಿ ಎಲ್ಲದಕ್ಕೂ ಅನುಮತಿ ಪಡೆಯಬಹುದಾಗಿದೆ. ಸಿಂಗಲ್ ವಿಂಡೋ ಸಿಸ್ಟಮ್‌ನಲ್ಲಿ ಸಂಬಂಧಪಟ್ಟ ಎಲ್ಲಾ ಇಲಾಖೆಗಳ ಪ್ರತಿನಿಧಿಗಳು ಹಾಜರಿದ್ದು, ತ್ವರಿತಗತಿಯಲ್ಲಿ ಅನುಮತಿ ನೀಡಲು ನೆರವಾಗಬೇಕೆಂದು ಅಧಿಕಾರಿಗಳಿಗೆ ಡಿ.ಸಿ. ನಿರ್ದೇಶನ ನೀಡಿದರು.

ಹಬ್ಬದ ಸಂದರ್ಭದಲ್ಲಿ ಎಲ್ಲಿಯೂ ನೀರಿನ ಅಭಾವ ಉಂಟಾಗದಂತೆ ಮತ್ತು ವಿದ್ಯುತ್ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು. ನಗರದಲ್ಲಿ ಮೆರವಣಿಗೆ ಮಾರ್ಗದಲ್ಲಿ ಅವಶ್ಯವಿದ್ದಕಡೆ ಮರದ ರೆಕ್ಕೆಗಳನ್ನು ಕತ್ತರಿಸುವುದು ಮತ್ತು ರಸ್ತೆಯಲ್ಲಿನ ಗುಂಡಿಗಳನ್ನು ಮುಚ್ಚಿ ಸುಗಮ ಮೆರವಣಿಗೆಗೆ ಅವಕಾಶ ಮಾಡಿಕೊಡಬೇಕು. ನಿರ್ದಿಷ್ಟ ಸ್ಥಳದಲ್ಲಿ ತಾತ್ಕಾಲಿಕ ಮೊಬೈಲ್ ವಿಸರ್ಜನಾ ತೊಟ್ಟಿಗಳ' ವ್ಯವಸ್ಥೆ ಮಾಡುವಂತೆ ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತರಿಗೆ ಹಾಗೂ ತಾಲೂಕಾ ಹಂತದ ಇತರೆ ಅಧಿಕಾರಿಗಳಿಗೆ ಸೂಚಿಸಿದ ಡಿ.ಸಿ. ಅವರು ಸುಗಮ ಸಂಚಾರಕ್ಕೆ ಹೆಚ್ಚುವರಿ ಗೃಹರಕ್ಷಕ ಸಿಬ್ಬಂದಿಯನ್ನು ನಿಯೋಜಿಸುವಂತೆಯೂ ಪೊಲೀಸ್ ಇಲಾಖೆಗೆ ಸೂಚಿಸಿದರು.



ಪರಿಸರ ಸ್ನೇಹಿ ಗಣಪನನ್ನು ಪ್ರತಿಷ್ಠಾಪಿಸಿ:

ಪಿ.ಓ.ಪಿ ಹಾಗೂ ರಾಸಾಯನಿಕ ಬಣ್ಣದಿಂದ ತಯಾರಿಸಿದ ಗಣಪನ ಮೂರ್ತಿಗಳನ್ನು ನದಿ, ಕಾಲುವೆ, ಬಾವಿ ಮತ್ತು ಇತರೆ ಜಲಮೂಲಗಳಲ್ಲಿ ವಿಸರ್ಜಿಸುವುದರಿಂದ ನೀರು ಕಲುಷಿತಗೊಂಡು ಸಾಂಕ್ರಾಮಿಕ ರೋಗಗಳು ಹರಡುವ ಜತೆಗೆ ಪರಿಸರಕ್ಕೆ ತೀವ್ರ ಹಾನಿಯಾಗುವುದರಿಂದ ಇವುಗಳನ್ನು ನಿಷೇಧಿಸಲಾಗಿದೆ. ಹೀಗಾಗಿ ಜಿಲ್ಲೆಯ ಸಾರ್ವಜನಿಕರು ಜೇಡಿಮಣ್ಣಿನಿಂದ ತಯಾರಿಸಿದ ಪರಿಸರ ಸ್ನೇಹಿ ಗಣಪತಿ ವಿಗ್ರಹಗಳನ್ನು ಮಾತ್ರ ಪ್ರತಿಷ್ಠಾಪಿಸುವ ಮೂಲಕ ಪರಿಸರ ಸಂರಕ್ಷಣೆಗೂ ಕೈಜೋಡಿಸಬೇಕೆಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಮನವಿ ಮಾಡಿದರು.

ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ. ಮತ್ತು ಎಸ್.ಪಿ. ಅಡ್ಡೂರು ಶ್ರೀನಿವಾಸುಲು ಮಾತನಾಡಿ, ಕಲಬುರಗಿ ನಗರ ಮತ್ತು ಜಿಲ್ಲೆಯಾದ್ಯಂತ ಪ್ರತಿಯೊಂದು ಗಣೇಶ ಮಂಡಳಿಯು ಕಡ್ಡಾಯವಾಗಿ ಅನುಮತಿ ಪಡೆದು ಗಣೇಶನನ್ನು ಪ್ರತಿಷ್ಠಾಪನೆ ಮಾಡಬೇಕು. ಪೆಂಡಾಲ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹಗಲು-ರಾತ್ರಿ ಶಿಸ್ತು ಪರಿಪಾಲನೆಗಾಗಿ ಸ್ವಯಂಸೇವಕರನ್ನು ನಿಯೋಜಿಸಬೇಕು. ಪೆಂಡಾಲ್‌ಗಳಿಗೆ ಪೊಲೀಸ್ ಇಲಾಖೆಯಿಂದ ಡೇ ಮತ್ತು ನೈಟ್ ಪೆಟ್ರೋಲಿಂಗ್ ಮೂಲಕ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗುವುದು. ಪೆಂಡಾಲ್‌ಗಳಲ್ಲಿ ಸೂಕ್ತ ಬೆಳಕಿನ ವ್ಯವಸ್ಥೆ, ಬೆಂಕಿ ಅವಘಡ ತಡೆಯುವ ಸುರಕ್ಷತಾ ಕ್ರಮಗಳು ಹಾಗೂ ಮುಂಜಾಗ್ರತೆಯಾಗಿ ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಶೇ.65ರಷ್ಟು ಮೂರ್ತಿಗಳು 5ನೇ ದಿನದಂದು ವಿಸರ್ಜನೆಯಾಗುವುದರಿಂದ ಸಂಚಾರ ದಟ್ಟಣೆ ತಪ್ಪಿಸಲು ಮೆರವಣಿಗೆಯ ವೇಳೆಯಲ್ಲಿ ಮುಂಚಿತವಾಗಿ ಯೋಜಿತ ರೀತಿಯಲ್ಲಿ ಸಮಯ ಪರಿಪಾಲನೆ ಮಾಡಬೇಕು ಎಂದು ತಿಳಿಸಿದರು.

ಸುಳ್ಳು ಸುದ್ದಿಗೆ ಕಿವಿಗೊಡಬೇಡಿ:

ಹಬ್ಬದ ಸಂದರ್ಭದಲ್ಲಿ ಕೆಲ ಕಿಡಿಗೇಡಿಗಳು ಸಾಮಾಜಿಕ ಮಾಧ್ಯಮಗಳಲ್ಲಿ ಹರಡುವ ಯಾವುದೇ ಸುಳ್ಳು ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು. ವಿವಾದಾತ್ಮಕ ಫ್ಲೆಕ್ಸ್/ಬ್ಯಾನರ್‌ಗಳನ್ನು ಅಳವಡಿಕೆ ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಮದ್ಯಪಾನ ಮಾಡಿ ಹಬ್ಬದ ವಾತಾವರಣ ಕೆಡಿಸುವವರ ಮೇಲೆಯೂ ಪೊಲೀಸ್ ಇಲಾಖೆ ನಿಗಾ ವಹಿಸಲಿದೆ. ಸಾರ್ವಜನಿಕರು ಹಾಗೂ ಆಯೋಜಕರು ಯಾವುದೇ ತುರ್ತು ಸಂದರ್ಭದಲ್ಲಿ 112 ಸಹಾಯವಾಣಿಗೆ ಸಂಪರ್ಕಿಸಬೇಕು ಎಂದು ಡಾ.ಎಸ್.ಡಿ. ಶರಣಪ್ಪ ಮತ್ತು ಅಡ್ಡೂರು ಶ್ರೀನಿವಾಸುಲು ಅವರು ಆಯೋಜಕರಿಗೆ ತಿಳಿಸಿದರು. ಸಭೆಯಲ್ಲಿ ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತ ಅವಿನಾಶ್ ಶಿಂಧೆ, ಡಿ.ಸಿ.ಪಿ ಶಾಲು, ಪ್ರೊಬೇಷನರಿ ಐ.ಎ.ಎಸ್. ಅಧಿಕಾರಿ ಶಿಖರ್ ಮೋಘಾ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಶಾಂತಿ ಸಮಿತಿ ಸದಸ್ಯರು, ವಿವಿಧ ಸಮುದಾಯದ ಮುಖಂಡರು, ಸಾರ್ವಜನಿಕರು ಭಾಗವಹಿಸಿದ್ದರು.

ಬಸವಕಲ್ಯಾಣ ಬಸ್ ನಿಲ್ದಾಣಕ್ಕೆ ಜಗನ್ನಾಥ್ ಹಲಮಡಗಿ ಭೇಟಿ: ಅಧಿಕಾರಿಗಳಿಗೆ ತೀವ್ರ ತರಾಟೆ

ಬಸವಕಲ್ಯಾಣ,ಸೆ.05-

ನಗರದ ಬಸ್ ನಿಲ್ದಾಣಕ್ಕೆ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಜಗನ್ನಾಥ್ ಹಲಮಡಗಿ ಅವರು ಶುಕ್ರವಾರ ಭೇಟಿ ನೀಡಿ, ಬಸ್ ನಿಲ್ದಾಣದ ಅವ್ಯವಸ್ಥೆ ಕಂಡು ಅಧಿಕಾರಿಗಳಿಗೆ ತೀವ್ರ ತರಾಟೆ ತೆಗೆಕೊಂಡರು.

ಬಸ್ ನಿಲ್ದಾಣದಲ್ಲಿ ಸೂಕ್ತ ಶೌಚಾಲಯದ ವ್ಯವಸ್ಥೆ ಇಲ್ಲದೆ ಇರುವುದರಿಂದ ಬೇಸರ ವ್ಯಕ್ತಪಡಿಸಿದ ಅವರು ಮುಂದಿನ ದಿನಗಳಲ್ಲಿ ಸಮಸ್ಯೆ ಬಗೆ ಹರಿಸುವಂತೆ ಅವರು ಅಧಿಕಾರಿಗೆ ತಾಕೀತು ಮಾಡಿದರು. ಬಸ್ ನಿಲ್ದಾಣದಲ್ಲಿನ ಅಸ್ವಚ್ಛತೆ ಕಂಡು ಅಧಿಕಾರಿಗಳಿಗೆ ಮುಂದಿನ ದಿನಗಳಲ್ಲಿ ಸ್ವಚ್ಛತೆ ಕಾಪಾಡುವಂತೆ ನಿರ್ದೇಶನ ನೀಡಿದರು.



ತಾಲೂಕಿನ ವಿವಿಧ ಹಳ್ಳಿಗಳಿಗೆ ಬಸ್ ಸರಿಯಾದ ಸಮಯಕ್ಕೆ ಬರುತ್ತಿಲ್ಲ ಎಂದು ಬಸ್ ನಿಲ್ದಾಣದಲ್ಲಿದ್ದ ವಿದ್ಯಾರ್ಥಿಗಳು ಗಮನಕ್ಕೆ ತಂದರು. ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ತೀವ್ರ ತರಾಟೆಗೆ ತೆಗೆದುಕೊಂಡ ಅವರು, ನಾಳೆಯಿಂದ ಶಾಲಾ ಕಾಲೇಜಿಗೆ ಹೋಗಲು ಹಾಗೆಯೇ ಮನೆಗೆ ಮರಳಲು ವಿದ್ಯಾರ್ಥಿಗಳಿಗೆ ಸಮಸ್ಯೆಯಾಗದಂತೆ ಬಸ್ ಸಂಚರಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬಸ್ ನಿಲ್ದಾಣದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದರಿಂದ ನಗರಸಭೆ ಪೌರಾಯುಕ್ತ ರಾಜು ಬಣಕಾರ್ ಅವರಿಗೆ ಕರೆ ಮಾಡಿ ಮುಂದಿನ ದಿನಗಳಲ್ಲಿ ಬಸ್ ನಿಲ್ದಾಣದಲ್ಲಿ ನಾಯಿಗಳು ಓಡಾಡದಂತೆ ನೋಡಿಕೊಳ್ಳಬೇಕು ಎಂದರು.

ಬಸ್ ನಿಲ್ದಾಣದಲ್ಲಿ ನಿರಂತರವಾಗಿ ಸಿಸಿ ಕ್ಯಾಮೆರಾ ಚಾಲ್ತಿಯಲ್ಲಿರಬೇಕು. ಮಹಿಳೆಯರ ವಿಶ್ರಾಂತಿ ಕೋಣೆ ಗಮನಿಸಿದ ಅವರು, ಮಹಿಳೆಯರು ಕುಳಿತುಕೊಳ್ಳಲು ಸೂಕ್ತ ವ್ಯವಸ್ಥೆ ಮಾಡುವಂತೆ ಕ್ರಮ ಕೈಗೊಳ್ಳಬೇಕು ಎಂದು ಅವರು ಸೂಚಿಸಿದರು.

ಕೆಪಿಎಸ್‌ಸಿ ಪರೀಕ್ಷಾ ಅಕ್ರಮ ಯಾರೇ ಭಾಗಿಯಾಗಿದ್ದರೂ ನಿರ್ದಾಕ್ಷಿಣ್ಯ ಕ್ರಮ: ಪ್ರಿಯಾಂಕ್ ಖರ್ಗೆ

ಕಲಬುರಗಿ,ಸೆ,05-

ಕೆಪಿಎಸ್‌ಸಿ ಪರೀಕ್ಷಾ ಅಕ್ರಮದಲ್ಲಿ ಯಾರೇ ಭಾಗಿಯಾಗಿದ್ದರೂ ಅವರನ್ನು ರಕ್ಷಿಸುವ ಪ್ರಶ್ನೆಯೇ ಇಲ್ಲ. ಆರೋಪಿಗಳು ಎಷ್ಟೇ ಪ್ರಭಾವಶಾಲಿಗಳಾಗಿದ್ದರೂ ಅಥವಾ ಯಾವುದೇ ರಾಜಕೀಯ ಪಕ್ಷಕ್ಕೆ ಸೇರಿದವರಾಗಿದ್ದರೂ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಂಡು ವಿದ್ಯಾರ್ಥಿಗಳಿಗೆ ನ್ಯಾಯ ಒದಗಿಸಲಾಗುವುದು ಎಂದು ರಾಜ್ಯದ ಗೃಹ, ಐಟಿ-ಬಿಟಿ, ಇ-ಆಡಳಿತ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಸ್ಪಷ್ಟಪಡಿಸಿದರು.

ನಗರದ ಐವಾನ್-ಎ-ಶಾಹಿ ಅತಿಥಿಗೃಹದಲ್ಲಿ ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪರೀಕ್ಷಾ ಅಕ್ರಮದಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ಧಕ್ಕೆಯಾಗುವುದನ್ನು



ಸರ್ಕಾರ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ತಾವು ರಾಜ್ಯದ ಗೃಹ ಸಚಿವರಾಗಿರುವ ಸಂದರ್ಭದಲ್ಲಿ ಪ್ರಕರಣಕ್ಕೆ ಸಂಬಂಧಿಸಿದ ಯಾವುದೇ ಸಾಕ್ಷ್ಯ ದುರ್ಬಲಗೊಳಿಸಲು ಅವಕಾಶ ನೀಡುವುದಿಲ್ಲ ಎಂದು ಹೇಳಿದರು.

ಹಿಂದೆ ವಿರೋಧ ಪಕ್ಷದಲ್ಲಿದ್ದಾಗಲೇ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟುವ ಉದ್ದೇಶದಿಂದ ಖಾಸಗಿ ಮಸೂದೆ ಮಂಡಿಸಿದ್ದೆ. ಇದೀಗ ನಮ್ಮ ಸರ್ಕಾರದ ಅವಧಿಯಲ್ಲಿಯೇ ಪರೀಕ್ಷಾ ಅಕ್ರಮ ತಡೆಗೆ ಸಂಬಂಧಿಸಿದ ಮಸೂದೆ ತರಲಾಗಿದೆ. ರಾಜ್ಯದಲ್ಲಿ 70 ಸಾವಿರ ಹುದ್ದೆಗಳ ಭರ್ತಿಗೆ ಚಾಲನೆ ನೀಡಲಾಗಿದ್ದು, ಸುಮಾರು 35 ಲಕ್ಷ ಅಭ್ಯರ್ಥಿಗಳು ವಿವಿಧ ಪರೀಕ್ಷೆಗಳನ್ನು ಬರೆಯುತ್ತಿದ್ದಾರೆ. ಇಷ್ಟೊಂದು ದೊಡ್ಡ ಸಂಖ್ಯೆಯ ಅಭ್ಯರ್ಥಿಗಳ ಹಿತಾಸಕ್ತಿ ಕಾಪಾಡುವುದು ಸರ್ಕಾರದ ಜವಾಬ್ದಾರಿಯಾಗಿದೆ ಎಂದರು.

ಕೇಂದ್ರದ ನಿಯಮಾವಳಿಯಂತೆ ಬರ ಘೋಷಣೆ ಕಲಬುರಗಿ ಜಿಲ್ಲೆಯ ಕೇವಲ ಐದು ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಎನ್‌ಡಿಆರ್‌ಎಫ್ ನಿಯಮಾವಳಿಯ ಪ್ರಕಾರವೇ ಬರ ಘೋಷಣೆ ಮಾಡಬೇಕಾಗುತ್ತದೆ ಎಂದು ತಿಳಿಸಿದರು. ಈ ನಿಯಮಾವಳಿಯನ್ನು ಕೇಂದ್ರ ಸರ್ಕಾರವೇ ರೂಪಿಸಿದೆ. ಹೀಗಾಗಿ ವಿರೋಧ ಪಕ್ಷದವರು ಕಲಬುರಗಿಯಲ್ಲಿ ಪ್ರತಿಭಟನೆ ನಡೆಸುವ ಬದಲು ಬರ ಘೋಷಣೆ ಕುರಿತ ನಿಯಮಾವಳಿಯಲ್ಲಿ ಬದಲಾವಣೆ ತರಲು ಕೇಂದ್ರ ಸರ್ಕಾರದ ಮುಂದೆ ಪ್ರತಿಭಟನೆ ನಡೆಸಲಿ ಎಂದರು. ಜೈಲು ಸುಧಾರಣಾ ವರದಿ ಅನುಷ್ಠಾನಕ್ಕೆ ಕ್ರಮ: ಕರ್ನಾಟಕದ ಕಾರಾಗೃಹಗಳ ಆಡಳಿತ, ಸುರಕ್ಷತೆ ಹಾಗೂ ಸುಧಾರಣೆಗಳಿಗೆ ಸಂಬಂಧಿಸಿದಂತೆ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಎಡಿಜಿಪಿ ಆರ್. ಹಿತೇಂದ್ರ ಅವರ ನೇತೃತ್ವದಲ್ಲಿ ರಚಿಸಲಾಗಿದ್ದ ಉನ್ನತ ಮಟ್ಟದ ಸಮಿತಿ ಈಗಾಗಲೇ ತನ್ನ ವರದಿ ಸಲ್ಲಿಸಿದೆ. ಪತ್ರಿಕಾಗೋಷ್ಠಿಯಲ್ಲಿ ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಶಿಕ್ಷಕರು ಸಮಾಜದ ಸಾಧನೆಗೆ ಮಾರ್ಗದರ್ಶಕರು

ವಹಿಸಿಕೊಂಡ ನಂತರ, ಶಿಕ್ಷಣ ಕ್ಷೇತ್ರಕ್ಕೆ ವಿಶೇಷ ಒತ್ತು ನೀಡಲಾಗಿದೆ. ಕಲ್ಯಾಣ ಕರ್ನಾಟಕದಲ್ಲಿ ಪ್ರತಿ ವರ್ಷ ಲಭ್ಯವಾಗುವ ಅನುದಾನದಲ್ಲಿ ಕನಿಷ್ಠ ಶೇ.25ರಷ್ಟು ಹಣವನ್ನು ಶಿಕ್ಷಣ ಕ್ಷೇತ್ರಕ್ಕೆ ಬಳಸಬೇಕು ಎಂಬ ಆದೇಶವನ್ನು ಮಂಡಳಿ ಹೊರಡಿಸಿದೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕದ ಅಭಿವೃದ್ಧಿಗಾಗಿ ಕಳೆದ ಮೂರು ವರ್ಷಗಳಲ್ಲಿ ಸರ್ಕಾರದಿಂದ ಸುಮಾರು ₹18,000 ಕೋಟಿ ಅನುದಾನ ನೀಡಲಾಗಿದೆ. ಇದರಲ್ಲಿ ಶಿಕ್ಷಣ ಕ್ಷೇತ್ರಕ್ಕೂ ಹೆಚ್ಚಿನ ಆದ್ಯತೆ ನೀಡಲಾಗಿದ್ದು, ಕೊಠಡಿಗಳ ನಿರ್ಮಾಣ ಸೇರಿದಂತೆ ವಿವಿಧ ಶೈಕ್ಷಣಿಕ ಮೂಲಸೌಕರ್ಯ ಅಭಿವೃದ್ಧಿಗೆ ಹಣ ಬಳಸಲಾಗುತ್ತಿದೆ ಎಂದರು.

ಅತಿಥಿ ಶಿಕ್ಷಕರ ನೇಮಕಾತಿಗೂ ಆದ್ಯತೆ ನೀಡಲಾಗಿದ್ದು, ಮೊದಲ ವರ್ಷದಲ್ಲಿ ಸುಮಾರು ₹18.34 ಕೋಟಿ ವೆಚ್ಚದಲ್ಲಿ 2,684 ಶಿಕ್ಷಕರನ್ನು ನೇಮಕ ಮಾಡಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

ಇದೇ ವೇಳೆ ಕಲ್ಯಾಣ ಕರ್ನಾಟಕದಲ್ಲಿ ಕರ್ನಾಟಕ ಪಬ್ಲಿಕ್ ಸ್ಕೂಲ್‌ಗಳ () ಅಭಿವೃದ್ಧಿಗೂ ಸರ್ಕಾರ ಮುಂದಾಗಿದೆ. ಪ್ರತಿ ಎರಡು ಗ್ರಾಮ ಪಂಚಾಯಿತಿಗಳಿಗೆ ಒಂದು ಸ್ಥಾಪಿಸುವ ಉದ್ದೇಶ ಹೊಂದಿದ್ದು, ಈಗಾಗಲೇ ಸುಮಾರು 294 ಶಾಲೆಗಳ ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ನೇತೃತ್ವದ ಸರ್ಕಾರ ಜನರ ಬಳಿಗೆ ತೆರಳಿ ಅವರ ಸಮಸ್ಯೆಗಳನ್ನು ಆಲಿಸುವ ಮತ್ತು ಸರ್ಕಾರದ ಯೋಜನೆಗಳನ್ನು ಜನರ ಮನೆ ಬಾಗಿಲಿಗೆ ತಲುಪಿಸುವ ಕಾರ್ಯಕ್ಕೆ ಆದ್ಯತೆ ನೀಡುತ್ತಿದೆ ಎಂದು ಸಚಿವರು ಹೇಳಿದರು.ಕೊನೆಯಲ್ಲಿ, ಸಮಾಜದ ಭವಿಷ್ಯ ರೂಪಿಸುವ ಶಿಕ್ಷಕರಿಗೆ ಶಿಕ್ಷಕರ ದಿನಾಚರಣೆ ಶುಭಾಶಯಗಳು ತಿಳಿಸಿದ ಸಚಿವರು, ಯುವ ಪೀಳಿಗೆಗೆ ಉತ್ಸಾ ಹ ಮತ್ತು ಸ್ಫೂರ್ತಿ ನೀಡುವ ಕಾರ್ಯವನ್ನು ಶಿಕ್ಷಕರು ಮುಂದುವರಿಸಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕ ಬಸನಗೌಡ ದದ್ದಲ್, ಮಾಜಿ ಸಚಿವರು ಹಾಗೂ ಹಾಲಿ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಭೋಸರಾಜು, ತಾಲೂಕ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ ಕಿಶೋರ್ ಪಾಟೀಲ್, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಮಲ್ಲಿಕಾರ್ಜುನ, ಡಯಟ್ ಉಪ ನಿರ್ದೇಶಕ ಚಂದ್ರಶೇಖರ ಭಂಡಾರಿ, ರಾಯಚೂರು ಕ್ಷೇತ್ರ ಶಿಕ್ಷಣಾಧಿಕಾರಿ ಡಾ.ಈರಣ್ಣ ಕೋಸಗಿ, ಸಾಹಿತಿ ಕೋರೆನಲ್. ಶಿಕ್ಷಕರ ಸಂಘದ ಪದಾಧಿಕಾರಿಗಳು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

ದಲಿತರು ಅಟ್ರಾಸಿಟಿ ಪ್ರಕರಣಗಳನ್ನು ಕಡಿಮೆ ಮಾಡಿ ಸಾಮರಸ್ಯದಿಂದ ಬದುಕಬೇಕು: ಸಚಿವ ಕೆ.ಹೆಚ್ ಮುನಿಯಪ್ಪ

ಬಸನಗೌಡ ದದ್ದಲ್,ಕರೆಮ್ಮಾ ಜಿ ನಾಯಕ, ಜಿಲ್ಲಾಧಿಕಾರಿ ಪೂವಿತಾ ಎಸ್, ಹೆಚ್ಚುವರಿ ಜಿಲ್ಲಾಧಿಕಾರಿ ಶಿವಾನಂದ ಭಜಂತ್ರಿ, ಸಹಾಯಕ ಆಯುಕ್ತ ಹಂಪಣ್ಣ ಸಜ್ಜನ್, ಎಸ್ ಪಿ ಅರುಣಾಂಗ್ಶುಗಿರಿ, ಪಾಲಿಕೆಯ ಆಯುಕ್ತ ಜುಬಿನ್ ಮೊಹಪಾತ್ರ, ಜಿಲ್ಲಾ ಪಂಚಾಯತ ಸಿಇಓ ಈಶ್ವರ ಕುಮಾರ ಕಾಂದೂ, ಸಮಾಜ ಕಲ್ಯಾಣ ಇಲಾಖೆಯ ಪ್ರಭಾರಿ ಉಪ ನಿರ್ದೇಶಕ ಕೃಷ್ಣ ಶಾವಂತಗೇರಿ ಸೇರಿದಂತೆ ಅನೇಕರು ಇದ್ದರು

ಶ್ರೀರಾಮನಗರದಲ್ಲಿ ಸಂಭ್ರಮದ ಶಿಕ್ಷಕರ ದಿನಾಚರಣೆ

ಹರ್ಷಿತಾ, ಪಂಚವತಿ, ಮಮತಾ, ಫಾತಿಮಾ ಸೇರಿದಂತೆ ವಿದ್ಯಾರ್ಥಿಗಳು ಮಾತನಾಡಿ ಎಲ್ಲಾ ಶಿಕ್ಷಕರಿಗೂ ಗುರುವಂದನೆ ಸಲ್ಲಿಸಿದರು. ಅಧ್ಯಕ್ಷತೆ ವಹಿಸಿಕೊಂಡಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ.ಕರಿಗೂಳಿ ಯವರು ಮಾತನಾಡಿ ಶಿಕ್ಷಕರ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿಗಳೇ ಮುಂದಾಳತ್ವ ವಹಿಸಿ ಈ ಕಾರ್ಯಕ್ರಮ ರೂಪಿಸಿ, ವ್ಯವಸ್ಥಿತವಾಗಿ ಗುರುಗಳನ್ನು ಗೌರವಿಸುತ್ತಿರುವುದು ಅತ್ಯಂತ ಸಂತಸದ ಸಂಗತಿ ಎಂದರು,

ಈ ನಾಯಕತ್ವ ಗುಣಗಳೇ ಮುಂದೆ ನಿಮ್ಮೆಲ್ಲರನ್ನು ಯಶಸ್ಸಿ ನೆಡೆಗೆ ಕೊಂಡೊಯ್ಯಲಿವೆ ಎಂದು ಹರ್ಷದಿಂದ ಶುಭ ಹಾರೈಸಿದರು, ತಂತ್ರಜ್ಞಾನ ಯುಗದಲ್ಲಿ ಗುರುಪ್ರಜ್ಞೆಯ ಭಾರತೀಯ ನೈಜ ಸಂಸ್ಕೃತಿಯನ್ನು ಮರೆಯಬೇಡಿ ಎಂದು ಕಿವಿ ಮಾತು ಹೇಳಿದರು. ಅಧ್ಯಾಪಕರಾದ ಡಾ.ಸರಫರಾಜ್ ಅಹಮದ್ ಅವರು ವಿದ್ಯಾರ್ಥಿಗಳಿಗೆ ಶಿಕ್ಷಕರ ದಿನಾಚರಣೆಯ ಶುಭಾಶಯಗಳನ್ನು ಕೋರಿದರು. ಕಾರ್ಯಕ್ರಮದಲ್ಲಿ ಅಧ್ಯಾಪಕರಾದ ವೀರೇಶ, ಶಂಕ್ರಪ್ಪ ಎಂ, ರವಿಕುಮಾರ, ಡಾ.ಶಶಿಕುಮಾರ,ಡಾ.ವಿರುಪಾಕ್ಷ.ಕೆ, ಉಪನ್ಯಾಸಕರಾದ ವೆಂಕಟರಾಜು,ದೇವರಾಜ, ಬಾಲಚಂದ್ರಪ್ಪ,ಈಶಪ್ಪ, ಕಲ್ಪನಾ, ರವಿಕುಮಾರ ರೋಜಾ, ಮಾರೆಪ್ಪ, ವಿನಯಕುಮಾರ, ಕನಕಪ್ಪ, ಆಡಳಿತ ಸಿಬ್ಬಂದಿ ಜಬೀನಾ ಬೇಗಂ, ಹಾಗೂ ಸಹಾಯಕ ಸಿಬ್ಬಂದಿಯಾದ ಶಾಂತಿ, ಶರಣ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ಸಾರ್ವಜನಿಕರ ಕುಂದುಕೊರತೆಗಳನ್ನು ಸ್ಥಳದಲ್ಲೇ ಆಲಿಸಿ, ತ್ವರಿತವಾಗಿ ಪರಿಹಾರ: ಸಚಿವ ಡಾ.ಅಜಯ್ ಧರ್ಮಸಿಂಗ್

ರಾಜ್ಯದ ಜನಸಾಮಾನ್ಯರ ಕುಂದುಕೊರತೆಗಳಿಗೆ ತಕ್ಷಣವೇ ಸ್ಪಂದಿಸುವ ಮತ್ತು ಅವರ ಸಮಸ್ಯೆಗಳನ್ನು ಸ್ಥಳದಲ್ಲೇ ಪರಿಹರಿಸುವ ಮಹತ್ವಾಕಾಂಕ್ಷೆಯ ಜನಪರ ಆಡಳಿತಕ್ಕೆ ರಾಜ್ಯ ಸರ್ಕಾರ ಮತ್ತಷ್ಟು ಒತ್ತು ನೀಡಿದೆ. ನೆರೆಯ ಬಳ್ಳಾರಿ ಜಿಲ್ಲೆಯ ಕೂಡ್ಲಿಗಿಯಲ್ಲಿ ಈಗಾಗಲೇ ಯಶಸ್ವಿಯಾಗಿ ಸಿ.ಎಂ ಅವರು ಈ ವಿನೂತನ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದು ಇದು ರಾಜ್ಯಾದ್ಯಂತ ವಿಸ್ತರಿಸಿ ಅನುಷ್ಠಾನಗೊಳಿಸಲಾಗುತ್ತಿದೆ ಮಾನ್ವಿಯಲ್ಲಿ ಇಂದು ಈ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದೆವೆ ಎಂದರು.

ರಾಜ್ಯಮಟ್ಟದಲ್ಲಿ ಆಡಳಿತ ವ್ಯವಸ್ಥೆಯನ್ನು ಇನ್ನಷ್ಟು ಸರಳಗೊಳಿಸುವ ಮತ್ತು ಜನರ ಮನೆಬಾಗಿಲಿಗೇ ಸರ್ಕಾರಿ ಸೇವೆಗಳನ್ನು ತಲುಪಿಸುವ ಉದ್ದೇಶದಿಂದ ಈ ಮಹತ್ವದ ಹೆಜ್ಜೆಯನ್ನು ಇಡಲಾಗಿದೆ. ಕೇವಲ ಪ್ರಚಾರಕ್ಕೆ ಸೀಮಿತವಾಗದೆ, ಆಡಳಿತ ಯಂತ್ರದ ಪ್ರಾಮಾಣಿಕತೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳನ್ನು ಈ ಪ್ರಕ್ರಿಯೆಯಲ್ಲಿ ತೊಡಗಿಸಿಕೊಳ್ಳಲಾಗಿದೆ ಎಂದರು.

ಕೊನೆಯ ಭಾಗದ ರೈತರಿಗೆ ನೀರು ಹರಿಸಲು ಜಿಲ್ಲಾಧಿಕಾರಿಗಳ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಅದಕ್ಕಾಗಿ ಇತ್ತೀಚಿಗೆ ಪ್ರಾದೇಶಿಕ ಆಯುಕ್ತ ನೇತೃತ್ವದಲ್ಲಿ ರೈತರೊಂದಿಗೆ ಸಭೆ ಮಾಡಿ, ರೈತರ ಬೆಂಬಲಕ್ಕೆ ನಿಂತಿದ್ದಾರೆ. ಅವರಿಗೆ ರೈತರು ಸಹಕರಿಸಿಬೇಕು ಎಂದರು.

ಜನರ ಕಷ್ಟ-ನಷ್ಟಗಳಿಗೆ ತಕ್ಷಣ ಪರಿಹಾರ ಸಿಗಬೇಕೆಂಬುದು ಇದರ ಮುಖ್ಯ ಉದ್ದೇಶವಾಗಿದೆ. ಜನರ ಬೇಡಿಕೆ ಏನಿರುತ್ತದೆಯೋ ಆ ಬೇಡಿಕೆಗೆ ಸರಿಯಾದ ರೀತಿಯಲ್ಲಿ ಪರಿಹಾರ ಸಿಗಬೇಕು, ಅದು ನಿಗದಿತ ಸಮಯದಲ್ಲಿ ಸಿಗಬೇಕೆಂಬ ಒಂದು ಉದ್ದೇಶದಿಂದ ಈ ಯೋಜನೆಗೆ ಬಹಳಷ್ಟು ಮಹತ್ವವಾದಂತಹ ಪ್ರಯತ್ನ ಮಾಡಿ, ಅನೇಕ ಅಧಿಕಾರಿಗಳ ಜೊತೆಯಲ್ಲಿ, ಜನಪ್ರತಿನಿಧಿಗಳ ಜೊತೆಯಲ್ಲಿ ಚರ್ಚೆ ಮಾಡಿ, ಈ ಯೋಜನೆ ಜಾರಿಗೆ ತರತಕ್ಕಂತಹ ಒಂದು ಪ್ರಯತ್ನ ಮುಖ್ಯಮಂತ್ರಿಗಳು ಮಾಡುತ್ತಿದ್ದಾರೆ ಎಂದರು.

ಮಲ್ಲಿಕಾರ್ಜುನ ಖರ್ಗೆ ಹಾಗೂ ದಿವಂಗತ ಧರ್ಮಸಿಂಗ್ ಅವರ ಶ್ರಮದಿಂದ ಈ ಭಾಗದಲ್ಲಿ 371 ಜೆ ಜಾರಿಗೆ ಬಂದಿದೆ. ಮೊದಲು ಈ ಭಾಗದಲ್ಲಿ ಕ್ಲಾಸ್ ಒನ್ ಆಫೀಸರ್ ಕಡಿಮೆ ಸಂಖ್ಯೆಯಲ್ಲಿ ಸಿಗುತ್ತಿದ್ದರು. ಆದರೆ 371 ಜೆ ಕಲಂ ಜಾರಿಯಾದ ನಂತರ ಈ ಭಾಗದಲ್ಲಿ ಅನೇಕ ಕ್ಲಾಸ್ ಒನ್ ಆಫೀಸರ್ ಸಿಗುತ್ತಾರೆ. ಅಲ್ಲದೆ ಅನೇಕರು ಸರ್ಕಾರಿ ಹುದ್ದೆಗೆ ಆಯ್ಕೆಯಾಗಿದೆ ಎಂದರು.

ಮಾನ್ವಿ ಶಾಸಕ ಹಂಪಯ್ಯ ನಾಯಕ ಅವರು ಮಾತನಾಡಿ, ಅಭಿವೃದ್ಧಿ, ಕೆಲಸ ಕಾರ್ಯಗಳು ಎಲ್ಲರಿಗೂ ಸಿಗಬೇಕು. ಮಾನ್ವಿಯಲ್ಲಿ ಬರದ ಛಾಯೆ ನಿರ್ಮಾಣವಾಗಿದ್ದು, ದನಕರುಗಳಿಗೆ ಕುಡಿಯಲು ನೀರು ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಬಿತ್ತನೆ ಮಾಡಿದ ಬೆಳೆಗಳು ನೀರು ಇಲ್ಲದೆ. ಬಾಡುತ್ತಿವೆ ಕೂಡಲೇ ಎರಡನೇ ಪಟ್ಟಿಯಲ್ಲಿ ಮಾನ್ವಿ ತಾಲೂಕನ್ನು ಬರ ತಾಲೂಕು ಎಂದು ಘೋಷಣೆ ಮಾಡಬೇಕು. ಅಲ್ಲದೆ ಮುಂದಿನ ದಿನಗಳಲ್ಲಿ ಕ್ಷೇತ್ರಕ್ಕೆ ಅಭಿವೃದ್ಧಿ ಕೆಲಸ ಕಾರ್ಯಗಳನ್ನು ಮುಂದುವರಿಸಬೇಕು. ಜನರು ತಮ್ಮ ಅಹವಾಲುಗಳನ್ನು ಲಿಖಿತ ರೂಪದಲ್ಲಿ ಮನವಿ ನೀಡಿ, ತಮ್ಮ ಸಮಸ್ಯೆ ಬಗೆಹರಿಸಿಕೊಳ್ಳಬೇಕು. ಸ್ಥಳದಲ್ಲಿಯೇ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದಾರೆ. ಜನರು ಇದರ ಸದುಪಯೋಗ ಪಡೆಯಬೇಕು ಎಂದರು.

ಇದೇ ಸಂದರ್ಭದಲ್ಲಿ ಮಾನ್ವಿ ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಗಫೂರ್

ಸಾಬ್, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಿ.ಕೆ.ಅಮರೇಶ, ಮಾನ್ಯ ಮುಖ್ಯಮಂತ್ರಿಗಳ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಎಸ್.ಎಸ್.ನಕುಲ್, ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಗ್ಶು ಗಿರಿ., ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ , ಮಾನ್ವಿ ತಹಶಿಲ್ದಾರ್ ಭೀಮರಾಯ ರಾಮಸಮುದ್ರ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ವಿವಿಧ ಗ್ರಾಮಗಳಿಂದ ಆಗಮಿಸಿದ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



ಸಂಭ್ರಮದ ಶ್ರೀ ಕೃಷ್ಣ ಜನಾಷ್ಟಮಿ ಆಚರಣೆ

ಸಿರುಗುಪ್ಪ-ಇಲ್ಲಿನ ಎಸ್.ಇ.ಎಸ್ ಬಾಲಕಿಯರ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಶ್ರೀ ಕೃಷ್ಣ ಜನ್ಮಾಷ್ಟಮಿಯ ಅಂಗವಾಗಿ ವಿದ್ಯಾರ್ಥಿನಿಯರಿಗೆ ಶುಕ್ರವಾರ ಆಯೋಜಿಸಿದ ಶ್ರೀ ಕೃಷ್ಣ ವೇಷಭೂಷಣ ಸ್ಪರ್ಧೆಯಲ್ಲಿ ಪುಟಾಣಿ ಮಕ್ಕಳು ಕೃಷ್ಣ ಮತ್ತು ರಾಧೆಯರ ಮನಮೋಹಕ ವೇಷಧರಿಸಿ ಎಲ್ಲರ ಗಮನ ಸೆಳೆದರು.

ಸಂಸ್ಥೆಯ ಅಧ್ಯಕ್ಷ ಬಿ.ಇ. ದೊಡ್ಡಯ್ಯ, ಪ್ರೌಢಶಾಲೆಯ ಮುಖ್ಯಗುರು ಕೆ.ಎಂ.ಗಿರಿಜಾ, ಉಪನ್ಯಾಸಕಿ ಅನುಸೂಯ ದೇವಿ ಹಾಗೂ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರು ಕೆ.ಎಚ್. ಶ್ರೀನಿವಾಸ ರಾವ್ ಉಪಸ್ಥಿತರಿದ್ದರು.

ದಲಿತರ ಮೇಲಾಗುತ್ತಿರುವ ದೌರ್ಜನ್ಯಗಳನ್ನು ಖಂಡಿಸಿ ಸೆ.7 ರಂದು ಪ್ರತಿಭಟನೆ



ಬೀದರ್,ಸೆ.05-

ಜಿಲ್ಲೆಯಲ್ಲಿ ದಲಿತರ ಮೇಲಾಗುತ್ತಿರುವ ದೌರ್ಜನ್ಯಗಳನ್ನು ಖಂಡಿಸಿ ಸೆ.7 ರಂದು ದಲಿತ ಸಂಘಟನೆಗಳ ಒಕ್ಕೂಟದ ವತಿಯಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕೂಟದ ಅಧ್ಯಕ್ಷ ವಿನೋದ್ ರತ್ನಾಕರ್ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿ, ನಮ್ಮ ಜಿಲ್ಲೆಯಲ್ಲಿ ಸುಮಾರು ವರ್ಷಗಳಿಂದ ನಿರಂತರವಾಗಿ ದಲಿತರ ಮೇಲೆ ಅನ್ಯಾಯ, ದಬ್ಬಾಳಿಕೆ, ಅತ್ಯಾಚಾರ, ಕೊಲೆಯಂತಹ ಘಟನೆಗಳು ಸಂಭವಿಸುತ್ತಿವೆ. ಸುಮಾರು ಪ್ರಕರಣಗಳು ನಡೆದರು ಕೂಡ ಇಲ್ಲಿನ ರಾಜಕೀಯ ಪ್ರಭಾವಿ ವ್ಯಕ್ತಿಗಳು ಮತ್ತು ಪೊಲೀಸ್ ಇಲಾಖೆ ಸೂಕ್ತವಾದ ಕಾರ್ಯ ನಿರ್ವಹಿಸುತ್ತಿಲ್ಲ ಎಂದು ಆರೋಪಿಸಿದರು.

ಇದರ ವಿರುದ್ಧ ನಿರಂತರವಾಗಿ ಹೋರಾಟಗಳು ನಡೆಸಿದ್ದೇವೆ. ಆದರೂ ಕೂಡ ಬೀದರ್ ಜಿಲ್ಲೆಯಲ್ಲಿ ದಲಿತರ ಮೇಲಿನ ಅನ್ಯಾಯ ಅತ್ಯಾಚಾರವನ್ನು ನಿಲ್ಲಿಸುವ ಸೂಚನೆಗಳು ಕಾಣುತ್ತಿಲ್ಲ. ಭಾಲ್ಕಿ ತಾಲೂಕಿನ ಜಿಗ್ನಾಳ್ ಗ್ರಾಮದಲ್ಲಿ ದಲಿತ ವ್ಯಕ್ತಿಯ ಹತ್ಯೆಯಾಯಿತು. ಔರಾದ್ ತಾಲೂಕಿನಲ್ಲಿ ದಲಿತ ಯುವತಿಯ ಹತ್ಯೆಯಾಯಿತು. ಇದೀಗ ಮಳಚಾಪುರ್ ಗ್ರಾಮದಲ್ಲಿ ದಲಿತರ ಮನೆಗಳನ್ನು ಕೆಡುವುದಕ್ಕೆ ಬಂದಿದ್ದಾರೆ ಎಂದು ಅವರು ಕಿಡಿಕಾರಿದರು.

ಗೌರವಾಧ್ಯಕ್ಷ ರಾಜಕುಮಾರ್ ಮೂಲಭಾರತಿ ಅವರು ಮಾತನಾಡಿ, ನಮ್ಮ ಜಿಲ್ಲೆಗೆ ಬಹಳಷ್ಟು ಒಳ್ಳೆಯ ಪೊಲೀಸ್ ವರಿಷ್ಠಾಧಿಕಾರಿಗಳು ಬಂದು ಹೋಗಿದ್ದಾರೆ. ಆವಾಗ ದಲಿತ ಹೋರಾಟಗಾರರ ಮೇಲೆ ಕಿರಕುಳ ನಡೆದಿಲ್ಲ. ಆದರೆ, ಇವಾಗಿನ ಎಸ್ಪಿ ಅವರಿಗೆ ದಲಿತರು, ಹೋರಾಟ ಎಂದರೆ ಅಲರ್ಜಿಯಾಗಿದೆ. ಹೋರಾಟಗಳನ್ನು ಹತ್ತಿಕ್ಕಲು ಅವರು ಸರ್ಕಾರದಿಂದೆನಾದರೂ ಅನುಮತಿ ಪಡದೆದುಕೊಂಡು ಬಂದಿದ್ದಾರೆಯೇ ಎಂದು ಎಸ್ಪಿ ಪ್ರದೀಪ್ ಗುಂಟಿ ಅವರ ವಿರುದ್ಧ ಹರಿಹಾಯ್ದರು.

ಎಟಿಎಂ ದರೋಡೆ ಪ್ರಕರಣದಲ್ಲಿ ದಲಿತ ಯುವಕನ ಹತ್ಯೆಯಾಯಿತು. ಆ ಪ್ರಕರಣದ ಆರೋಪಿಗಳನ್ನು ಸುಮಾರು 18 ರಿಂದ 19 ತಿಂಗಳ ನಂತರ ಅವರನ್ನು ಬಂಧಿಸಲಾಯಿತು. ಆದರೆ, ಆರೋಪಿಗಳನ್ನು ಬಂಧಿಸಿದ ನಂತರ ನಗರದಲ್ಲಿ ವಿಜಯೋತ್ಸವ ನಡೆಸಲಾಯಿತು. ನಮ್ಮ ಯುವಕನ ಹತ್ಯೆಯಾದ ಸ್ಥಳದಲ್ಲಿ ಹೋಗಿ ಪೊಲೀಸರು ವಿಜಯೋತ್ಸವ ನಡೆಸಿದರು. ಇವರಿಗೆ ಮಾನ ಮರ್ಯಾದೆ ಇಲ್ಲವಾ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸೆ.7ರ ಪ್ರತಿಭಟನೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಕರೆ ನೀಡಿದರು.

ರಾಹುಲ್ ಖಂದಾರೆ ಅವರು ಮಾತನಾಡಿ, ಬೀದರ್ ಜಿಲ್ಲೆಯಲ್ಲಿ ಅತ್ಯಂತ ಹೆಚ್ಚು ದಲಿತರ ಮೇಲೆ ದಬ್ಬಾಳಿಕೆ ನಡೆಯುತ್ತಿರುವುದು ಉಸ್ತುವಾರಿ ಸಚಿವರ ಕ್ಷೇತ್ರವಾದ ಭಾಲ್ಕಿ ತಾಲೂಕಿನಲ್ಲಿ ನಡೆಯುತ್ತಿವೆ. ಭಾಲ್ಕಿಯ ಮೇಹಕರ್ ಪೊಲೀಸ್ ಠಾಣೆಯಲ್ಲಿ ಅತೀ ಹೆಚ್ಚು ಘಟನೆ ನಡೆಯುತ್ತಿವೆ. ಘಟನೆ ನಡೆದಾಗ ಪೊಲೀಸ್ ಅಧಿಕಾರಿಗಳು ರಜೆ ಹಾಕುತ್ತಿದ್ದಾರೆ. ಇದೆಲ್ಲ ಪ್ಲ್ಯಾನ್ ಮಾಡಿಯೇ ಮಾಡಲಾಗುತ್ತಿದೆ ಎಂದರು.

ಭಾಲಕಿ ತಾಲೂಕಿನ ಮಳಚಾಪುರದಲ್ಲಿ ದಲಿತರ ಮನೆಗಳು ಕೆಡವಲಾಗುತ್ತಿದೆ. ಆ ದಲಿತರ ಮನೆಗಳಲ್ಲಿ ಒಂದು ಮನೆ ಸರ್ಕಾರದಿಂದಲೆ ಮಂಜೂರಾಗಿದೆ. ಆದರೂ ಅದನ್ನು ಕೆಡುವುದಕ್ಕೆ ಮುಂದಾಗಿದ್ದಾರೆ.

ಧ್ವನಿ ಇಲ್ಲದವರ ಪರವಾಗಿ ಧ್ವನಿ ಎತ್ತುವವರ ಧ್ವನಿ ಅಡಗಿಸುವ ಕೆಲಸವಾಗುತ್ತಿದೆ. ಆದ್ದರಿಂದಾಗಿ ಜಿಲ್ಲೆಯ ಜನರು ಸೆ.7 ರ ಪ್ರತಿಭಟನೆಯಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ದಲಿತ್ ಪ್ಯಾಂಥರ್‌ನ ರಾಜ್ಯಾಧ್ಯಕ್ಷ ರಾಹುಲ್ ದಲಾಲೆ, ಒಕ್ಕೂಟದ ಜಿಲ್ಲಾ ಉಪಾಧ್ಯಕ್ಷ ರಾಜಕುಮಾರ್ ಸಿಂಧೆ, ಗೌತಮ್ ಕಾಂಬಳೆ, ಗೌತಮ್ ಬಗದಲಕರ್, ಪ್ರಕಾಶ್ ರಾವಣ, ಹರ್ಷಿತ್ ದಾಂಡೇಕರ್, ಮಾರುತಿ ಕಾಂಬಳೆ ಹಾಗೂ ದೀಲಿಪಕುಮಾರ್ ವರ್ಮಾ ಸೇರಿದಂತೆ ಇತರರು ಇದ್ದರು.

ಬೀದರ್ ಬರಪೀಡಿತ ಜಿಲ್ಲೆ ಘೋಷಿಸಲು ಆಗ್ರಹಿಸಿ ನಾಲ್ಕನೇ ದಿನವೂ ಮುಂದುವರಿದ ರೈತರ ಧರಣಿ ಸತ್ಯಾಗ್ರಹ



ಭಾಲ್ಕಿ ,ಸೆ.05-

ಬೀದರ್ ಜಿಲ್ಲೆಯು ಬರಪೀಡಿತ ಜಿಲ್ಲೆ ಎಂದು ಘೋಷಿಸಲು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ನಡೆಯುತ್ತಿರುವ ರೈತರ ಪ್ರತಿಭಟನೆಯು ನಾಲ್ಕನೇ ದಿನವೂ ಮುಂದುವರೆದಿದ್ದು, ಶುಕ್ರವಾರ ಬೆಳಿಗ್ಗೆ ರೈತರು ರಸ್ತೆ ಮೇಲೆಯೇ ಸ್ನಾನ ಮಾಡುವ ಮೂಲಕ ಆಕ್ರೋಶ ಹೊರಹಾಕಿದರು.

ಜಿಲ್ಲೆಯ ಇನ್ನುಳಿದ ತಾಲೂಕುಗಳಾದ ಔರಾದ್, ಕಮಲನಗರ, ಹುಲಸೂರ್ ಹಾಗೂ ಭಾಲ್ಕಿ ತಾಲೂಕುಗಳನ್ನು ಆದಷ್ಟು ಬೇಗ ಬರಪೀಡಿತ ತಾಲೂಕುಗಳೆಂದು ಘೋಷಣೆ ಮಾಡಬೇಕು. ಹಾಗೆಯೇ ಪ್ರತಿ ಎಕರೆ ಭೂಮಿಗೆ 50 ಸಾವಿರ ರೂ. ಪರಿಹಾರ ನೀಡಬೇಕು. ಜಿಲ್ಲೆಯಲ್ಲಿ ಕಬ್ಬು ಬೆಳೆ ಪ್ರದೇಶ ಹೆಚ್ಚಾಗುತ್ತಿದ್ದು, ಪ್ರತಿ ಟನ್ ಕಬ್ಬಿಗೆ 5 ಸಾವಿರ ರೂ. ದರ ನಿಗದಿ ಮಾಡಬೇಕು. ವಿಮೆ ಪಾವತಿಸಿದ ರೈತರಿಗೆ ಪರಿಹಾ ಧನ ಬಿಡುಗಡೆ ಮಾಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದ್ದಾರೆ.

ರೈತರ ಸಮಸ್ಯೆಗಳ ಪರಿಹಾರಕ್ಕಾಗಿ ನಡೆಯುತ್ತಿರುವ ಈ ಹೋರಾಟಕ್ಕೆ ವಿವಿಧ ರೈತ ಮುಖಂಡರು ಹಾಗೂ ಹೋರಾಟಗಾರರು ಉಪಸ್ಥಿತರಿದ್ದು ಬೆಂಬಲ ವ್ಯಕ್ತಪಡಿಸಿದ್ದು, ನಮ್ಮ ಬೇಡಿಕೆಗಳನ್ನು ಈಡೇರಿಸುವವರೆಗೂ ನಾವು ನಮ್ಮ ಪ್ರತಿಭಟನೆ ಹಿಂಪಡೆಯುವುದಿಲ್ಲ ಎಂದು ಎಚ್ಚರಿಕೆ ನೀಡಲಾಗಿದೆ.

ಈ ಸಂದರ್ಭದಲ್ಲಿ ರೈತ ಮುಖಂಡ ಮಲ್ಲಿಕಾರ್ಜುನ್ ಸ್ವಾಮಿ, ನಾಗಶೆಟ್ಟೆಪ್ಪ ಲಂಜವಾಡೆ, ಜೈರಾಜ್ ಕೊಳ್ಳಾ, ಕೆ.ಡಿ. ಗಣೇಶ್, ಪಂಡರಿ ಮೇತ್ರೆ, ಶಿವಾಜಿ ಮೇತ್ರೆ, ವಿಜಯಕುಮಾರ್ ಕೊಣೆ, ಭದ್ರಿ ಪಾತ್ರೆ, ಓಂಪ್ರಕಾಶ್, ಅಶೋಕ್ ಕಾರಬಾರಿ, ದೀಪಕ್ ಶಿಂಧೆ, ದಯಾನಂದ್ ಖಾಷೆಂಪುರ್, ಮಲ್ಲಿಕಾರ್ಜುನ್ ಬಿರಾದಾರ್, ಶಿವಲಿಂಗಯ್ಯ ಸ್ವಾಮಿ, ಸುಭಾಷ್ ಮಾಷೆಟ್ಟೆ ಹಾಗೂ ವೀರಶೆಟ್ಟಿ ಬಕ್ಕಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪಿ.ಎಂ. ಕಿಸಾನ್ ಯೋಜನೆಯ ಅರ್ಹ ಫಲಾನುಭವಿಗಳು ಇ-ಕೆವೈಸಿ ಮಾಡಿಸುವುದು ಕಡ್ಡಾಯ: ಕಲಬುರಗಿ ಡಿಸಿ

ಕಲಬುರಗಿ,ಸೆ.04-

ಪಿ.ಎಂ. ಕಿಸಾನ್ ಯೋಜನೆಯ ಅರ್ಹ ಫಲಾನುಭವಿಗಳು (ರೈತರು) ಮುಂದಿನ ಕಂತಿನ ನೆರವು ಪಡೆಯಲು ಬಯೋಮೆಟ್ರಿಕ್ ಅಥವಾ ಮುಖ () ದೃಢೀಕರಣ ಆಧಾರಿತ ಇ-ಕೆವೈಸಿ ಮಾಡಿಸುವುದು ಕಡ್ಡಾಯವಾಗಿದೆ. ಆದ್ದರಿಂದ ರೈತರು ತಮ್ಮ ಹತ್ತಿರದ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ಅಥವಾ ಪಿ.ಎಂ.ಕಿಸಾನ್ ಮೊಬೈಲ್ ಅಪ್ಲಿಕೇಶನ್ ಡೌನ್‌ಲೋಡ್ ಮಾಡಿಕೊಂಡು, ಸ್ಮಾರ್ಟ್ ಮೂಲಕ ಮುಖ ದೃಢೀಕರಣ ಮಾಡಿ ಸ್ವತಃ ಇ-ಕೆವೈಸಿ ಪೂರ್ಣಗೊಳಿಸಬಹುದಾಗಿದೆ ಎಂದು ಕಲಬುರಗಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರು ತಿಳಿಸಿದ್ದಾರೆ.



ಈ ಯೋಜನೆಯಡಿ ನಕಲಿ ಫಲಾನುಭವಿಗಳನ್ನು ತಡೆಯಲು, ಮೃತರನ್ನು ಪಟ್ಟಿಯಿಂದ ಕೈಬಿಟ್ಟು, ಅರ್ಹ ರೈತರಿಗೆ ಪಾರದರ್ಶಕವಾಗಿ ಹಣ ಜಮೆ ಮಾಡಲು ಕೇಂದ್ರ ಸರ್ಕಾರ ಈ ಕ್ರಮ ಕೈಗೊಂಡಿದೆ. ಆಧಾರ್ ಒಟಿಪಿ ಆಧಾರಿತ ಇ-ಕೆವೈಸಿಯಿಂದಾಗಿ ಮೃತಪಟ್ಟವರ ಖಾತೆಗಳಿಗೂ ಹಣ ವರ್ಗಾವಣೆಯಾಗುತ್ತಿದ್ದ ಪ್ರಕರಣಗಳು ಬೆಳಕಿಗೆ ಬಂದಿದ್ದರಿಂದ, ಕೇಂದ್ರ ಸರ್ಕಾರವು ಒಟಿಪಿ ವ್ಯವಸ್ಥೆ ರದ್ದುಗೊಳಿಸಿ, ಬಯೋಮೆಟ್ರಿಕ್ ಅಥವಾ ಫೇಸ್ ಆಧಾರಿತ ಇ-ಕೆವೈಸಿಗೆ ಮಾತ್ರ ಅವಕಾಶ ನೀಡಿದೆ.

ಪ್ರತಿ ಫಲಾನುಭವಿ ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಮಾಡಿಸಿದ್ದರೂ ಇ-ಕೆವೈಸಿ ಪ್ರಕ್ರಿಯೆ ಮಾಡಬೇಕಿದೆ. ಜಿಲ್ಲೆಯಲ್ಲಿ ಒಟ್ಟು 1,99,067 ರೈತರ ಇ-ಕೆವೈಸಿ ಬಾಕಿ ಇದೆ. (ಅಫಜಲಪೂರ-26786, ಆಳಂದ-31954, ಚಿಂಚೋಳಿ-19324, ಚಿತ್ತಾಪೂರ-17097, ಕಲಬುರಗಿ-18418, ಕಾಳಗಿ-13792, ಕಮಲಾಪೂರ-11156, ಜೇವರ್ಗಿ-21056, ಸೇಡಂ-20621, ಶಹಾಬಾದ-3364 ಹಾಗೂ ಯಡ್ರಾಮಿ-15499).

ಹೆಚ್ಚಿನ ಮಾಹಿತಿಗಾಗಿ ರೈತರು ತಮ್ಮ ಹತ್ತಿರದ ರೈತಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಸಂಪರ್ಕಿಸಲು ಕೋರಲಾಗಿದೆ.

ಬರ ಘೋಷಣೆಗೆ ಆಗ್ರಹಿಸಿ ರೈತರ ಬೃಹತ್ ಪ್ರತಿಭಟನೆ; ಯಡ್ರಾಮಿಯಲ್ಲಿ ಅಂಗಡಿ-ಮುಗ್ಗಟ್ಟು ಬಂದ್



ಯಡ್ರಾಮಿ,ಸೆ.05-

ತಾಲೂಕಿನಲ್ಲಿ ಮಳೆ ಕೊರತೆಯಿಂದ ಕೃಷಿ ಚಟುವಟಿಕೆಗಳಿಗೆ ತೀವ್ರ ಹಿನ್ನಡೆಯಾಗಿದ್ದು, ಯಡ್ರಾಮಿ ತಾಲೂಕನ್ನು ತಕ್ಷಣ ಬರಪೀಡಿತ ತಾಲೂಕು ಎಂದು ಘೋಷಿಸಿ ರೈತರಿಗೆ ಸೂಕ್ತ ಪರಿಹಾರ ಕಲ್ಪಿಸಬೇಕು ಎಂದು ಆಗ್ರಹಿಸಿ ವಿವಿಧ ರೈತಪರ ಹಾಗೂ ಸಾಮಾಜಿಕ ಸಂಘಟನೆಗಳ ಮುಖಂಡರು ಮತ್ತು ರೈತರು ಶುಕ್ರವಾರ ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಗೆ ಬೆಂಬಲ ಸೂಚಿಸಿದ ವ್ಯಾಪಾರಸ್ಥರು ಪಟ್ಟಣದ ಬಹುತೇಕ ಅಂಗಡಿ,ಮುಗ್ಗಟ್ಟುಗಳನ್ನು ಬಂದ್ ಮಾಡಿದ್ದರು. ಇದರಿಂದ ಪ್ರಮುಖ ವಾಣಿಜ್ಯ ಪ್ರದೇಶಗಳು ಬಿಕೋ ಎನ್ನುತ್ತಿದ್ದವು.

ಪಟ್ಟಣದ ಸರ್ದಾರ್ ಶರಣಗೌಡ ಇನಾಮ್ದಾರ್ ವೃತ್ತದಿಂದ ಆರಂಭಗೊಂಡ ಪ್ರತಿಭಟನಾ ಮೆರವಣಿಗೆ ಅಂಬೇಡ್ಕರ್ ವೃತ್ತದವರೆಗೆ ನಡೆಯಿತು. ಕೈಯಲ್ಲಿ ಫಲಕಗಳನ್ನು ಹಿಡಿದ ಪ್ರತಿಭಟನಾಕಾರರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ರೈತರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸುವಂತೆ ಒತ್ತಾಯಿಸಿದರು. ಮುಂಗಾರು ಹಂಗಾಮಿನಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆಯಾಗದ ಹಿನ್ನೆಲೆಯಲ್ಲಿ ಬಿತ್ತನೆ ಮಾಡಿರುವ ಬೆಳೆಗಳು ಒಣಗುವ ಹಂತಕ್ಕೆ ತಲುಪಿವೆ. ಮಳೆಯನ್ನೇ ನಂಬಿ ಕೃಷಿ ಚಟುವಟಿಕೆ ನಡೆಸಿರುವ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಆತಂಕ ಎದುರಾಗಿದೆ ಎಂದು ಕರವೇ ಉತ್ತರ ಕರ್ನಾಟಕ ಅಧ್ಯಕ್ಷರ ಕಾರ್ಯದರ್ಶಿ ಸಾಹೇಬ್‌ಗೌಡ ದೇಸಾಯಿ ಹೇಳಿದರು.

ರೈತರ ಜಮೀನುಗಳಿಗೆ ಅಧಿಕಾರಿಗಳು ಭೇಟಿ ನೀಡಿ ಬೆಳೆಗಳ ವಾಸ್ತವ ಸ್ಥಿತಿಯನ್ನು ಪರಿಶೀಲಿಸಬೇಕು. ವೈಜ್ಞಾನಿಕವಾಗಿ ಬೆಳೆ ಹಾನಿ ಸಮೀಕ್ಷೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಬೇಕು. ಬಳಿಕ ವಿಳಂಬವಿಲ್ಲದೆ ಬರಪೀಡಿತ ತಾಲೂಕು ಎಂದು ಘೋಷಿಸಿ ರೈತರಿಗೆ ಪರಿಹಾರ ನೀಡಬೇಕು ಎಂದು ರೈತ ಸಂಘಟನೆಗಳ ಮುಖಂಡ ಮಹಾಂತಗೌಡ ನಂದಿಹಳ್ಳಿ ಆಗ್ರಹಿಸಿದರು.

ತಹಸೀಲ್ದಾರ್‌ಗೆ ಮನವಿ:

ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿದ ಬಳಿಕ ಮುಖಂಡರು ತಾಲೂಕು ಆಡಳಿತವನ್ನು ಸಂಪರ್ಕಿಸಿ ತಹಸೀಲ್ದಾರ್ ಯಲ್ಲಪ್ಪ ಸುಬೇದಾರ ಅವರಿಗೆ ಮನವಿ ಪತ್ರ ಸಲ್ಲಿಸಿದರು. ಮಳೆ ಕೊರತೆಯಿಂದ ಹಾನಿಗೊಳಗಾದ ಬೆಳೆಗಳಿಗೆ ಪರಿಹಾರ, ಬೆಳೆ ಹಾನಿ ಸಮೀಕ್ಷೆ, ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವು ಸೇರಿದಂತೆ ತುರ್ತು ನೆರವು ಒದಗಿಸಬೇಕು. ಯಡ್ರಾಮಿ ತಾಲೂಕನ್ನು ಬರಪೀಡಿತ ಎಂದು ಘೋಷಿಸಲು ಸರ್ಕಾರಕ್ಕೆ ಶಿಫಾರಸು ಮಾಡಬೇಕು ಎಂದು ಒತ್ತಾಯಿಸಿದರು.

ಸರ್ಕಾರ ರೈತರ ಬೇಡಿಕೆಗಳಿಗೆ ತಕ್ಷಣ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಇನ್ನಷ್ಟು ತೀವ್ರ ಹೋರಾಟ ನಡೆಸಲಾಗುವುದು ಎಂದು ಮುಖಂಡರು ಎಚ್ಚರಿಸಿದರು.

ಈರಣ್ಣಗೌಡ ಗುಳ್ಯಾಳ, ಅಲ್ಲಾಪಟೇಲ ಇಜೇರಿ, ಬಸಲಿಂಗಪ್ಪ ಸಾವು ಅಂಕಲಕೋಟಿ, ರಾಜುಗೌಡ ಮಾಲಿಪಾಟೀಲ, ಭಾಗ್ಯವಂತ ಪವಾರ, ಗಣೇಶ ದೇವರಮನಿ, ವಿಶ್ವನಾಥಗೌಡ ಮಾಗಣಗೇರಾ, ಯಲ್ಲಾಲಿಂಗ ಹರನಾಳ, ಮುತ್ತಪ್ಪ ಪೂಜಾರಿ, ಲಾಳೆಸಾಬ್ ಮನಿಯಾರ್, ಮಹೇಂದ್ರ ಬಾಲೂರ, ಅಮರನಾಥ ಸಾಹು ಕುರುಳಗೇರ, ರೇವಣಸಿದ್ದ ಮಕಾಶಿ, ಶಂಕರಗೌಡ ಕನ್ನೊಳ್ಳಿ ಸುಂಬಡ, ಮಹೇಶಗೌಡ ಪಾಟೀಲ, ದೇವು ಗುತ್ತೇದಾರ, ಬಾಲು ಅಗಸರ್ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ವಾಡಿ: ದಸಂಸ ನೂತನ ಪದಾಧಿಕಾರಿಗಳ ಆಯ್ಕೆ

ವಾಡಿ,ಸೆ.05-

ಪಟ್ಟಣದ ಲುಂಬಿಣಿ ಬುದ್ಧ ವಿಹಾರದಲ್ಲಿ ದಲಿತ ಸಂಘರ್ಷ ಸಮಿತಿ ತಾಲೂಕು ಘಟಕ ಹಮ್ಮಿಕೊಂಡಿದ್ದ ಕಾರ್ಯಕರ್ತರ ಸಭೆಯಲ್ಲಿ ದಲಿತ ಸಂಘರ್ಷ ಸಮಿತಿ ಹಾಗೂ ದಲಿತ ವಿದ್ಯಾರ್ಥಿ ಒಕ್ಕೂಟ ಪಟ್ಟಣ ಘಟಕದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ನೂತನ ಪದಾಧಿಕಾರಿಗಳು: ಸಾಯಬಣ್ಣ ಚಿತ್ತಾಪುರ (ವಾಡಿ ಸಂಚಾಲಕ), ಬಸವರಾಜ ಸಿರೂರರ್ಕ,ಶರಣು ದೊರೆ, ದೇವರಾಜ ಮಡಿವಾಳ (ಸಂಘಟನಾ ಸಂಚಾಲಕರು), ಲೋಕೇಶ ಶಿರೂರಕರ (ಖಜಾಂಚಿ), ವಾಸೀಂ ಅಕ್ರಮ, ಶೇಕ್ ನಿಸಾರ್ (ಕಾರ್ಯಕಾರಿ ಸಮಿತಿ ಸದಸ್ಯರು). ದಲಿತ ವಿದ್ಯಾರ್ಥಿ ಒಕ್ಕೂಟ: ರಾಕೇಶ ಶಿರೂರಕರ್ (ಸಂಚಾಲಕ), ಕಿರಣ ನಾಟಿಕಾರ, ಮಹಮ್ಮದ್ ಫಿರೋಜ್, ದೀನೇಶ ಮತ್ತಿಕೋಡ (ಸಂಘಟನಾ ಸಂಚಾಲಕರು), ರಘುವೀರ ಕಟ್ಟಿ (ಖಜಾಂಚಿ), ರಾಜು ಚಿತ್ತಾಪುರಕರ್ ಕಾಶಿನಾಥ ಕಟ್ಟಿ (ಕಾರ್ಯಕಾರಿ ಸಮಿತಿ ಸದಸ್ಯರು) ಅವರನ್ನು ಆಯ್ಕೆ ಮಾಡಲಾಗಿದೆ. ದಸಂಸ ಜಿಲ್ಲಾ ಸಂಚಾಲಕ ಮರೆಪ್ಪ ಮೇತ್ರೆ, ತಾಲೂಕು ಸಂಚಾಲಕ ಶಿವಮೂರ್ತಿ ಪಾಮನೂರ, ಶರಣಬಸ್ಸು ಸಿರೂರಕರ, ಪ್ರಕಾಶ ಸಾವಿರೆ, ಭೀಮರಾಯ ಕೊಂಚೂರಕರ ಇತರರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ತಾಪಮಾನ ಏರಿಕೆಗೆ ಬದುಕಿನ ಬೆಲೆ ತೆರುವವರು ಯಾರು?

ಭೂಮಿಗೆ ನಮ್ಮ ಅಗತ್ಯವಿಲ್ಲ, ನಮಗೆ ಭೂಮಿಯ ಅಗತ್ಯವಿದೆ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು. ತಾಪಮಾನ ಏರಿಕೆಯ ಜಗತ್ತಿನಲ್ಲಿ ನಮಗೆ ಬೇಕಾಗಿರುವುದು ಕೇವಲ ಹೊಸ ತಂತ್ರಜ್ಞಾನಗಳಲ್ಲ. ಹೊಸ ರಾಜಕೀಯ ದೃಷ್ಟಿಕೋನ ಎಂಬುದನ್ನು ಅರಿಯಬೇಕು. ಪ್ರಕೃತಿಯ ಮೇಲೆ ಅಧಿಕಾರ ಸಾಧಿಸುವ ಮನೋಭಾವದಿಂದ ಹೊರಬಂದು, ಪ್ರಕೃತಿಯೊಂದಿಗೆ ಬದುಕುವ ಮಾರ್ಗವನ್ನು ಕಲಿಯಬೇಕು.

ಭೂಮಿಯ ಸರಾಸರಿ ತಾಪಮಾನ ಏರಿಕೆಯನ್ನು 1.5 ಡಿಗ್ರಿ ಸೆಲ್ಸಿಯಸ್ ಒಳಗೆ ನಿಯಂತ್ರಿಸುವ ಪ್ಯಾರಿಸ್ ಹವಾಮಾನ ಒಪ್ಪಂದದ ಗುರಿ ಈಗ ಕೈತಪ್ಪುತ್ತಿದೆ. ತಾಪಮಾನ ನಿಯಂತ್ರಣದ ಜಾಗತಿಕ ಕನಸು ಬಹುತೇಕ ಕೈಜಾರಿದೆ ಎಂದು ವಿಶ್ವಸಂಸ್ಥೆಯ ಪರಿಸರ ಕಾರ್ಯಕ್ರಮದ () ಇತ್ತೀಚಿನ ವರದಿ ಎಚ್ಚರಿಸಿದೆ. ಕಳೆದ ಕೆಲವು ವರ್ಷಗಳಲ್ಲಿ ಜಾಗತಿಕ ತಾಪಮಾನವು ಅಪಾಯದ ಗಡಿ ದಾಟಿರುವುದು, ಮಾನವಕುಲ ಈಗ ಹವಾಮಾನ ಬದಲಾವಣೆಯ ಹೊಸ ಮತ್ತು ಅನಿಶ್ಚಿತ ಹಂತಕ್ಕೆ ಪ್ರವೇಶಿಸಿರುವುದರ ಸಂಕೇತವಾಗಿದೆ.

ತಾಪಮಾನ ನಿಯಂತ್ರಣದಲ್ಲಿ 1.5 ಡಿಗ್ರಿ ಎಂಬುದು ಕೇವಲ ವಿಜ್ಞಾನಿಗಳ ಲೆಕ್ಕಾಚಾರವಲ್ಲ; ಅದು ಲಕ್ಷಾಂತರ ಜನರ ಬದುಕು, ಕೃಷಿ, ನೀರು, ಆರೋಗ್ಯ ಮತ್ತು ಭವಿಷ್ಯದ ಭದ್ರತೆಯ ಗಡಿ. ಕೆಲವು ವರ್ಷಗಳ ಹಿಂದೆ ಹವಾಮಾನ ಬದಲಾವಣೆಯನ್ನು ಭವಿಷ್ಯದ ಸಮಸ್ಯೆ ಎಂದು ಹೇಳಲಾಗುತ್ತಿತ್ತು. ಆದರೆ, ಈಗ ಅದು ವರ್ತಮಾನದ ಸಂಕಟವಾಗಿದೆ. ಯುರೋಪ್, ಅಮೆರಿಕ, ಆಸ್ಟ್ರೇಲಿಯಾದಲ್ಲಿ ಉಂಟಾಗುತ್ತಿರುವ ತೀವ್ರ ಉಷ್ಣ ಅಲೆಗಳು, ಏಷ್ಯಾದಲ್ಲಿ ಸಂಭವಿಸುತ್ತಿರುವ ಅತಿವೃಷ್ಟಿ ಮತ್ತು ಪ್ರವಾಹಗಳು, ಹಿಮಾಲಯ ಪ್ರದೇಶದಲ್ಲಿ ಹೆಚ್ಚುತ್ತಿರುವ ಹಠಾತ್ ಪ್ರವಾಹಗಳು- ಇವೆಲ್ಲವೂ ಹವಾಮಾನ ಬದಲಾವಣೆಯ ಪರಿಣಾಮಗಳು ದೂರದ ಭವಿಷ್ಯದಲ್ಲಿಲ್ಲ. ನಮ್ಮ ಕಣ್ಣೆದುರೇ ಇವೆ ಎಂಬುದನ್ನು ತೋರಿಸುತ್ತಿವೆ.

ಪ್ರಶ್ನೆ ಈಗ ಭೂಮಿ ಬಿಸಿಯಾಗುತ್ತದೆಯೇ? ಎಂಬುದಲ್ಲ. ಅದು ಈಗಾಗಲೇ ಬಿಸಿಯಾಗಿದೆ. ಅಂದರೆ, ಈಗಿರುವ ಪ್ರಶ್ನೆ ಈ ಬಿಸಿಯಾಗುತ್ತಿರುವ ಜಗತ್ತಿನಲ್ಲಿ ಯಾರು ಸುರಕ್ಷಿತವಾಗಿರುತ್ತಾರೆ ಮತ್ತು ಯಾರು ಅದಕ್ಕೆ ಬೆಲೆ ತೆರುತ್ತಾರೆ? ಎಂಬುದಷ್ಟೇ

ತಾಪಮಾನ ಏರಿಕೆಯ ಬಗ್ಗೆ ಚರ್ಚಿಸುವಾಗ ಸಾಮಾನ್ಯವಾಗಿ ಕಾರ್ಬನ್ ಹೊರಸೂಸುವಿಕೆ, ಕೈಗಾರಿಕೆಗಳು, ಇಂಧನ ಬಳಕೆ ಹಾಗೂ ತಂತ್ರಜ್ಞಾನಗಳ ಬಗ್ಗೆ ಮಾತನಾಡುತ್ತೇವೆ. ಆದರೆ, ಹವಾಮಾನ ಬದಲಾವಣೆಯ ಹೊಡೆತ ಯಾರ ಮೇಲೆ ಬೀಳುತ್ತದೆ ಎಂಬುದರ ಬಗ್ಗೆ ತೀರಾ ಕಡಿಮೆ ಚರ್ಚೆಗಳನ್ನು ಮಾಡುತ್ತೇವೆ. ಯಾಕೆಂದರೆ, ಹವಾಮಾನ ಬದಲಾವಣೆಯ ಹೊಡೆತ ಬೀಳುವುದು ತಾಪಮಾನ ಏರಿಕೆಗೆ ಅತೀ ಕಡಿಮೆ ಕೊಡುಗೆ ನೀಡಿದ ಜನರ ಮೇಲೆ. ಆ ಜನರು ಜಗತ್ತಿಗೆ, ಆಳುವವರಿಗೆ ಮುಖ್ಯವೇ ಅಲ್ಲ!

ಪ್ರಸ್ತುತ ಸಂದರ್ಭದಲ್ಲಿ; ಒಂದೆಡೆ, ಸಣ್ಣ ರೈತರು ತಮ್ಮ ಹೊಲದಲ್ಲಿ ಮಳೆಯ ನಿರೀಕ್ಷೆಯಲ್ಲಿ ಕುಳಿತಿದ್ದಾರೆ. ಮಳೆಗಾಗಿ ಪಾರ್ಥಿಸುತ್ತಿದ್ದಾರೆ. ಅವರೆಲ್ಲರೂ ಬರದ ಕರಿನೆರಳಿಗೆ ಸಿಲುಕಿದ್ದಾರೆ. ಮತ್ತೊಂದೆಡೆ, ಅತಿವೃಷ್ಟಿಯ ಅಬ್ಬರ ಹೆಚ್ಚಾಗಿದೆ. ಬೆಳೆ, ಭೂಮಿ, ಮನೆಗಳು ಕೊಚ್ಚಿಹೋಗುತ್ತಿವೆ. ಈ ಪರಿಸ್ಥಿತಿಯಲ್ಲಿ ಬೆಳೆ ಬೆಳೆಯುವ ಕಾಲದ ಲೆಕ್ಕಾಚಾರವೇ ಬದಲಾಗುತ್ತಿದೆ. ಸಾವಿರಾರು ವರ್ಷಗಳಿಂದ ಪ್ರಕೃತಿಯೊಂದಿಗೆ ಹೊಂದಾಣಿಕೆ ಮಾಡಿಕೊಂಡು ಬಂದ ಕೃಷಿ ಜ್ಞಾನ ಈಗ ಅನಿಶ್ಚಿತ ಹವಾಮಾನದ ಮುಂದೆ ಅಸಹಾಯಕವಾಗಿ ನಿಂತಿದೆ.

ನಗರಗಳಲ್ಲಿಯೂ ಪರಿಸ್ಥಿತಿ ಭಿನ್ನವಾಗಿಲ್ಲ. ಕಾಂಕ್ರೀಟ್ ಕಾಡುಗಳಾಗಿ ಬದಲಾಗುತ್ತಿರುವ ನಗರಗಳು ಹೀಟ್ ಐಲ್ಯಾಂಡ್‌ಗಳಾಗುತ್ತಿವೆ. ಮರಗಳನ್ನು ಕತ್ತರಿಸಿ, ಕೆರೆಗಳನ್ನು ಮುಚ್ಚಿ, ಗಾಳಿಯ ಹರಿವನ್ನು ತಡೆದು ನಿರ್ಮಿಸಿದ ನಗರಗಳಲ್ಲಿ ಬಡವರು ಹೆಚ್ಚು ಬಿಸಿಲನ್ನು ಅನುಭವಿಸುತ್ತಿದ್ದಾರೆ.

ಹವಾನಿಯಂತ್ರಣ ಹೊಂದಿರುವವರು ಮನೆಯೊಳಗೆ ತಮ್ಮನ್ನು ರಕ್ಷಿಸಿಕೊಳ್ಳಬಹುದು. ಆದರೆ, ರಸ್ತೆ ಬದಿಯಲ್ಲಿ ಕೆಲಸ ಮಾಡುವ ಕಾರ್ಮಿಕರು, ಕಟ್ಟಡ ಕಾರ್ಮಿಕರು, ಬೀದಿ ವ್ಯಾಪಾರಿಗಳು ಅಥವಾ ರೈತರಿಗೆ ಬಿಸಿಲಿನಿಂದ ತಪ್ಪಿಸಿಕೊಳ್ಳುವ ಅವಕಾಶ ಎಲ್ಲಿದೆ?

ಅತಿ ಕಡಿಮೆ ಮಾಲಿನ್ಯ ಸೃಷ್ಟಿಸುವವರು ಅತಿ ಹೆಚ್ಚು ಪರಿಣಾಮ ಅನುಭವಿಸುತ್ತಿದ್ದಾರೆ- ಇದು ಹವಾಮಾನ ಬದಲಾವಣೆಯ ದೊಡ್ಡ ವ್ಯಂಗ್ಯ!

ಪ್ರಸ್ತುತ, ಜಾಗತಿಕ ತಾಪಮಾನವು ಸರಾಸರಿ 17 ಇದೆ. ಭಾರತದಲ್ಲಿನ ಸರಾಸರಿ ತಾಪಮಾನ 25 ಸುತ್ತಮುತ್ತ ಇದೆ. ಜಾಗತಿಕ ತಾಪಮಾನವು ಕಳೆದ ದಶಕಕ್ಕೆ ಹೋಲಿಸಿದರೆ 1.5 ಡಿಗ್ರಿಗಿಂತ ಹೆಚ್ಚಾಗಿದೆ. ಸುಮಾರು 2-3ರಷ್ಟು ಏರಿಕೆಯಾಗಿರುವ ಅನುಭವವಾಗುತ್ತಿದೆ. ಈ ಸ್ಥಿತಿಯಲ್ಲಿ ತಾಪಮಾನ ನಿಯಂತ್ರಣಕ್ಕಾಗಿನ ಹೋರಾಟವನ್ನು ನಿಲ್ಲಿಸಲು ಸಾಧ್ಯವಿಲ್ಲ. ತಾಪಮಾನ ಏರಿಕೆಯನ್ನು ಎಷ್ಟು ಕಡಿಮೆ ಮತ್ತು ಎಷ್ಟು ಕಡಿಮೆ ಅವಧಿಗೆ ಮಿತಿಗೊಳಿಸಬಹುದು ಎಂಬುದೇ ಈಗಿನ ಗುರಿಯಾಗಬೇಕು. ಇದನ್ನು ವಿಶ್ವಸಂಸ್ಥೆ ಕೂಡ ಹೇಳಿದೆ.

ಪ್ರತಿ ಒಂದು ಡಿಗ್ರಿಯ ಹೆಚ್ಚಳವೂ ಅಪಾಯವನ್ನು ಹೆಚ್ಚಿಸುತ್ತದೆ. ಹಿಮನದಿಗಳು ವೇಗವಾಗಿ ಕರಗುತ್ತವೆ. ಸಮುದ್ರ ಮಟ್ಟ ಏರುತ್ತದೆ. ಕರಾವಳಿ ಪ್ರದೇಶಗಳಲ್ಲಿ ವಾಸಿಸುವ ಜನರ ಬದುಕು ಅಸ್ಥಿರವಾಗುತ್ತದೆ. ನೀರಿನ ಮೂಲಗಳು ಬದಲಾಗುತ್ತವೆ. ಕೆಲವು ಪ್ರದೇಶಗಳಲ್ಲಿ ಮಳೆ ಹೆಚ್ಚಾದರೆ, ಇನ್ನೂ ಕೆಲವು ಪ್ರದೇಶಗಳು ಬರದಿಂದ ನರಳುತ್ತವೆ.

ಹಿಮಾಲಯದ ಹಿಮನದಿಗಳ ಕರಗುವಿಕೆ, ಅಮೆಜಾನ್ ಕಾಡುಗಳ ನಾಶ, ಸಮುದ್ರದ ಜೀವವೈವಿಧ್ಯದ ಕುಸಿತ- ಇವೆಲ್ಲವೂ ಭೂಮಿಯ ಸಮತೋಲನಕ್ಕೆ ದೊಡ್ಡ ಸವಾಲುಗಳಾಗಿವೆ. ಹವಾಮಾನ ವಿಜ್ಞಾನಿಗಳು ಟಿಪ್ಪಿಂಗ್ ಪಾಯಿಂಟ್‌ಗಳ (ನಿರ್ಣಾಯಕ ತಿರುವು) ಬಗ್ಗೆ ಎಚ್ಚರಿಸುತ್ತಿದ್ದಾರೆ. ಪ್ರಕೃತಿ ವ್ಯವಸ್ಥೆಗಳು ಒಂದು ನಿರ್ದಿಷ್ಟ ಮಿತಿಯನ್ನು ದಾಟಿದ ನಂತರ ಹಿಂದಕ್ಕೆ ತಿರುಗಿಸಲಾಗದ ಸ್ಥಿತಿಗೆ ಹೋಗಬಹುದು ಎಂಬುದು ಅವರ ಕಳವಳ.

ಹವಾಮಾನ ಬದಲಾವಣೆಯ ಚರ್ಚೆಯಲ್ಲಿ ನಾವು ಒಂದು ಪ್ರಶ್ನೆಯನ್ನು ಕೇಳಿಕೊಳ್ಳಲೇಬೇಕು. ಅದು; ಇಂದಿನ ಅಭಿವೃದ್ಧಿಯ ಮಾದರಿ ಯಾರಿಗಾಗಿ?

ಒಂದು ನಗರದಲ್ಲಿ ಹೊಸ ರಸ್ತೆ ನಿರ್ಮಾಣಕ್ಕಾಗಿ ಮರಗಳನ್ನು ಕಡಿಯಲಾಗುತ್ತದೆ. ಹೊಸ ಕಟ್ಟಡಗಳಿಗಾಗಿ ಕೆರೆಗಳನ್ನು ಮುಚ್ಚಲಾಗುತ್ತದೆ. ಹೆಚ್ಚಿನ ಉತ್ಪಾದನೆಗಾಗಿ ನೈಸರ್ಗಿಕ ಸಂಪನ್ಮೂಲಗಳನ್ನು ಅತಿಯಾಗಿ ಬಳಸಲಾಗುತ್ತದೆ. ಇವೆಲ್ಲವೂ ಆರ್ಥಿಕ ಬೆಳವಣಿಗೆಯ ಸಂಕೇತಗಳಾಗಿ ಕಾಣಬಹುದು. ಆದರೆ, ಅದರ ಪರಿಣಾಮವಾಗಿ ಉಂಟಾಗುವ ಉಷ್ಣತೆ, ಪ್ರವಾಹ, ನೀರಿನ ಕೊರತೆ ಹಾಗೂ ಆರೋಗ್ಯ ಸಮಸ್ಯೆಗಳ ಹೊರೆ ಯಾರ ಮೇಲೆ ಬೀಳುತ್ತದೆ?

ಪ್ರಕೃತಿಯ ನಾಶದ ಲಾಭ ಕೆಲವರಿಗೆ ಸಿಗುತ್ತದೆ. ಆದರೆ, ಅದರ ನಷ್ಟವನ್ನು ಸಮಾಜದ ಎಲ್ಲರೂ ಹೊರುತ್ತಾರೆ. ನೇಪಾಳದಂತಹ ದೇಶಗಳು ಹವಾಮಾನ ಬದಲಾವಣೆಯ ಪರಿಣಾಮಗಳಿಗೆ ದೊಡ್ಡ ಬೆಲೆ ಕಟ್ಟುತ್ತಿವೆ. ಆದರೆ, ಜಾಗತಿಕ ತಾಪಮಾನ ಏರಿಕೆಗೆ ಅವುಗಳ ಕೊಡುಗೆ ಅತ್ಯಂತ ಕಡಿಮೆ.

ಆದ್ದರಿಂದಲೇ, ಹವಾಮಾನ ನ್ಯಾಯ ಎಂಬ ಪರಿಕಲ್ಪನೆ ಮಹತ್ವ ಪಡೆಯುತ್ತದೆ. ಕೈಗಾರಿಕಾ ಕ್ರಾಂತಿಯ ನಂತರ ಹೆಚ್ಚು ಪ್ರಮಾಣದಲ್ಲಿ ಕಾರ್ಬನ್ ಹೊರಸೂಸಿದ ಶ್ರೀಮಂತ ರಾಷ್ಟ್ರಗಳು ಹೆಚ್ಚು ಜವಾಬ್ದಾರಿ ಹೊರುವ ಅಗತ್ಯವಿದೆ ಎಂಬುದು ಅಭಿವೃದ್ಧಿಶೀಲ ರಾಷ್ಟ್ರಗಳು ವಾದಿಸುತ್ತಿವೆ.

2022ರಲ್ಲಿ ಸ್ಥಾಪಿಸಲಾದ ನಷ್ಟ ಮತ್ತು ಹಾನಿ ಪರಿಹಾರ ನಿಧಿ ಹವಾಮಾನ ವಿಪತ್ತುಗಳಿಂದ ಹಾನಿಗೊಳಗಾದ ದೇಶಗಳಿಗೆ ನೆರವು ನೀಡುವ ಉದ್ದೇಶ ಹೊಂದಿದೆ. ಆದರೆ, ಅದರಲ್ಲಿರುವ ಹಣ ಮತ್ತು ಅಗತ್ಯವಿರುವ ನೆರವಿನ ನಡುವಿನ ಅಂತರ ದೊಡ್ಡದಾಗಿದೆ. ಕಳೆದೊಂದು ವಾರದಿಂದ ಹಿಮ ಕುಸಿತ ಮತ್ತು ಪ್ರವಾಹಕ್ಕೆ ತುತ್ತಾಗಿರುವ ನೇಪಾಳದ ಪುನರ್ನಿರ್ಮಾಣಕ್ಕೆ ಸುಮಾರು 400ರಿಂದ 500 ಕೋಟಿ ಡಾಲರ್ ಹಣಬೇಕೆಂದು ಅಂದಾಜಿಸಲಾಗಿದೆ. ಆದರೆ, ಪರಿಹಾರ ನಿಧಿಯಲ್ಲಿ ಲಭ್ಯವಿರುವುದು ಕೇವಲ 35 ಕೋಟಿ ಡಾಲರ್‌ಗಳು ಮಾತ್ರ. ಪರಿಹಾರ ನಿಧಿಯಲ್ಲಿ ನೇಪಾಳಕ್ಕೆ ಬೇಕಿರುವ 10% ಹಣವೂ ಇಲ್ಲ. ಇದು ಇಂದಿನ ಜಾಗತಿಕ ತಾಪಮಾನ, ಅದರಿಂದಾಗುತ್ತಿರುವ ಪರಿಣಾಮ ಹಾಗೂ ಪರಿಹಾರದ ನಡುವಿನ ಆತಂಕವನ್ನು ಎತ್ತಿ ತೋರುತ್ತದೆ.

ತಾಪಮಾನ ಏರಿಕೆಯನ್ನು ತಡೆಯಲು ತಂತ್ರಜ್ಞಾನ ಬಳಸಲು ಜಗತ್ತು ಎದುರು ನೋಡುತ್ತಿದೆ. ಅದಕ್ಕಾಗಿ, ಕಾರ್ಬನ್ ಸೆರೆಹಿಡಿಯುವ ತಂತ್ರಜ್ಞಾನ, ನವೀಕರಿಸಬಹುದಾದ ಇಂಧನ, ಹಸಿರು ತಂತ್ರಜ್ಞಾನವನ್ನು ಬಳಸುತ್ತಿದೆ. ಇವೆಲ್ಲವೂ ಅಗತ್ಯವೂ ಕೂಡ. ಆದರೆ, ತಂತ್ರಜ್ಞಾನ ಮಾತ್ರ ಈ ಸಮಸ್ಯೆಗೆ ಪರಿಹಾರ ನೀಡಲು ಸಾಧ್ಯವಿಲ್ಲ.

ಮುಖ್ಯವಾಗಿ, ಪ್ರಕೃತಿಯನ್ನು ಕೇವಲ ಸಂಪನ್ಮೂಲ ಎಂದು ನೋಡುವ ದೃಷ್ಟಿಕೋನ ಬದಲಾಗಬೇಕು. ಕಾಡುಗಳು ಕೇವಲ ಮರಗಳಲ್ಲ. ಅವು ನೀರಿನ ಮೂಲಗಳು. ನದಿಗಳು ಕೇವಲ ನೀರಿನ ಹರಿವುಗಳಲ್ಲ. ಅವು ನಾಗರಿಕತೆಗಳ ಜೀವನಾಡಿಗಳು. ಕೃಷಿ ಕೇವಲ ಆರ್ಥಿಕ ಚಟುವಟಿಕೆಯಲ್ಲ. ಅದು ಆಹಾರದ ಭದ್ರತೆ.

ಇದೆಲ್ಲವನ್ನೂ ಅರ್ಥ ಮಾಡಿಕೊಂಡರೆ, ಹವಾಮಾನ ಬದಲಾವಣೆಯ ವಿರುದ್ಧದ ಹೋರಾಟ ಕೇವಲ ಕಾರ್ಬನ್ ಕಡಿಮೆ ಮಾಡುವ ಹೋರಾಟವಲ್ಲ ಎಂಬುದು ಅರ್ಥವಾಗುತ್ತದೆ.

ಈಗ, ತಾಪಮಾನದಲ್ಲಿನ ಏರಿಕೆಯು 1.5 ಡಿಗ್ರಿಗಿಂತ ಹೆಚ್ಚು ಏರಿಕೆ ಕಂಡಿದೆ. ಈಗಲೂ ಮನುಕುಲಕ್ಕೆ ಎಚ್ಚೆತ್ತುಕೊಳ್ಳುವ ಆಯ್ಕೆಗಳಿವೆ. ಹಾನಿಯನ್ನು ಕಡಿಮೆ ಮಾಡುವುದು, ದುರ್ಬಲರನ್ನು ರಕ್ಷಿಸುವುದು ಹಾಗೂ ಹವಾಮಾನ ನ್ಯಾಯವನ್ನು ಅಭಿವೃದ್ಧಿಯ ಕೇಂದ್ರವಾಗಿಸಬೇಕಿದೆ.

ಜೊತೆಗೆ, ಭೂಮಿಗೆ ನಮ್ಮ ಅಗತ್ಯವಿಲ್ಲ. ಆದರೆ ನಮಗೆ ಭೂಮಿಯ ಅಗತ್ಯವಿದೆ ಎಂಬುದನ್ನು ಅರ್ಥ ಮಾಡಿಕೊಳ್ಳಬೇಕು. ತಾಪಮಾನ ಏರಿಕೆಯ ಜಗತ್ತಿನಲ್ಲಿ ನಮಗೆ ಬೇಕಾಗಿರುವುದು ಕೇವಲ ಹೊಸ ತಂತ್ರಜ್ಞಾನಗಳಲ್ಲ. ಹೊಸ ರಾಜಕೀಯ ದೃಷ್ಟಿಕೋನ ಎಂಬುದನ್ನು ಅರಿಯಬೇಕು. ಪ್ರಕೃತಿಯ ಮೇಲೆ ಅಧಿಕಾರ ಸಾಧಿಸುವ ಮನೋಭಾವದಿಂದ ಹೊರಬಂದು, ಪ್ರಕೃತಿಯೊಂದಿಗೆ ಬದುಕುವ ಮಾರ್ಗವನ್ನು ಕಲಿಯಬೇಕು.

ಇಲ್ಲದಿದ್ದರೆ, ಭವಿಷ್ಯದ ಇತಿಹಾಸದಲ್ಲಿ ಹವಾಮಾನ ಬದಲಾವಣೆ ಕೇವಲ ಪ್ರಕೃತಿಯ ದುರಂತವಾಗಿ ದಾಖಲಾಗುವುದಿಲ್ಲ. ಅದು ಮಾನವ ಸಮಾಜವು ತನ್ನದೇ ಎಚ್ಚರಿಕೆಗಳ ಹೊರತಾಗಿಯೂ ತನ್ನದೇ ಕೃತ್ಯಗಳಿಂದ ನಾಶವಾದ ಕಥೆಯಾಗಿ ದಾಖಲಾಗುತ್ತದೆ.

ಸಿಜೆಪಿ ಪ್ರತಿಭಟನೆ ವೇಳೆ ಪೊಲೀಸ್ ಮಾರುವೇಷದಲ್ಲಿ ಗೂಂಡಾಗಳನ್ನು ಕಳಿಸಿದವರು ಯಾರು?

ದೇಶದ ರಾಜಧಾನಿ ದೆಹಲಿಯ ಕಾನೂನು ಮತ್ತು ಸುವ್ಯವಸ್ಥೆಯು ರಾಜ್ಯ ಸರ್ಕಾರಕ್ಕಲ್ಲ, ಬದಲಾಗಿ ನೇರವಾಗಿ ಕೇಂದ್ರ ಗೃಹ ಸಚಿವಾಲಯಕ್ಕೆ ಒಳಪಡುತ್ತದೆ. ಹೀಗಿರುವಾಗ, ದೆಹಲಿ ಪೋಲಿಸರು ಯಾರ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದು ರಹಸ್ಯವಾಗಿಯೇನೂ ಉಳಿದಿಲ್ಲ. ಸಿಎಎ/ಎನ್‌ಆರ್‌ಸಿ ಹೋರಾಟದಲ್ಲಿ ನಡೆದ ಭೀಕರ ಹಲ್ಲೆಯ 'ಬ್ಲೂಪ್ರಿಂಟ್' ಆದ ಸಿಜೆಪಿ ಪ್ರತಿಭಟನೆ ಹಲ್ಲೆಯ ವೇಳೆ ಪೊಲೀಸ್ ಮಾರುವೇಷದಲ್ಲಿ ಗೂಂಡಾಗಳನ್ನು ಕಳಿಸಿದವರು ಯಾರು?

ದೇಶದ ಸಂವಿಧಾನವು ಪ್ರಜೆಗಳಿಗೆ ನೀಡಿದ ಅತ್ಯಂತ ಮಹತ್ವದ ಹಕ್ಕುಗಳಲ್ಲಿ ಶಾಂತಿಯುತ ಪ್ರತಿಭಟನೆಯ ಹಕ್ಕೂ ಒಂದು. ಸರ್ಕಾರ ತಪ್ಪುದಾರಿ ಹಿಡಿದಾಗ ಅಥವಾ ಜನವಿರೋಧಿ ನೀತಿಗಳ ಜಾರಿಗೆ ಮುಂದಾದಾಗ ಅದರ ವಿರುದ್ಧವಾಗಿ ನಾಗರಿಕರು, ವಿದ್ಯಾರ್ಥಿಗಳು ಮತ್ತು ಶೋಷಿತ ಸಮುದಾಯಗಳು ಧ್ವನಿ ಎತ್ತುವುದು ಪ್ರಜಾಪ್ರಭುತ್ವದ ಮೂಲಧಾತು. ಆದರೆ ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಚಳವಳಿಗಳನ್ನು ಹತ್ತಿಕ್ಕಲು ನಿರಂತರ ಯತ್ನ ನಡೆಸುತ್ತಲೇ ಇದೆ. ಚಳವಳಿ ತಡೆಯಲು ಬಿಜೆಪಿ ಸರ್ಕಾರ ಬಳಸುತ್ತಿರುವ ತಂತ್ರವು ಮಿತಿಮೀರಿದೆ.

ಈ ತಂತ್ರಗಳು ಅಪಾಯಕಾರಿಯಷ್ಟೇ ಅಲ್ಲ, ಅತ್ಯಂತ ಕಂಟಕಪ್ರಾಯವೂ ಆಗಿದೆ ಎಂಬುದನ್ನು ಇತ್ತೀಚಿನ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ಪ್ರತಿಭಟನೆ ವೇಳೆ ವಿದ್ಯಾರ್ಥಿಗಳ ಮೇಲೆ ದೆಹಲಿ ಪೊಲೀಸರು ಮತ್ತು ಪೊಲೀಸ್ ಮಾರುವೇಷದಲ್ಲಿ ಗೂಂಡಾಗಳು ನಡೆಸಿದ ಅಮಾನುಷ ಹಲ್ಲೆ ಸಾಬೀತುಪಡಿಸುತ್ತದೆ.

ಮೋದಿ ಸರ್ಕಾರ ವಿರುದ್ಧವಾಗಿ ಯಾವುದೇ ಒಂದು ನ್ಯಾಯಯುತ ಮತ್ತು ಜನಪರ ಚಳವಳಿ ಜನ್ಮತಳೆದರೆ, ಅದನ್ನು ಸೈದ್ಧಾಂತಿಕವಾಗಿ ಎದುರಿಸುವ ಧೈರ್ಯ ಬಿಜೆಪಿ ಸರ್ಕಾರಕ್ಕೆ ಇದ್ದಂತಿಲ್ಲ. ಅದಕ್ಕಾಗಿ ಗೂಂಡಾಗಳನ್ನು ಸಾದಾ ಉಡುಪಿನಲ್ಲಿ ನುಗ್ಗಿಸಿ ಹಿಂಸಾಚಾರವನ್ನು ಪ್ರಚೋದಿಸುವುದು, ಹೋರಾಟಗಾರರನ್ನೇ ಅಪರಾಧಿಗಳು ಅಥವಾ ದೇಶದ್ರೋಹಿಗಳು ಎಂದು ಬಿಂಬಿಸುವುದು ಇಂದಿನ ಬಿಜೆಪಿಯ ಕೀಳುಮಟ್ಟದ ತಂತ್ರಗಾರಿಕೆ.

ಇತ್ತೀಚೆಗೆ ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆದ ಸಿಜೆಪಿ ಪ್ರತಿಭಟನೆಯ ಸಂದರ್ಭದಲ್ಲಿ ಕಂಡುಬಂದ ಘಟನೆಗಳು ಮತ್ತು ಈ ಹಿಂದೆ ಇಡೀ ದೇಶವನ್ನೇ ಉದ್ವಿಗ್ನಗೊಳಿಸಿದ್ದ ಸಿಎಎ ಮತ್ತು ಎನ್‌ಆರ್‌ಸಿ ವಿರೋಧಿ ಹೋರಾಟಗಳ ದಿನಗಳನ್ನು ಒಟ್ಟಾಗಿ ವಿಶ್ಲೇಷಿಸಿದರೆ, ಈ ಎಲ್ಲ ರಕ್ತಸಿಕ್ತ ಸಂಚುಗಳ ಹಿಂದೆ ಒಂದೇ ಮಾಸ್ಟರ್ ಪ್ಲ್ಯಾನ್ ಕೆಲಸ ಮಾಡುತ್ತಿರುವುದು ಸ್ಪಷ್ಟ. ಈ ಬೃಹತ್ ಜಾಲದ ಹಿಂದೆ ಕೇಂದ್ರ ಗೃಹ ಸಚಿವಾಲಯ ಮತ್ತು ಗೃಹ ಸಚಿವ ಅಮಿತ್ ಶಾ ಅವರ ಪ್ರತ್ಯಕ್ಷ ಹಾಗೂ ಪರೋಕ್ಷ ಪಾತ್ರವಿದೆಯೇ ಎಂಬ ಪ್ರಶ್ನೆ ಹಲವರದ್ದು. ಇದಕ್ಕೆ ಉತ್ತರ ನೀಡಬಲ್ಲರೇ ಅಮಿತ್ ಶಾ? ಈ ಪ್ರಶ್ನೆಗಳಿಗೆ ಉತ್ತರಿಸಲು ಹೆದರಿ ಲೋಕಸಭೆಯ ಒಂದೇ ಒಂದು ಕಲಾಪಕ್ಕೂ ಹಾಜರಾಗದ ಕೇಂದ್ರ ಗೃಹ ಸಚಿವರು ಈ ನಮ್ಮ ಪ್ರಶ್ನೆಗೆ ಉತ್ತರಿಸುವರೇ?

ಸಿಜೆಪಿ ಪ್ರತಿಭಟನೆಯ ಕರಾಳ ಮುಖ

ಸಿಜೆಪಿ ನೇತೃತ್ವದ ವಿದ್ಯಾರ್ಥಿ ಮತ್ತು ಯುವಜನರ ಹೋರಾಟದಲ್ಲಿ ನಡೆದ ಘಟನೆಗಳು ಆತಂಕಕಾರಿ. ಪ್ರತಿಭಟನೆಯು ತೀವ್ರ ಸ್ವರೂಪ ಪಡೆದುಕೊಂಡು ಸರ್ಕಾರದ ಮೇಲೆ ಒತ್ತಡ ಹೆಚ್ಚಾಗುತ್ತಿದ್ದಂತೆ, ಯಾವುದೇ ಖಾಕಿ ಸಮವಸ್ತ್ರವಿಲ್ಲದ, ಮುಖಕ್ಕೆ ಮುಸುಕು ಧರಿಸಿದ ಹಾಗೂ ಸಾದಾ ಉಡುಪಿನಲ್ಲಿದ್ದ ಕೆಲವು ಶಂಕಿತ ವ್ಯಕ್ತಿಗಳು ದಿಢೀರನೇ ಪ್ರತಿಭಟನಾನಿರತರ ಸಾಲಿಗೆ ಪ್ರವೇಶಿಸಿದ್ದರು. ಈ ಅನಾಮಿಕರು ನೇರವಾಗಿ ಪೊಲೀಸ್ ಪಡೆಗಳ ಮೇಲೆ ಕಲ್ಲು ತೂರುವುದು, ಸಾರ್ವಜನಿಕ ಆಸ್ತಿಗೆ ಹಾನಿ ಮಾಡುವುದು ಮತ್ತು ವಿನಾಕಾರಣ ಉದ್ವಿಗ್ನತೆ ಸೃಷ್ಟಿಸುವುದರಲ್ಲಿ ತೊಡಗಿದರು.

ಅಚ್ಚರಿಯ ವಿಷಯವೆಂದರೆ, ಅಲ್ಲಿ ಸಾವಿರಾರು ಪೊಲೀಸರಿದ್ದರೂ ಈ ಸಾದಾ ಉಡುಪಿನ ವ್ಯಕ್ತಿಗಳನ್ನು ತಡೆಯುವ ಅಥವಾ ಬಂಧಿಸುವ ಕನಿಷ್ಠ ಪ್ರಯತ್ನವನ್ನೂ ಮಾಡಲಿಲ್ಲ. ಬದಲಾಗಿ, ಈ ಅಪರಿಚಿತ ಗೂಂಡಾಗಳು ಹಿಂಸಾಚಾರಕ್ಕೆ ಚಾಲನೆ ನೀಡಿದ ಕೆಲವೇ ನಿಮಿಷಗಳಲ್ಲಿ ಪೊಲೀಸರು, ಅಸಹಾಯಕರಾಗಿ ಶಾಂತಿಯುತವಾಗಿ ಕುಳಿತಿದ್ದ ವಿದ್ಯಾರ್ಥಿಗಳು, ಮಹಿಳೆಯರು ಮತ್ತು ಹಿರಿಯ ನಾಗರಿಕರ ಮೇಲೆ ಕ್ರೂರವಾಗಿ ಲಾಠಿಚಾರ್ಜ್ ಮಾಡಿದರು, ಅಶ್ರುವಾಯು, ಪೆಲೆಟ್ ಗನ್ ಪ್ರಯೋಗಿಸಿದರು.



ಅಂದರೆ, ಬಲಪ್ರಯೋಗವನ್ನು ಸಮರ್ಥಿಸಿಕೊಳ್ಳಲು ಈ ಮಾರುವೇಷದ ಗೂಂಡಾಗಳನ್ನು ಉಪಕರಣಗಳನ್ನಾಗಿ ಬಳಸಿಕೊಳ್ಳಲಾಯಿತು. ಪೊಲೀಸರೇ ಸ್ವತಃ ಕಲ್ಲುಗಳನ್ನು ಹೊತ್ತು ತರಲಾದ ವಾಹನಗಳನ್ನು ನಿಲ್ಲಿಸಿ ಪ್ರತಿಭಟನಾಕಾರರ ಮೇಲೆ ಸುಳ್ಳು ಆರೋಪ ಹೊರಿಸಲು ಯತ್ನಿಸಿದ ಆರೋಪಗಳೂ ಕೇಳಿಬಂದವು.

ಈ ಎಲ್ಲಾ ಆರೋಪಗಳನ್ನು ಹಿಂದುತ್ವವಾದಿ ಕಾರ್ಯಕರ್ತ ಸ್ವತಂತ್ರ ಭಾರದ್ವಾಜ್ ಹೆಮ್ಮೆಯಿಂದ ಬಹಿರಂಗಪಡಿಸಿದ್ದಾನೆ. ಕಟ್ಟರ್ ಹಿಂದೂ ಎಂದು ಕರೆಯಿಸಿಕೊಳ್ಳುವ ಈ ಭಾರದ್ವಾಜ್ ಸಿಜೆಪಿ ಪ್ರತಿಭಟನೆ ವೇಳೆ ವಿದ್ಯಾರ್ಥಿ ಕಾರ್ಯಕರ್ತೆ ನಿಶು ಆಜಾದ್ ಅವರ ತಂದೆ ಸಂಜಯ್ ಕುಮಾರ್ ಮೇಲೆ ಹಲ್ಲೆ ನಡೆಸಿದ್ದಾಗಿ ಪಾಡ್‌ಕಾಸ್ಟ್ ಒಂದರಲ್ಲಿ ಹೇಳಿಕೊಂಡಿದ್ದಾನೆ. ತನ್ನ ಈ ಹಲ್ಲೆಯ ತೀವ್ರತೆಯನ್ನೂ ರಂಜಿತವಾಗಿ ವರ್ಣಿಸಿದ್ದಾನೆ! ''ನಾನು ನಿಶು ತಂದೆಯ ತಲೆಬುರುಡೆಯನ್ನೇ ಒಡೆದು ಹಾಕಿದೆ. ಅವರಿಗೆ 60 ಹೊಲಿಗೆಗಳನ್ನು ಹಾಕಬೇಕಾಯಿತು. ಅದು ಹಾಫ್ ಮರ್ಡರ್ ಕೇಸ್. ಅವರು ಸಾಯುವ ಸ್ಥಿತಿಯಲ್ಲಿದ್ದರು. ಆದರೂ ನಾನು ಜೈಲಿಗೆ ಹೋಗಿಲ್ಲ. ಬಿಜೆಪಿ ನಾಯಕರ ಆಶೀರ್ವಾದ ನನ್ನ ಮೇಲಿದೆ'' ಎಂದಿದ್ದಾನೆ.

ಅಷ್ಟು ಮಾತ್ರಲ್ಲದೆ ''ನನಗೆ ಹನುಮಂತ ದೇವರ ಆಶೀರ್ವಾದವಿದೆ. ಅಲ್ಲದೆ, ಕಪಿಲ್ ಮಿಶ್ರಾ ನನ್ನ ಅಣ್ಣನಂತೆ. ಕಪಿಲ್ ಮಿಶ್ರಾ ಅವರಿಂದ ಕರೆ ಬಂದ ಕೂಡಲೇ ನನ್ನನ್ನು ಬಿಡುಗಡೆ ಮಾಡಲಾಯಿತು. ಕಪಿಲ್ ಮಿಶ್ರಾ ನನ್ನ ಅಣ್ಣ, ಚಿರಾಗ್ ಪಾಸ್ವಾನ್ ನನ್ನ ಅಣ್ಣ. ನಿಮಗೆ ಯಾವ ನಾಯಕ ಗೊತ್ತು ಹೇಳಿ? ನಿಮಗೆ ಮೋದಿ ಜಿ ಗೊತ್ತಾ? ಮೋದಿ ಜಿ ಕೂಡಾ ನನ್ನ ಅಣ್ಣ. ನನಗೆ ಎಲ್ಲರ ಬೆಂಬಲವಿದೆ,'' ಎಂದು ಭಾರದ್ವಾಜ್ ಹೇಳಿಕೊಂಡಿದ್ದಾನೆ. ಇದೀಗ ಸಿಜೆಪಿ ಕಾರ್ಯಕರ್ತರ ಒತ್ತಡ ಹೆಚ್ಚಾದಂತೆ ಆತನ ಬಂಧನ ನಡೆದಿದೆ.

ಸಿಎಎ/ಎನ್‌ಆರ್‌ಸಿ ಹೋರಾಟದ ಬ್ಲೂಪ್ರಿಂಟ್ ಇದಲ್ಲವೇ?

ಅಷ್ಟಕ್ಕೂ ಈ ತಂತ್ರ ಹೊಸದೇನಲ್ಲ. 2019-2020ರಲ್ಲಿ ನಡೆದ ಐತಿಹಾಸಿಕ ಸಿಎಎ ಮತ್ತು ಎನ್‌ಆರ್‌ಸಿ ವಿರೋಧಿ ಚಳವಳಿಯ ಸಂದರ್ಭದಲ್ಲೂ ಇದೇ ಮಾದರಿಯಲ್ಲಿ ಅತ್ಯಂತ ಕ್ರೂರವಾಗಿ ಹೋರಾಟಗಾರರ ಮೇಲೆ ಹಲ್ಲೆ ನಡೆದಿತ್ತು. ದೆಹಲಿಯ ಶಾಹಿನ್ ಬಾಗ್, ಜಾಮಿಯಾ ಮಿಲ್ಲಿಯಾ ಇಸ್ಲಾಮಿಯಾ ವಿಶ್ವವಿದ್ಯಾಲಯ ಮತ್ತು ಅಲಿಗಢ್ ಮುಸ್ಲಿಂ ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳು ಮತ್ತು ನಾಗರಿಕರು ರಸ್ತೆಗಿಳಿದಾಗ, ಬಲಪಂಥೀಯ ಸಂಘಟನೆಗಳಿಗೆ ಸೇರಿದ ಗೂಂಡಾಗಳು ಹಾಗೂ ಸಾದಾ ಉಡುಪಿನ ಏಜೆಂಟರು ಹೋರಾಟದ ಸ್ಥಳಗಳಿಗೆ ಪ್ರವೇಶಿಸಿದ್ದರು.

ಅಂದು ಜಾಮಿಯಾ ಗ್ರಂಥಾಲಯದೊಳಗೆ ನುಗ್ಗಿ ಅಧ್ಯಯನ ಮಾಡುತ್ತಿದ್ದ ವಿದ್ಯಾರ್ಥಿಗಳ ಮೇಲೆ ದೌರ್ಜನ್ಯ ನಡೆಸಿ, ಗೋಲಿ ಮಾರೋ (ಗುಂಡು ಹಾರಿಸಿ) ಎಂದು ಸಾರ್ವಜನಿಕವಾಗಿ ಪ್ರಚೋದನಾಕಾರಿ ಘೋಷಣೆ ಕೂಗಿದ್ದರು. ಆದರೂ ಇಂತಹ ದುಷ್ಕರ್ಮಿಗಳಿಗೆ ಬಿಜೆಪಿ ಸರ್ಕಾರ ನೀಡಿದ ರಕ್ಷಣೆ ನಮಗೆಲ್ಲರಿಗೂ ತಿಳಿದಿರುವ ವಿಷಯ.

ಸ್ವತಂತ್ರ ತನಿಖಾ ಸಂಸ್ಥೆಗಳು ಮತ್ತು ಆಮ್ನೆಸ್ಟಿ ಇಂಟರ್ನ್ಯಾಷನಲ್‌ನಂತಹ ಮಾನವ ಹಕ್ಕುಗಳ ಸಂಘಟನೆಗಳು ನೀಡಿದ ವರದಿಗಳ ಪ್ರಕಾರ, ಕಲ್ಲು ತೂರಾಟ ನಡೆಸಿದ ಮತ್ತು ಹಿಂಸಾಚಾರಕ್ಕೆ ಕಾರಣರಾದವರಲ್ಲಿ ಬಹುತೇಕರು ಚಳವಳಿಯ ಭಾಗವಾಗಿರಲಿಲ್ಲ. ಅವರು ಪ್ರತ್ಯೇಕವಾಗಿ ಕಳುಹಿಸಲ್ಪಟ್ಟ ಹಿಂಸಾಚಾರ ಪ್ರಚೋದಕರು ಎಂಬುದು ಸ್ಪಷ್ಟ. ಹೋರಾಟದ ನೈತಿಕತೆಯನ್ನು ಸಾರ್ವಜನಿಕರ ಕಣ್ಣಿನಲ್ಲಿ ಕೆಡಿಸುವುದು, ನಂತರ ಇಡೀ ಚಳವಳಿಗೆ ಕೋಮು ಗಲಭೆ ಅಥವಾ ದೇಶದ್ರೋಹದ ಬಣ್ಣ ಬಳಿಯುವುದು ಈ ತಂತ್ರದ ಮುಖ್ಯ ಉದ್ದೇಶ.

ಅಮಿತ್ ಶಾ ಸೂತ್ರದಾರರಲ್ಲವೇ?

ದೇಶದ ರಾಜಧಾನಿ ದೆಹಲಿಯ ಕಾನೂನು ಮತ್ತು ಸುವ್ಯವಸ್ಥೆಯು ರಾಜ್ಯ ಸರ್ಕಾರಕ್ಕಲ್ಲ, ಬದಲಾಗಿ ನೇರವಾಗಿ ಕೇಂದ್ರ ಗೃಹ ಸಚಿವಾಲಯಕ್ಕೆ ಒಳಪಡುತ್ತದೆ. ಹೀಗಿರುವಾಗ, ದೆಹಲಿ ಪೋಲಿಸರು ಯಾರ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂಬುದು ರಹಸ್ಯವಾಗಿಯೇನೂ ಉಳಿದಿಲ್ಲ. ಪ್ರತಿಭಟನಾ ಸ್ಥಳಗಳಲ್ಲಿ ಪ್ರಚೋದಕ ಗೂಂಡಾಗಳು ಮುಕ್ತವಾಗಿ ಓಡಾಡುತ್ತಿರುವಾಗ, ಮಾರಕ ಆಯುಧಗಳನ್ನು ಹಿಡಿದು ಸಾರ್ವಜನಿಕವಾಗಿ ಬೆದರಿಕೆ ಹಾಕುತ್ತಿರುವಾಗ ದೆಹಲಿ ಪೊಲೀಸರು ಮೂಕಪ್ರೇಕ್ಷಕರಂತೆ ನಿಲ್ಲುವುದು ಯಾವುದರ ಸಂಕೇತ?

ಕೇಂದ್ರ ಗೃಹ ಸಚಿವ ಅಮಿತ್ ಶಾ

ಗೃಹ ಸಚಿವಾಲಯದ ಉನ್ನತ ಮಟ್ಟದ ಸೂಚನೆ ಅಥವಾ ಕನಿಷ್ಠ ಮೌನ ಸಮ್ಮತಿ ಇಲ್ಲದೆ ದೆಹಲಿ ಪೊಲೀಸ್ ಇಲಾಖೆ ಇಷ್ಟೊಂದು ನಿರ್ದಯವಾಗಿ ಮತ್ತು ಏಕಪಕ್ಷೀಯವಾಗಿ ನಡೆದುಕೊಳ್ಳಲು ಸಾಧ್ಯವೇ ಇಲ್ಲ. ಗೃಹ ಸಚಿವ ಅಮಿತ್ ಶಾ ಅವರ ಸೂಚನೆಯ ಮೇಲೆಯೇ ಈ ಇಡೀ ಕಾರ್ಯಾಚರಣೆ ನಡೆದಿದೆ ಮತ್ತು ಪ್ರತಿಭಟನಾಕಾರರನ್ನು ಹೊಸಕಿಹಾಕಲು ದೆಹಲಿ ಪೊಲೀಸರನ್ನು ರಾಜಕೀಯ ಅಸ್ತ್ರವನ್ನಾಗಿ ಬಳಸಿಕೊಳ್ಳಲಾಗಿದೆ ಎಂಬ ಕಠಿಣ ಸತ್ಯವನ್ನು ನಾವು ಬಹಿರಂಗವಾಗಿಯೇ ಪ್ರಶ್ನಿಸಬೇಕಾಗಿದೆ.

ಪೊಲೀಸ್ ಅಧಿಕಾರಿಗಳು ನಿಜವಾದ ಅಪರಾಧಿಗಳನ್ನು ಬಿಟ್ಟು, ಸಂತ್ರಸ್ತ ವಿದ್ಯಾರ್ಥಿ ನಾಯಕರ ಮೇಲೆ ಯುಎಪಿಎಯಂತಹ ಭಯೋತ್ಪಾದನಾ ವಿರೋಧಿ ಕಠಿಣ ಕಾನೂನುಗಳನ್ನು ಹೇರಿ ಜೈಲಿಗಟ್ಟುತ್ತಿರುವುದು ಅವರ ರಾಜಕೀಯ ಯಜಮಾನರನ್ನು ಮೆಚ್ಚಿಸಲು ಹೊರತು ಕಾನೂನು ಪಾಲನೆಗಾಗಿ ಅಲ್ಲ.

ಅಷ್ಟಕ್ಕೂ ಪ್ರಜಾಪ್ರಭುತ್ವದಲ್ಲಿ ಯಾವುದೇ ಸರ್ಕಾರ ಶಾಶ್ವತವಲ್ಲ. ಆದರೆ, ಅಧಿಕಾರ ಉಳಿಸಿಕೊಳ್ಳಲು ಮತ್ತು ಪ್ರತಿಭಟನೆಗಳನ್ನು ಹತ್ತಿಕ್ಕಲು ಮಾರುವೇಷದ ಗೂಂಡಾಗಳನ್ನು ಬಳಸುವುದು, ಶಾಂತಿಯುತ ಚಳವಳಿಗಳನ್ನು ರಕ್ತಸಿಕ್ತಗೊಳಿಸುವುದು ಬಿಜೆಪಿ ಸರ್ಕಾರದ ಕರಾಳ ಇತಿಹಾಸವಾಗಲಿದೆ. ಸಿಜೆಪಿ ಮತ್ತು ಸಿಎಎ/ಎನ್‌ಆರ್‌ಸಿ ವಿರೋಧಿ ಪ್ರತಿಭಟನೆಗಳಲ್ಲಿ ನಡೆದ ಹಿಂಸಾಚಾರದ ಹೊಣೆಯನ್ನು ಕೇಂದ್ರ ಗೃಹ ಸಚಿವಾಲಯ ಹೊತ್ತುಕೊಳ್ಳಲೇಬೇಕಿದೆ. ಜತೆಗೆ ದೇಶದ ಪ್ರಜಾಪ್ರಭುತ್ವವು ಅತಿಶೀಘ್ರದಲ್ಲೇ ಸರ್ವಾಧಿಕಾರದ ಕತ್ತಲಿಗೆ ತಳ್ಳಲ್ಪಡುತ್ತಿದೆ ಎಂಬುದನ್ನು ನಾವು ಅಲ್ಲಗಳೆಯಲಾಗದು.

ಕುಸಿದ ಮೋದಿ ಜನಪ್ರಿಯತೆ - ಪ್ರಜಾಪ್ರಭುತ್ವ ಅಪಾಯದಲ್ಲಿದೆ ಎನ್ನುತ್ತಿರುವ ಜನತೆ; ಸಮೀಕ್ಷಾ ವರದಿ ಬಿಚ್ಚಿಟ್ಟ ಸತ್ಯ

ಭಾರತದ ರಾಜಕೀಯ ಹವಾಮಾನದಲ್ಲಿ ನಿಧಾನವಾಗಿ ಪಲ್ಲಟವಾಗುತ್ತಿರುವ ಮುನ್ಸೂಚನೆಗಳು ದಟ್ಟವಾಗಿ ಗೋಚರಿಸುತ್ತಿವೆ. ದಶಕದಿಂದ ದೇಶವನ್ನು ಮುನ್ನಡೆಸುತ್ತಿರುವ ಸರ್ಕಾರದ ಮೇಲಿನ ಭ್ರಮೆ ಕರಗುತ್ತಿದ್ದು, ಆಡಳಿತದ ಬಗ್ಗೆ ಯುವಜನರಲ್ಲಿ ಮಡುಗಟ್ಟಿರುವ ಆಕ್ರೋಶ ಸ್ಫೋಟಗೊಳ್ಳುವ ಹಂತದಲ್ಲಿದೆ. ಬೆಲೆ ಏರಿಕೆ, ನಿರುದ್ಯೋಗ, ಪರೀಕ್ಷಾ ಅಕ್ರಮಗಳು ಹಾಗೂ ಸರ್ಕಾರದ ಆರ್ಥಿಕ ನೀತಿಗಳ ಬಗ್ಗೆ ಜನಸಾಮಾನ್ಯರಲ್ಲಿ ಹತಾಶೆ ಮನೆಮಾಡಿದೆ. ಎಲ್ಲಕ್ಕೂ ಮಿಗಿಲಾಗಿ, ''ದೇಶದಲ್ಲಿ ಪ್ರಜಾಪ್ರಭುತ್ವ ಅಪಾಯದಲ್ಲಿದೆ'' ಎಂಬ ಗಂಭೀರ ಆತಂಕವನ್ನು ದೇಶದ ಶೇ 47ರಷ್ಟು ಜನರು ಆತಂಕದಿಂದ ವ್ಯಕ್ತಪಡಿಸಿದ್ದಾರೆ. ಸರ್ಕಾರದ ಪರವಾದ ಅಲೆ ನಿಧಾನವಾಗಿ ಕ್ಷೀಣಿಸುತ್ತಿದ್ದು, ಮೋದಿ ಸರ್ಕಾರದ ಜನಪ್ರಿಯತೆ ಮಂಕಾಗುತ್ತಿರುವ ಈ ಕಟು ವಾಸ್ತವಗಳನ್ನು ತೆರೆದಿಟ್ಟಿರುವುದು ದಿ ವೈರ್ ( ) ಜಾಲತಾಣವು ಪ್ರಕಟಿಸಿರುವ ಇತ್ತೀಚಿನ ಸಿ-ವೋಟರ್‌ನ ಮೂಡ್ ಆಫ್ ದ ನೇಷನ್ () ಸಮೀಕ್ಷೆಯ ವರದಿ.

ಒಂದು ವೇಳೆ ಲೋಕಸಭೆಗೆ ಈಗಲೇ ಚುನಾವಣೆ ನಡೆದರೆ, ಬಿಜೆಪಿ ಸ್ವಂತ ಬಲದ ಮೇಲೆ ಬಹುಮತ ಪಡೆಯಲು 11 ಸ್ಥಾನಗಳ ಕೊರತೆ ಎದುರಿಸಲಿದೆ ಎಂದು ಈ ಸಮೀಕ್ಷೆ ಅಂದಾಜಿಸಿದೆ. 2026ರ ಜನವರಿಯಲ್ಲಿ ನಡೆದಿದ್ದ ಇದೇ ಸಮೀಕ್ಷೆಯಲ್ಲಿ ಬಿಜೆಪಿಗೆ 287 ಸ್ಥಾನಗಳು ಸಿಗಲಿವೆ ಎಂದು ಹೇಳಲಾಗಿತ್ತು. ಆದರೆ, ಈಗ ಆ ಸಂಖ್ಯೆಯಲ್ಲಿ 26 ಸ್ಥಾನಗಳ ಭಾರಿ ಕುಸಿತ ಕಂಡಿದೆ. ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸಾಧಿಸಿರುವ ಗೆಲುವನ್ನು ಹೊರತುಪಡಿಸಿದರೆ, ಪಕ್ಷದ ಸ್ಥಾನಗಳು ಇನ್ನಷ್ಟು ಪಾತಾಳಕ್ಕೆ ಕುಸಿಯುತ್ತಿದ್ದವು. ಆದಾಗ್ಯೂ, ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್.ಡಿ.ಎ) 326 ಸ್ಥಾನಗಳೊಂದಿಗೆ ಸುಭದ್ರವಾಗಿರಲಿದೆ. ಹಾಗಾಗಿ, ಮೋದಿ ಸರ್ಕಾರಕ್ಕೆ ಸದ್ಯಕ್ಕೆ ಯಾವುದೇ ತಕ್ಷಣದ ಅಪಾಯವಿಲ್ಲದಿದ್ದರೂ, ಪಕ್ಷದ ಸ್ವಂತ ಬಲ ಗಣನೀಯವಾಗಿ ತಗ್ಗುತ್ತಿರುವುದು ಆಡಳಿತಾರೂಢರಿಗೆ ಎಚ್ಚರಿಕೆಯ ಗಂಟೆಯಾಗಿದೆ.

ಪ್ರಧಾನಿ ನರೇಂದ್ರ ಮೋದಿಯವರ ಜನಪ್ರಿಯತೆ 2024ರ ನಂತರ ಸತತವಾಗಿ ಇಳಿಮುಖವಾಗುತ್ತಿದೆ ಎಂಬುದು ಮತ್ತೊಂದು ಪ್ರಮುಖ ಅಂಶ. ಮೋದಿಯವರನ್ನು ಪ್ರಧಾನಿಯಾಗಿ ಶೇ 49ರಷ್ಟು ಜನ ಮಾತ್ರ ಬೆಂಬಲಿಸಿದ್ದು, ಅವರ ಕಾರ್ಯವೈಖರಿ ಅತ್ಯುತ್ತಮ ಎಂದವರ ಸಂಖ್ಯೆ ಶೇ 35.6 ರಿಂದ 30.1ಕ್ಕೆ ಕುಸಿದಿದೆ. ಮತ್ತೊಂದೆಡೆ, ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ಜನಪ್ರಿಯತೆ ಏರುಗತಿಯಲ್ಲಿದ್ದು, ಶೇ 27ರಷ್ಟು ಬೆಂಬಲ ಪಡೆದಿದ್ದಾರೆ. ವಿಶೇಷವೆಂದರೆ, ತಮಿಳುನಾಡು ಮುಖ್ಯಮಂತ್ರಿ ಹಾಗೂ ಟಿ.ವಿ.ಕೆ ನಾಯಕ ಸಿ. ಜೋಸೆಫ್ ವಿಜಯ್ ಅವರು ಶೇ 9.2ರಷ್ಟು ಬೆಂಬಲದೊಂದಿಗೆ ದಿಢೀರ್ ಆಗಿ ಮೂರನೇ ಸ್ಥಾನಕ್ಕೆ ಲಗ್ಗೆ ಇಟ್ಟಿದ್ದಾರೆ. ವಿರೋಧ ಪಕ್ಷಗಳ ನಾಯಕರ ಸಾಲಿನಲ್ಲಿ ಅರವಿಂದ್ ಕೇಜ್ರಿವಾಲ್, ಮಮತಾ ಬ್ಯಾನರ್ಜಿ ಮತ್ತು ಅಖಿಲೇಶ್ ಯಾದವ್ ಅವರನ್ನು ಹಿಂದಿಕ್ಕಿ ವಿಜಯ್ ಮುಂಚೂಣಿಗೆ ಬಂದಿರುವುದು ರಾಷ್ಟ್ರ ರಾಜಕಾರಣದ ಅಚ್ಚರಿಯ ಬೆಳವಣಿಗೆಯಾಗಿದೆ.

ಆರ್ಥಿಕ ನಿರ್ವಹಣೆಯ ವಿಚಾರದಲ್ಲೂ ಸರ್ಕಾರದ ವಿರುದ್ಧ ಜನಾಭಿಪ್ರಾಯ ತಿರುಗುತ್ತಿರುವುದು ಸ್ಪಷ್ಟವಾಗಿದೆ. ಮೋದಿ ಸರ್ಕಾರದ ಆರ್ಥಿಕ ನೀತಿಗಳು ಕೇವಲ ಬಂಡವಾಳಶಾಹಿಗಳಿಗೆ ಮತ್ತು ದೊಡ್ಡ ಉದ್ಯಮಿಗಳಿಗೆ ಮಾತ್ರ ಲಾಭದಾಯಕವಾಗಿವೆ ಎಂದು ಶೇ 56ರಷ್ಟು ಜನ ಕಡ್ಡಿಮುರಿದಂತೆ ಹೇಳಿದ್ದಾರೆ. ಬೆಲೆ ಏರಿಕೆಯೇ ಸರ್ಕಾರದ ಅತಿದೊಡ್ಡ ವೈಫಲ್ಯ ಎಂದು ಶೇ 23ರಷ್ಟು ಮಂದಿ ಅಭಿಪ್ರಾಯಪಟ್ಟಿದ್ದಾರೆ. ಆಸಕ್ತಿದಾಯಕ ವಿಚಾರವೆಂದರೆ, ಆರ್ಥಿಕ ನಿರ್ವಹಣೆಯಲ್ಲಿ ಮೋದಿಯವರಿಗೆ (ಶೇ 47) ಮತ್ತು ಮಾಜಿ ಪ್ರಧಾನಿ ಡಾ. ಮನಮೋಹನ್ ಸಿಂಗ್ ಅವರಿಗೆ (ಶೇ 44) ಇರುವ ಬೆಂಬಲದ ಅಂತರ ತೀರಾ ಹತ್ತಿರಕ್ಕೆ ಬಂದಿದೆ. ಇನ್ನು, ಭವಿಷ್ಯದಲ್ಲಿ ತಮ್ಮ ಆದಾಯ ಹೆಚ್ಚಾಗಲಿದೆ ಎಂದು ಕೇವಲ ಶೇ 24ರಷ್ಟು ಜನ ಮಾತ್ರ ನಂಬಿದ್ದರೆ, ಶೇ 64ರಷ್ಟು ಮಂದಿ ಆರ್ಥಿಕ ಪರಿಸ್ಥಿತಿ ಇನ್ನಷ್ಟು ಹದಗೆಡಲಿದೆ ಎಂಬ ಹತಾಶೆ ವ್ಯಕ್ತಪಡಿಸಿದ್ದಾರೆ.

ಭ್ರಷ್ಟಾಚಾರದ ವಿಚಾರದಲ್ಲಿ ಕೇಂದ್ರ ಸರ್ಕಾರವು ತೀವ್ರ ಮುಖಭಂಗ ಅನುಭವಿಸುವಂತಾಗಿದೆ. ವಿಶೇಷವಾಗಿ ಅಯೋಧ್ಯೆ ರಾಮಮಂದಿರದ ದೇಣಿಗೆಯಲ್ಲಿ ನಡೆದಿದೆ ಎನ್ನಲಾದ ಚಂದಾ ಚೋರಿ (ದೇಣಿಗೆ ಕಳ್ಳತನ) ಹಗರಣವು ಕೇಂದ್ರದ ಮೋದಿ ಸರ್ಕಾರ ಮತ್ತು ಉತ್ತರ ಪ್ರದೇಶದ ಯೋಗಿ ಆದಿತ್ಯನಾಥ್ ಸರ್ಕಾರದ ವರ್ಚಸ್ಸಿಗೆ ಭಾರಿ ಪೆಟ್ಟು ನೀಡಿದೆ ಎಂದು ಶೇ 46.6ರಷ್ಟು ಜನ ಹೇಳಿದ್ದಾರೆ. ಅಲ್ಲದೆ, ಎನ್‌ಡಿಎ ಮೈತ್ರಿಕೂಟದ 13 ವರ್ಷಗಳ ಆಡಳಿತದಲ್ಲಿ ದೇಶದಲ್ಲಿ ಭ್ರಷ್ಟಾಚಾರ ಮತ್ತಷ್ಟು ಮಿತಿಮೀರಿದೆ ಎಂದು ಸಮೀಕ್ಷೆಯಲ್ಲಿ ಪಾಲ್ಗೊಂಡ ಶೇ 43.2ರಷ್ಟು, ಅಂದರೆ ಪ್ರತಿಯೊಬ್ಬ ಎರಡನೇ ವ್ಯಕ್ತಿ, ತಮ್ಮ ತೀವ್ರ ಅಸಮಾಧಾನವನ್ನು ಹೊರಹಾಕಿದ್ದಾರೆ. ಇದು ಸರ್ಕಾರದ ಶೂನ್ಯ ಭ್ರಷ್ಟಾಚಾರದ ಪ್ರತಿಪಾದನೆಗೆ ಹಿನ್ನಡೆಯುಂಟುಮಾಡಿದೆ.

ಯುವಜನರ ಮತ್ತು ಜೆನ್-ಝೆಡ್ (-) ಪೀಳಿಗೆಯ ಆಕ್ರೋಶ ಈ ಸಮೀಕ್ಷೆಯ ಅತ್ಯಂತ ಕಳವಳಕಾರಿ ಅಂಶವಾಗಿದೆ. ಶೇ 80ಕ್ಕೂ ಹೆಚ್ಚು ಯುವಜನರು ತಮ್ಮ ಭವಿಷ್ಯದ ಬಗ್ಗೆ ತೀವ್ರ ಅನಿಶ್ಚಿತತೆ ಮತ್ತು ಆತಂಕವನ್ನು ಎದುರಿಸುತ್ತಿದ್ದಾರೆ. ದೇಶದಲ್ಲಿ ನಿರುದ್ಯೋಗ ಸಮಸ್ಯೆ ಅತ್ಯಂತ ಗಂಭೀರವಾಗಿದೆ ಎಂದು ಶೇ 70ರಷ್ಟು ಯುವಕರು ಆತಂಕ ವ್ಯಕ್ತಪಡಿಸಿದ್ದಾರೆ. ಶೇ 46ರಷ್ಟು ಯುವಜನರು, ಭಾರತವು ಸರಿಯಾದ ದಿಕ್ಕಿನಲ್ಲಿ ಸಾಗುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿರುವುದು ಸರ್ಕಾರದ ನೀತಿಗಳ ಮೇಲಿನ ಯುವಜನತೆಯ ನಂಬಿಕೆ ಸಂಪೂರ್ಣವಾಗಿ ಹುಸಿಯಾಗಿರುವುದನ್ನು ಎತ್ತಿ ತೋರಿಸುತ್ತದೆ. ಯುವ ಸಮುದಾಯವು ವ್ಯವಸ್ಥೆಯ ವಿರುದ್ಧ ತಿರುಗಿ ಬೀಳುತ್ತಿರುವ ಸ್ಪಷ್ಟ ಲಕ್ಷಣಗಳು ಗೋಚರಿಸುತ್ತಿವೆ.

ಸರ್ಕಾರಿ ನೇಮಕಾತಿ ಪರೀಕ್ಷೆಗಳ ಬಗ್ಗೆಯಂತೂ ಯುವಕರಲ್ಲಿ ತೀವ್ರ ನಿರಾಶೆ ಹಾಗೂ ಆಕ್ರೋಶ ಮಡುಗಟ್ಟಿದೆ. ಶೇ 67ರಷ್ಟು ಮಂದಿ, ಸರ್ಕಾರಿ ಪರೀಕ್ಷೆಗಳು ನ್ಯಾಯಸಮ್ಮತವಾಗಿ ನಡೆಯುತ್ತಿಲ್ಲ ಎಂದು ನೇರವಾಗಿ ದೂರಿದ್ದಾರೆ. ಇತ್ತೀಚಿನ ನೀಟ್ () ಪತ್ರಿಕೆ ಸೋರಿಕೆ ಬಿಕ್ಕಟ್ಟನ್ನು ಸರ್ಕಾರ ನಿಭಾಯಿಸಿದ ರೀತಿ ತೀರಾ ಕಳಪೆ ಎಂದು ಶೇ 53ರಷ್ಟು ಜನ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ದೆಹಲಿಯ ಜಂತರ್ ಮಂತರ್‌ನಲ್ಲಿ ಯುವಕರು ಇತ್ತೀಚೆಗೆ ನಡೆಸಿದ ಬೃಹತ್ ಪ್ರತಿಭಟನೆಗೆ ಶೇ 67ರಷ್ಟು ಜನರ ಬೆಂಬಲ ವ್ಯಕ್ತವಾಗಿದೆ. ಕೇವಲ ಶೇ 14ರಷ್ಟು ಮಂದಿ ಮಾತ್ರ ಭಾರತದಲ್ಲಿ ನಡೆಯುವ ನೇಮಕಾತಿ ಪರೀಕ್ಷೆಗಳ ಬಗ್ಗೆ ವಿಶ್ವಾಸ ಹೊಂದಿದ್ದಾರೆ ಎಂಬುದು ಆಡಳಿತ ವ್ಯವಸ್ಥೆಯ ವೈಫಲ್ಯಕ್ಕೆ ಹಿಡಿದ ಕನ್ನಡಿಯಾಗಿದೆ.

ಹೊಸದಾಗಿ ರೂಪುಗೊಂಡಿರುವ ಕಾಕ್ರೋಚ್ ಜನತಾ ಪಾರ್ಟಿ () ಬಗ್ಗೆಯೂ ಯುವಜನರು ಅಚ್ಚರಿಯ ಒಲವು ತೋರಿದ್ದಾರೆ. ಶೇ 42ರಷ್ಟು ಮಂದಿ ಈ ಸಂಘಟನೆಯು ಒಂದು ಒತ್ತಡದ ಗುಂಪಾಗಿ ಮುಂದುವರಿಯಬೇಕು ಎಂದಿದ್ದರೆ, ಶೇ 40ರಷ್ಟು ಜನ, ಒಂದು ವೇಳೆ ಸಿಜೆಪಿ ಚುನಾವಣೆಗೆ ಸ್ಪರ್ಧಿಸಿದರೆ ತಾವು ಅದಕ್ಕೇ ಮತ ಹಾಕುವುದಾಗಿ ತಿಳಿಸಿದ್ದಾರೆ. ಜಂತರ್ ಮಂತರ್ ಪ್ರತಿಭಟನೆ ಮುಗಿದ ಎರಡು ವಾರಗಳ ಬಳಿಕ, 18-35 ವಯಸ್ಸಿನ 1,270 ಯುವಕರನ್ನು ಸಂಪರ್ಕಿಸಿದಾಗ ಶೇ 53ರಷ್ಟು ಮಂದಿ ಉದ್ಯೋಗ, ಶಿಕ್ಷಣ ಮತ್ತು ಆರೋಗ್ಯ ಕ್ಷೇತ್ರಗಳನ್ನು ತಮ್ಮ ಪ್ರಮುಖ ಚುನಾವಣಾ ಆದ್ಯತೆಗಳನ್ನಾಗಿ ಪರಿಗಣಿಸಿದ್ದಾರೆ. ನಾಯಕರು ಎತ್ತುವ ನೈಜ ಸಮಸ್ಯೆಗಳೇ ತಮ್ಮ ಮತದಾನದ ನಿರ್ಧಾರವನ್ನು ಬದಲಿಸುತ್ತವೆ ಎಂದು ಯುವಕರು ಖಚಿತವಾಗಿ ಹೇಳಿದ್ದಾರೆ.

ಈ ಮೂಡ್ ಆಫ್ ದ ನೇಷನ್ ಸಮೀಕ್ಷೆಯನ್ನು ಸಿ-ವೋಟರ್ ಸಂಸ್ಥೆಯು ಜುಲೈ 1 ರಿಂದ ಆಗಸ್ಟ್ 25ರ ನಡುವೆ ನಡೆಸಿದ್ದು, ಒಟ್ಟು 1,16,644 ಜನರ ಪ್ರತಿಕ್ರಿಯೆಗಳನ್ನು ಕಲೆಹಾಕಿದೆ. ಇದರಲ್ಲಿ 25,184 ನೇರ ಸಂದರ್ಶನಗಳು ಮತ್ತು ಕಳೆದ 24 ವಾರಗಳ 91,795 ಟ್ರ್ಯಾಕರ್ ದತ್ತಾಂಶಗಳು ಸೇರಿವೆ. ಆದರೆ, ಖ್ಯಾತ ವಿಶ್ಲೇಷಕ ಯೋಗೇಂದ್ರ ಯಾದವ್ ಅವರು ಈ ಸಮೀಕ್ಷೆಯ ವಿಧಾನವನ್ನು ಟೀಕಿಸಿದ್ದಾರೆ. ಕಳೆದ ಆರು ತಿಂಗಳ ದತ್ತಾಂಶವನ್ನು ಒಟ್ಟಾಗಿ ಸರಾಸರಿ ಮಾಡುವುದರಿಂದ, ಯುವಜನರ ಇತ್ತೀಚಿನ ಪ್ರತಿಭಟನೆಗಳ ನೈಜ ಆಕ್ರೋಶ ಮರೆಯಾಗಲಿದ್ದು, ಇದು ಬಿಜೆಪಿಯ ಸೀಟುಗಳನ್ನು ವಾಸ್ತವಕ್ಕಿಂತ ಹೆಚ್ಚಾಗಿ ತೋರಿಸುವಂತೆ ಮಾಡಿದೆ. ವಾಸ್ತವದ ಆಕ್ರೋಶ ಇನ್ನಷ್ಟು ಹೆಚ್ಚಿದೆ ಎಂದು ಅವರು ವಿಶ್ಲೇಷಿಸಿದ್ದಾರೆ.

ಈ ಸಮೀಕ್ಷೆಯು ಪ್ರಧಾನಿ ಮೋದಿ ಸರ್ಕಾರಕ್ಕೆ ಎಚ್ಚರಿಕೆಯ ಸ್ಪಷ್ಟ ಸಂದೇಶವನ್ನು ರವಾನಿಸಿದೆ. ಮೈತ್ರಿಕೂಟದ ರಾಜಕೀಯ ಸ್ಥಿರತೆಯನ್ನು ಶೇ 13ರಷ್ಟು ಜನ ಸರ್ಕಾರದ ಸಾಧನೆ ಎಂದಿದ್ದರೂ; ನಿರುದ್ಯೋಗ, ಹಣದುಬ್ಬರ, ಭ್ರಷ್ಟಾಚಾರ ಮತ್ತು ಪರೀಕ್ಷಾ ಅಕ್ರಮಗಳ ವಿಚಾರದಲ್ಲಿ ಯುವಜನತೆ ಮತ್ತು ಸಾಮಾನ್ಯ ಜನರ ತಾಳ್ಮೆ ಮೀರುತ್ತಿರುವುದು ಸತ್ಯ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR